ಮೃಣಾಲ್ ಠಾಕೂರ್ ಅವರ ಬಹುನಿರೀಕ್ಷಿತ ಹೈ ಜವಾನಿ ಇಸ್ಕ್ ಹೋ ಸಿನಿಮಾ ಇಂದು ವಿಶ್ವದಾದ್ಯಂತ ತೆರೆಕಾಣುತ್ತಿದೆ. ಜೊತೆಗೆ ಸಾಮಾಜಿಕ ಜಾಲತಾಣದಲ್ಲೂ ಈ ಕುರಿತ ಟ್ರೈಲರ್ ಮತ್ತು ಪೋಸ್ಟರ್‌ಗಳು ವೈರಲ್ ಆಗಿದ್ದವು. ಸಿನಿಮಾ ಎಷ್ಟರ ಮಟ್ಟಿಗೆ ಕಲೆಕ್ಷನ್ ಮಾಡುತ್ತದೆ ಎಂಬುದನ್ನು ಕಾದುನೋಡಬೇಕಿದೆ.




BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

prabhavaa.com

RNI KARKAN2011/44806

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ




ಸಂಪಾದಕ
ಗಂಡಸಿ ಸದಾನಂದಸ್ವಾಮಿ




ಜವಾಹರಲಾಲ್ ನೆಹರು ಅವರು ದೇಶದ ಮೊದಲ ಸಾರ್ವತ್ರಿಕ ಚುನಾವಣೆಯ ನಂತರ ಅಂದರೆ, 1952 ರ ಮೇ 13 ರಿಂದ 1964 ರ ಮೇ 27ರಂದು ನಿಧನರಾಗುವವರೆಗೂ ಚುನಾಯಿತ ಪ್ರಧಾನಿಯಾಗಿ ಒಟ್ಟು 4,398ದಿನಗಳ ಕಾಲ ಸೇವೆ ಸಲ್ಲಿಸಿದ್ದರು. ಇದೇ ಪಟ್ಟಿಯಲ್ಲಿ ನೆಹರೂ ಅವರ ಪುತ್ರಿ ಇಂದಿರಾ ಗಾಂಧಿ ಅವರು4077 ದಿನಗಳ ಕಾಲ (1966 ರಿಂದ 1977ರವರೆಗೆ) ಸತತ ಅಧಿಕಾರ ನಡೆಸಿ ಮೂರನೇ ಸ್ಥಾನದಲ್ಲಿದ್ದಾರೆ. ಜವಾಹರಲಾಲ್ ನೆಹರು ಮತ್ತು ನರೇಂದ್ರ ಮೋದಿ ಇಬ್ಬರೂ ತಮ್ಮದೇ ಆದ ಶೈಲಿಯಲ್ಲಿ ಭಾರತೀಯ ರಾಜಕಾರಣದ ದಿಕ್ಕನ್ನು ಬದಲಿಸಿದ ಧೀಮಂತ ನಾಯಕರಾಗಿದ್ದಾರೆ.

# 10ರಂದು ದಾಖಲೆ ಬರೆಯಲಿರುವ ಮೋದಿ

ನವದೆಹಲಿ: ಭಾರತದ ರಾಜಕೀಯ ಇತಿಹಾಸದಲ್ಲಿ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹ ಮಹತ್ತರ ಮೈಲಿಗಲ್ಲೊಂದು ಜೂನ್ 10ರಂದು ನಿರ್ಮಾಣವಾಗಲಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ಭಾರತದಲ್ಲಿ ಅತ್ಯಂತ ದೀರ್ಘಾವಧಿ ಅಧಿಕಾರ ನಡೆಸಿದ ಪ್ರಧಾನಿ ಎಂಬ ಅಭೂತಪೂರ್ವ ಹೆಗ್ಗಳಿಕೆಗೆ ಪಾತ್ರರಾಗಲಿದ್ದಾರೆ. 1951–52 ರ ದೇಶದ ಮೊದಲ ಸಾರ್ವತ್ರಿಕ ಚುನಾವಣೆಗೂ ಮುನ್ನ ಇದ್ದ ಮಧ್ಯಂತರ ಅವಧಿಯನ್ನು ಹೊರತುಪಡಿಸಿ, ಕೇವಲ ಚುನಾಯಿತ ಸರ್ಕಾರದ ದಿನಗಳನ್ನು ಲೆಕ್ಕ ಹಾಕಿದಾಗ ಪ್ರಧಾನಿ ಮೋದಿ ಅವರು ಕಾಂಗ್ರೆಸ್ ದಿಗ್ಗಜ, ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ಸುದೀರ್ಘ ದಾಖಲೆಯನ್ನು ಮುರಿಯಲಿದ್ದಾರೆ.

ದಾಖಲೆಯ ದಿನಗಳ ಲೆಕ್ಕಾಚಾರ ಹೀಗಿದೆ 2014 ರ ಮೇ 26 ರಂದು ದೇಶದ ಪ್ರಧಾನಿಯಾಗಿ ಮೊದಲ ಬಾರಿಗೆ ಪ್ರಮಾಣ ವಚನ ಸ್ವೀಕರಿಸಿದ ನರೇಂದ್ರ ಮೋದಿ ಅವರು, 2026 ರ ಜೂನ್ 10ರ ವೇಳೆಗೆ ಸತತವಾಗಿ



4,399 ದಿನಗಳ ಕಾಲ ಅಧಿಕಾರ ಪೂರೈಸಿದಂತಾಗುತ್ತದೆ.

ಜವಾಹರಲಾಲ್ ನೆಹರು ಅವರು ದೇಶದ ಮೊದಲ ಸಾರ್ವತ್ರಿಕ ಚುನಾವಣೆಯ ನಂತರ ಅಂದರೆ, 1952 ರ ಮೇ 13 ರಿಂದ 1964 ರ ಮೇ 27ರಂದು ನಿಧನರಾಗುವವರೆಗೂ ಚುನಾಯಿತ ಪ್ರಧಾನಿಯಾಗಿ ಒಟ್ಟು 4,398ದಿನಗಳ ಕಾಲ ಸೇವೆ ಸಲ್ಲಿಸಿದ್ದರು.

ಇದೇ ಪಟ್ಟಿಯಲ್ಲಿ ನೆಹರೂ ಅವರ ಪುತ್ರಿ ಇಂದಿರಾ ಗಾಂಧಿ ಅವರು4077 ದಿನಗಳ ಕಾಲ (1966 ರಿಂದ 1977ರವರೆಗೆ) ಸತತ ಅಧಿಕಾರ ನಡೆಸಿ ಮೂರನೇ ಸ್ಥಾನದಲ್ಲಿದ್ದಾರೆ.

ಜವಾಹರಲಾಲ್ ನೆಹರು ಮತ್ತು ನರೇಂದ್ರ ಮೋದಿ ಇಬ್ಬರೂ ತಮ್ಮದೇ ಆದ ಶೈಲಿಯಲ್ಲಿ ಭಾರತೀಯ ರಾಜಕಾರಣದ ದಿಕ್ಕನ್ನು ಬದಲಿಸಿದ ಧೀಮಂತ ನಾಯಕರಾಗಿದ್ದಾರೆ. ನೆಹರೂ ಅವರು ಸ್ವಾತಂತ್ರ್ಯೋತ್ತರ ಭಾರತದಲ್ಲಿ 'ಜಾತ್ಯತೀತ ಒಮ್ಮತ'ದ ಆಧಾರದ ಮೇಲೆ ದಶಕಗಳ ಕಾಲ ದೇಶವನ್ನು ಮುನ್ನಡೆಸಿದರೆ, ಪ್ರಧಾನಿ ಮೋದಿ ಅವರು ಸಾಂಸ್ಕೃತಿಕ ರಾಷ್ಟ್ರೀಯತೆ ಮತ್ತು ತೇಜಸ್ವಿ ಅಭಿವೃದ್ಧಿಯ ಹೊಸ ಮಿಶ್ರಣದ ಮೂಲಕ ಭಾರತದ ರಾಜಕೀಯ ವ್ಯಾಕರಣವನ್ನೇ ಪುನಃ ಬರೆದಿದ್ದಾರೆ.

ತೀವ್ರ ಪೈಪೋಟಿಯ ಇಂದಿನ ರಾಜಕೀಯ ವಾತಾವರಣದಲ್ಲೂ ಸತತ ಮೂರು ಬಾರಿ ಭಾರಿ ಜನಾದೇಶದೊಂದಿಗೆ ಗೆದ್ದು ಬಂದಿರುವುದು ಮೋದಿ ಅವರ ನಾಯಕತ್ವದ ಶಕ್ತಿಯನ್ನು ತೋರಿಸುತ್ತದೆ.

ಐತಿಹಾಸಿಕ ಸುಧಾರಣೆಗಳು ಮತ್ತು ದೃಢ ನಿರ್ಧಾರಗಳ ಕಾಲ ಪ್ರಧಾನಿ ನರೇಂದ್ರ ಮೋದಿ ಅವರ ಈ ಸುದೀರ್ಘ ಅಧಿಕಾರಾವಧಿಯು ಭಾರತದ ಸಾರ್ವಭೌಮತೆ ಮತ್ತು ಆಡಳಿತಾತ್ಮಕ ಸುಧಾರಣೆಗಳಿಗೆ ಹೊಸ ಭಾಷ್ಯ ಬರೆದಿದೆ. ಸ್ವಾತಂತ್ರ್ಯದ ನಂತರ ದಶಕಗಳ ಕಾಲ ನೆನೆಗುದಿಗೆ ಬಿದ್ದಿದ್ದ ಅನೇಕ ಐತಿಹಾಸಿಕ ನಿರ್ಧಾರಗಳು ಇವರ ಅವಧಿಯಲ್ಲಿ ಯಶಸ್ವಿಯಾಗಿ ಕಾರ್ಯರೂಪಕ್ಕೆ ಬಂದಿವೆ.

370 ನೇ ವಿಧಿ ರದ್ದು: ಜಮ್ಮು–ಕಾಶ್ಮೀರಕ್ಕೆ ನೀಡಲಾಗಿದ್ದ ವಿಶೇಷ ಸ್ಥಾನಮಾನವನ್ನು ರದ್ದುಗೊಳಿಸಿ, ಅದನ್ನು ಭಾರತದ ಮುಖ್ಯವಾಹಿನಿಯೊಂದಿಗೆ ಸಂಪೂರ್ಣವಾಗಿ ಬೆಸೆದಿರುವುದು ತಂತ್ರಜ್ಞಾನ ಮತ್ತು ಭದ್ರತೆಯ ದೃಷ್ಟಿಯಿಂದ ದೇಶಕ್ಕೆ ಸಿಕ್ಕ ಬಹುದೊಡ್ಡ ಯಶಸ್ಸಾಗಿದೆ.

# ಕಾಂಗ್ರೆಸ್‌ನಿಂದ ಒಬಿಸಿಗೆ ಬಂಪರ್

ಬೆಂಗಳೂರು: ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿದ ಬಳಿಕ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ನಿನ್ನೆಯಷ್ಟೇ ಪ್ರಮಾಣವಚನ ಸ್ವೀಕರಿಸಿದ್ದಾರೆ. ಅವರ ಜೊತೆಗೆ 13 ಜನ ಸಚಿವರಾಗಿಯೂ ಪ್ರತಿಜ್ಞಾವಿಧಿ ಪಡೆದಿದ್ದಾರೆ. ಹೀಗಿದ್ದರೂ ಸಿಎಂ ಕುರ್ಚಿಯಿಂದ ಸಿದ್ದರಾಮಯ್ಯರನ್ನು ಇಳಿಸಿರುವುದು ಪಕ್ಷಕ್ಕೆ ಯಾವುದಾದರೂ ರೀತಿಯಲ್ಲಿ ಹೊಡೆತ ನೀಡಬಹುದೆಂಬ ಆತಂಕ ಕಾಂಗ್ರೆಸ್ ಹೈಕಮಾಂಡ್‌ಗಿದೆ. ಹೀಗಾಗಿಯೇ ಭಾರಿ ಲೆಕ್ಕಾಚಾರ ಹಾಕಿರುವ ವರಿಷ್ಠರು ಒಬಿಸಿಗಳಿಗೆ ಬಂಪರ್ ನೀಡಿದ್ದಾರೆ.

ಒಬಿಸಿಗೆ ಸೇರಿರುವ ಸಿದ್ದರಾಮಯ್ಯ ಅವರ ಪದತ್ಯಾಗದ ಬೆನ್ನಲ್ಲೇ ಕಾಂಗ್ರೆಸ್ ಹೈಕಮಾಂಡ್ ಮಹತ್ವದ ನಿರ್ಣಯ ಕೈಗೊಂಡಿದೆ. ರಾಜ್ಯದಲ್ಲಿ ನಡೆಯಲಿರುವ ಪರಿಷತ್ ಚುನಾವಣೆ ನಾಲ್ವರು ಅಭ್ಯರ್ಥಿಗಳನ್ನು ಘೋಷಿಸಿದ್ದು, ಅವರೆಲ್ಲರೂ ಒಬಿಸಿಗೆ ಸೇರಿದವರೆ ಎನ್ನುವುದು ವಿಶೇಷ.

ಅಭ್ಯರ್ಥಿಗಳು ಮತ್ತು ಸಮುದಾಯ
ಹರಿಪ್ರಸಾದ್– ಈಡಿಗ ಬಿಲ್ಲವ
ಪಿವಿ ಮೋಹನ್ – ಬಿಲ್ಲವ
ಶಿವಣ್ಣ ಮಳವಳ್ಳಿ – ಕುರುಬ
ತಿಪ್ಪಣ್ಣಪ್ಪ ಕಮಕನೂರು – ಕೋಲಿ (ಕಬ್ಬಲಿಗ/ಗಂಗಾಮತ)

ಇಷ್ಟೇ ಅಲ್ಲದೆ ನಿನ್ನೆ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ 13 ಮಂದಿಯ ಪೈಕಿ ಯತೀಂದ್ರ ಸಿದ್ದರಾಮಯ್ಯ ಮತ್ತು ಬೈರತಿ ಸುರೇಶ್ ಕೂಡ ಇದೇ ಒಬಿಸಿಗೆ ಸೇರಿದವರಾಗಿದ್ದಾರೆ. ವಿಧಾನ ಪರಿಷತ್ ಚುನಾವಣೆ ಅಭ್ಯರ್ಥಿಯ ಜೊತೆಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನೂ ಬಿ.ಕೆ. ಹರಿಪ್ರಸಾದ್‌ಗೆ ನೀಡಿರುವುದು ಸಿದ್ದರಾಮಯ್ಯ ಪದತ್ಯಾಗದ ಬಳಿಕ ಪರ್ಯಾಯ ನಾಯಕತ್ವಕ್ಕೆ ಕಾಂಗ್ರೆಸ್ ಹೈಕಮಾಂಡ್ ಹೆಚ್ಚಿನ ಒತ್ತು ನೀಡುತ್ತಿದೆ ಎಂಬುದಕ್ಕೆ ಸ್ಪಷ್ಟ ಉದಾಹರಣೆ ಎಂಬಂತಿದೆ. ಸಿಎಂ ಸ್ಥಾನದಿಂದ ಸಿದ್ದರಾಮಯ್ಯ ಅವರನ್ನು ಇಳಿಸಿದ ಬಳಿಕ ಅದರಿಂದ ಪಕ್ಷಕ್ಕೆ ಯಾವುದೇ ಡ್ಯಾಮೇಜ್ ಆಗದಂತೆ ಮತ್ತು ವೋಟ್ ಬ್ಯಾಂಕ್ ಕೈ ತಪ್ಪದಂತೆ ಆರಂಭದಿಂದಲೂ ಹೈಕಮಾಂಡ್ ನಾಯಕರು ತಂತ್ರ ರೂಪಿಸಿದ್ದರು. ಹೀಗಾಗಿ ಇವುಗಳೆಲ್ಲವೂ ಅದರದೇ ಭಾಗ ಎಂಬ ಮಾತುಗಳೀಗ ಕೇಳಿಬಂದಿವೆ.

# ಇಂದಿನಿಂದ ವಿದ್ಯಾರ್ಥಿಗಳಿಗೆ ಉಚಿತ ಬಸ್

ಬೆಂಗಳೂರು: ರಾಜ್ಯದ ಎಲ್ಲಾ ಶಾಲಾ, ಕಾಲೇಜುಗಳಲ್ಲಿನ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯ ವಿಸ್ತರಿಸುವುದಾಗಿ ರಾಜ್ಯ ಸರ್ಕಾರ ಇಂದು ಅಧಿಕೃತ ಆದೇಶ ಹೊರಡಿಸಿದೆ.

ಕರ್ನಾಟಕದ ಮುಖ್ಯಮಂತ್ರಿಯಾಗಿ ಬುಧವಾರ (ಜೂ.3) ತಮ್ಮ ಮೊದಲ ಸಚಿವ ಸಂಪುಟ ಸಭೆ ನಡೆಸಿದ ಡಿಕೆ ಶಿವಕುಮಾರ್, ಹಲವು ಮಹತ್ವದ ತೀರ್ಮಾನಗಳನ್ನು ಪ್ರಕಟಿಸಿದ್ದರು. ಈ ಪೈಕಿ ರಾಜ್ಯದ ಎಲ್ಲಾ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಗೆ ಸರ್ಕಾರಿ ಬಸ್‌ನಲ್ಲಿ ಉಚಿತ ಬಸ್ ಪಾಸ್ ತೀರ್ಮಾನ ಪ್ರಕಟಿಸಿದ್ದರು. ಈ ಕುರಿತು ಇಂದು ಸರ್ಕಾರ ಅಧಿಕೃತ ಆದೇಶ ಹೊರಿಡಿಸಿದೆ.

ರಾಜ್ಯದ 4 ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಸಾರಿಗೆ ಮತ್ತು ಕಲ್ಯಾಣ ಕರ್ನಾಟಕ ಸಾರಿಗೆ ನಿಗಮಗಳ ಬಸ್‌ಗಳಲ್ಲಿ ಪ್ರಯಾಣಿಸುವ ರಾಜ್ಯದ ಎಲ್ಲಾ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯ ವಿಸ್ತರಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಈ ಯೋಜನೆಯ ಅನುಷ್ಠಾನದ ಬಗ್ಗೆ ವಿವರವಾದ ಷರತ್ತು ಮತ್ತು ನಿಬಂಧನೆಗಳನ್ನ ಪ್ರತ್ಯೇಕವಾಗಿ ಹೊರಡಿಸಲಾಗುವುದು ಎಂದು ಸರ್ಕಾರದ ಅಧೀನ ಕಾರ್ಯದರ್ಶಿ ಪುಷ್ಪ ವಿ.ಎಸ್ ಆದೇಶದಲ್ಲಿ ತಿಳಿಸಿದ್ದಾರೆ.

# ತುಮಕೂರು ವಿವಿಯಲ್ಲಿ ಚಿನ್ನದ ಪದಕದ ಹಣ ಗುಳುಂ..?

ತುಮಕೂರು: ತುಮಕೂರು ವಿಶ್ವವಿದ್ಯಾಲಯದ 19ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾರಿ ಕಳ್ಳಾಟ ನಡೆದಿದೆ. ವರ್ಷಗಟ್ಟಲೆ ಕಷ್ಟಪಟ್ಟು ಓದಿ ಪ್ರಥಮ ಸ್ಥಾನ ಗಳಿಸಿ, ಚಿನ್ನದ ಪದಕ ಪಡೆಯುವ ಕನಸು ಹೊತ್ತು ಬಂದಿದ್ದ ನೂರಾರು ರ್‍ಯಾಂಕ್ ವಿದ್ಯಾರ್ಥಿಗಳ ಆಸೆಗೆ ವಿಶ್ವವಿದ್ಯಾಲಯವು ತಣ್ಣೀರೆರಚಿದೆ.

ಚಿನ್ನದ ಪದಕ ನೀಡುವ ಬದಲು ಕೇವಲ ಪ್ರಮಾಣ ಪತ್ರ ಮತ್ತು ನಗದು ಹಣದ ಚೆಕ್ ನೀಡಿ ಕೈತೊಳೆದುಕೊಳ್ಳಲು ಮುಂದಾದ ವಿವಿಯ ನಡೆಗೆ ವಿದ್ಯಾರ್ಥಿಗಳು ಹಾಗೂ ಪೋಷಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರೆ ಅಧಿಕಾರಿಗಳೇ ಚಿನ್ನದ ಪದಕದ ಹಣ ಗುಳುಂ ಮಾಡಿದ್ದಾರಾ ಎಂಬ ಸಂದೇಹವೂ ವ್ಯಕ್ತವಾಗಿದೆ.

ನಿನ್ನೆ ವಿಶ್ವವಿದ್ಯಾಲಯದ ಆವರಣದಲ್ಲಿ ಘಟಿಕೋತ್ಸವ ನಡೆಯುತ್ತಿದ್ದಾಗಲೇ ಈ ಗೊಂದಲ ಸೃಷ್ಟಿಯಾಗಿದೆ.

ತಮಗೆ ಚಿನ್ನದ ಪದಕ ನೀಡದಿದ್ದನ್ನು ಕಂಡು ರೊಚ್ಚಿಗೆದ್ದ ರ್‍ಯಾಂಕ್ ವಿದ್ಯಾರ್ಥಿಗಳು, ಸಮಾರಂಭ ನಡೆಯುತ್ತಿದ್ದ ಸ್ಥಳದಲ್ಲೇ ಪ್ರತಿಭಟನೆಗೆ ಕೂತರು. "ನಮಗೆ ನಗದು ಹಣ ಬೇಡವೇ ಬೇಡ, ನಮ್ಮ ಸಾಧನೆಗೆ ಸಿಗಬೇಕಾದ ಚಿನ್ನದ ಪದಕವೇಬೇಕು. ನಾವು ನಿಗದಿತ ಶುಲ್ಕ ಪಾವತಿಸಿದ್ದರೂ ನಮಗೆ ಪದಕ ನೀಡಿಲ್ಲ" ಎಂದು ಕಿಡಿಕಾರಿದರು. ವಿದ್ಯಾರ್ಥಿಗಳ ಆಕ್ರೋಶದ ಹಿನ್ನೆಲೆಯಲ್ಲಿ ಘಟಿಕೋತ್ಸವ ಸಮಾರಂಭವು ಕೆಲವು ನಿಮಿಷಗಳ ಕಾಲ ಸ್ಥಗಿತಗೊಂಡಿತ್ತು. ಮಕ್ಕಳ ಸಾಧನೆಯ ಸಂಕೇತವಾದ ಪದಕ ಸಿಗದಿರುವುದನ್ನು ಕಂಡು




ಪೋಷಕರೂ ಕೂಡ ತೀವ್ರ ಬೇಸರ ವ್ಯಕ್ತಪಡಿಸಿದರು.

ಇನ್ನು ವಿಶ್ವವಿದ್ಯಾಲಯವು ಪದವಿ ಪ್ರಮಾಣ ಪತ್ರಗಳನ್ನು ಬೇಕಾಬಿಟ್ಟಿಯಾಗಿ ನೀಡಿದೆ ಎಂದು ವಿದ್ಯಾರ್ಥಿಗಳು ಗಂಭೀರ ಆರೋಪ ಮಾಡಿದ್ದಾರೆ. ಕಳೆದ 17 ಮತ್ತು 18ನೇ ಘಟಿಕೋತ್ಸವದ ಹಳೆಯ ಫೈಲ್‌ಗಳಲ್ಲೇ ಇಂದಿನ ಪ್ರಮಾಣ ಪತ್ರಗಳನ್ನು ಇಟ್ಟು ಕೊಡಲಾಗಿದೆ.

ಪದಕ ನೀಡಲು ವಿವಿಗೆ ಸಾಧ್ಯವಿರಲಿಲ್ಲ ಎಂದರೆ ಘಟಿಕೋತ್ಸವವನ್ನೇ ಮುಂದೂಡಬಹುದಿತ್ತಲ್ಲವೇ? ಎಂದು ವಿದ್ಯಾರ್ಥಿಗಳು ಪ್ರಶ್ನಿಸಿದ್ದಾರೆ. "ಪದಕ ಸಿಗುವವರೆಗೂ ನಾವು ಈ ಸ್ಥಳದಿಂದ ಕದಲುವುದಿಲ್ಲ" ಎಂದು ಪಟ್ಟು ಹಿಡಿದು ವಿದ್ಯಾರ್ಥಿಗಳು ಕಾದು ಕುಳಿತಿದ್ದರು.

ಸ್ಥಳದಲ್ಲಿ ಪರಿಸ್ಥಿತಿ ಕೈಮೀರುತ್ತಿರುವುದನ್ನು ಅರಿತ ವಿಶ್ವವಿದ್ಯಾಲಯದ ಕುಲಪತಿಗಳು ಹಾಗೂ ಹಿರಿಯ ಅಧಿಕಾರಿಗಳು ತಕ್ಷಣವೇ ವಿದ್ಯಾರ್ಥಿಗಳ ಮನವೊಲಿಸುವ ಕಾರ್ಯಕ್ಕೆ ಮುಂದಾದರು. ಪ್ರಸ್ತುತ ನೀಡಿರುವ ಚೆಕ್ ಬದಲಿಗೆ ಶೀಘ್ರದಲ್ಲೇ ಅಧಿಕೃತವಾಗಿ ಚಿನ್ನದ ಪದಕಗಳನ್ನೇ ಮಾಡಿಸಿಕೊಡುವುದಾಗಿ ಅಧಿಕಾರಿಗಳು ಲಿಖಿತ ಭರವಸೆ ನೀಡಿದರು. ಅಧಿಕಾರಿಗಳ ಈ ಭರವಸೆಯ ಬಳಿಕ ವಿದ್ಯಾರ್ಥಿಗಳು ಹಾಗೂ ಪೋಷಕರು ಪ್ರತಿಭಟನೆಯನ್ನು ಕೈಬಿಟ್ಟು ಅಲ್ಲಿಂದ ತೆರಳಿದರು.



"ವಿಧಾನ ಪರಿಷತ್ ಅಭ್ಯರ್ಥಿಗಳು ಕೂಡ ನಾಮಪತ್ರ ಸಲ್ಲಿಸಲಿದ್ದು, ನಾವು ಐವರು ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸುತ್ತಿದ್ದು, ಈಗಾಗಲೇ ನಾಲ್ವರು ಅಭ್ಯರ್ಥಿಗಳನ್ನು ಘೋಷಿಸಿದ್ದು, ಐದನೇ ಅಭ್ಯರ್ಥಿ ನಾಳೆ ಪ್ರಕಟಿಸಲಾಗುವುದು" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ವಿಧಾನಸೌಧದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು.

# ಸಂಪುಟದಲ್ಲಿ ಭರ್ಜರಿ ಕೊಡುಗೆ

ಬೆಂಗಳೂರು: ಡಿಕೆ ಶಿವಕುಮಾರ್ ಅವರು ಬುಧವಾರ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಬೆನ್ನಲ್ಲೇ ರಾಜ್ಯದ ವಿದ್ಯಾರ್ಥಿಗಳಿಗೆ ಸಿಹಿ ಸುದ್ದಿ ನೀಡಿದ್ದು, ಎಲ್ಲಾ ಶಾಲಾ, ಕಾಲೇಜ್ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡುವುದಾಗಿ ಘೋಷಣೆ ಮಾಡಿದ್ದಾರೆ.

ಬುಧವಾರ ಸಂಜೆ ವಿಧಾನಸೌಧದಲ್ಲಿ ನಡೆದ ತಮ್ಮ ನೇತೃತ್ವದ ಮೊದಲ ಸಚಿವ ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಡಿಕೆ ಶಿವಕುಮಾರ್ ಅವರು, ರಾಜ್ಯದಲ್ಲಿ ಹೊಸ ಯುಗ ಆರಂಭಿಸಲು, ನಾವು ಮೊದಲ ಸಚಿವ ಸಂಪುಟ ಸಭೆಯಲ್ಲಿ ಕೆಲವು ಮಹತ್ವದ ನಿರ್ಧಾರಗಳನ್ನು ತೆಗೆದುಕೊಂಡಿದ್ದೇವೆ ಎಂದರು.

ರಾಜ್ಯದಲ್ಲಿ ಇನ್ಮುಂದೆ ವಿದ್ಯಾರ್ಥಿನಿಯರಂತೆ ಎಲ್ಲಾ ಶಾಲಾ, ಕಾಲೇಜ್ ವಿದ್ಯಾರ್ಥಿಗಳಿಗೂ ಕೂಡ ಉಚಿತ ಬಸ್ ಪಾಸ್ ನೀಡಲಾಗುವುದು. ಶೈಕ್ಷಣಿಕ ವರ್ಷ ಆರಂಭವಾಗಿದ್ದು, ಇದಕ್ಕಾಗಿ ಸಂಬಂಧಪಟ್ಟ ಅರ್ಜಿ ವಿತರಣೆಯ ಬಗ್ಗೆ ಸಾರಿಗೆ ಇಲಾಖೆಯು ಸದ್ಯದಲ್ಲಿಯೇ ಕ್ರಮ ಕೈಗೊಳ್ಳಲಿದೆ ಎಂದರು.

ಯುವಕರಲ್ಲಿ ನಾಯಕತ್ವ ಗುಣ ಬೆಳೆಸುವ ಉದ್ದೇಶದಿಂದ ರಾಜ್ಯದ ಪ್ರತಿ ಗ್ರಾಮ ಪಂಚಾಯಿತಿಯಲ್ಲಿ 'ಭಾರತ್ ಜೋಡೋ ಯುವಕ ಸಂಘ' ರಚನೆ ಮಾಡುವ ಚಿಂತನೆ ಇದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. ರಾಜ್ಯದಲ್ಲಿ ಉದ್ಯೋಗದ ಸಮಸ್ಯೆಯನ್ನು ನೀಗಿಸುವ ದಿಸೆಯಲ್ಲಿ ಸರ್ಕಾರ, ಈಗಾಗಲೇ 56,000 ಹುದ್ದೆಗಳನ್ನು ಭರ್ತಿಗೊಳಿಸುವ ನಿರ್ಣಯವನ್ನು ಕೈಗೊಂಡಿದೆ. ಖಾಸಗಿ ರಂಗದಲ್ಲಿ ಉದ್ಯೋಗ ಬಯಸುವ ಯುವಜನರಿಗೆ ಹಾಗೂ ಖಾಸಗಿ ಕಂಪನಿಗಳ ಉದ್ಯೋಗದ ಬೇಡಿಕೆಗಳ ನಡುವೆ ಸಂಪರ್ಕ ಕಲ್ಪಿಸುವ 'ಯುವ ಉದ್ಯೋಗ ಸೇತು' ವ್ಯವಸ್ಥೆಯನ್ನು ರೂಪಿಸಲು ನಿರ್ಣಯಿಸಲಾಗಿದೆ.

ಈ ಸೌಲಭ್ಯ ಕೇಂದ್ರದಲ್ಲಿ ಕಂಪನಿಗಳಿಗೆ ಅಗತ್ಯವಿರುವ ತರಬೇತಿಯನ್ನೂ ನೀಡಿ, ಅಲ್ಲಿನ ಅಭ್ಯರ್ಥಿಗಳನ್ನು ಕಂಪನಿಗಳಿಗೆ ಆಯ್ಕೆ ಮಾಡಲಾಗುವುದು.

ಸಚಿವ ರಾಮಲಿಂಗಾರೆಡ್ಡಿ ಬೆಂಗಳೂರು ನಗರಾಭಿವೃದ್ಧಿ ಖಾತೆಗೆ ಪಟ್ಟು ಹಿಡಿದಿದ್ದು, ಅವರಿಗೆ ಜಲಸಂಪನ್ಮೂಲ ಇಲಾಖೆ ನೀಡಲು ತೀರ್ಮಾನಿಸಲಾಗಿದೆ. ಆದರೆ, ಇದಕ್ಕೆ ಒಲ್ಲದ ರೆಡ್ಡಿ ತನಗೆ ಬೆಂಗಳೂರು ನಗರಾಭಿವೃದ್ಧಿ ಖಾತೆಯೇ ಬೇಕು ಎಂದು ಒತ್ತಾಯಿಸಿದ್ದಾರೆ. ಜಲಸಂಪನ್ಮೂಲ ಖಾತೆ ನೀಡಿದರೆ ಅದನ್ನು ನಿಭಾಯಿಸುವುದು, ಪ್ರವಾಸ ಮಾಡುವುದು ಕಷ್ಟವಾಗುತ್ತದೆ. ಹಾಗಾಗಿ, ಬೆಂಗಳೂರು ನಗರಾಭಿವೃದ್ಧಿ ಖಾತೆ ಬೇಕು. ಈ ಖಾತೆ ಕೊಡುವುದಾಗಿ 2023ರಲ್ಲೇ ಡಿಕೆಶಿ ಭರವಸೆ ನೀಡಿದ್ದರು. ಅದರಂತೆ ಇದೇ ಖಾತೆಯೇ ನೀಡಬೇಕು.

# ರಾಮಲಿಂಗಾರೆಡ್ಡಿ ರಾಜೀನಾಮೆ?

ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ನೂತನ ಸಚಿವ ಸಂಪುಟದಲ್ಲಿ ಖಾತೆಯ ಕ್ಯಾತೆ ಉಂಟಾಗಿದೆ. ಇಂಥದ್ದೇ ಖಾತೆ ಬೇಕೆಂದು ಸಚಿವರುಗಳು ಪಟ್ಟು ಹಿಡಿದಿದ್ದು ಬಿಕ್ಕಟ್ಟು ತಲೆದೋರಿದೆ. ಸಚಿವ ರಾಮಲಿಂಗಾರೆಡ್ಡಿ ಅವರು ಬೆಂಗಳೂರು ನಗರಾಭಿವೃದ್ಧಿ ಖಾತೆಗೆ ಪಟ್ಟು ಹಿಡಿದಿದ್ದು, ಇಲ್ಲವಾದರೆ ರಾಜೀನಾಮೆ ನೀಡುವ ಎಚ್ಚರಿಕೆ ನೀಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.



13 ಸಚಿವರಿಗೆ ಖಾತೆ ಹಂಚಿಕೆ ಮಾಡುವುದಾಗಿ ಸಿಎಂ ತಿಳಿಸಿದ್ದರು. ಆದರೆ, ಖಾತೆ ಸಮಸ್ಯೆ ಉಲ್ಬಣಿಸಿದ್ದು, ಖಾತೆ ಹಂಚಿಕೆ ತೀರ್ಮಾನ ವಿಳಂಬವಾಗುತ್ತಿದೆ. ಈ ಸಂಬಂಧ ಸಿಎಂ ಡಿಕೆಶಿ ಮಾಜಿ ಸಿಎಂ ಸಿದ್ದರಾಮಯ್ಯನವರೊಂದಿಗೆ ಸಭೆ ನಡೆಸುತ್ತಿದ್ದಾರೆ ಎಂದು ತಿಳಿದು ಬಂದಿದೆ.

ಸಚಿವ ರಾಮಲಿಂಗಾರೆಡ್ಡಿ ಬೆಂಗಳೂರು ನಗರಾಭಿವೃದ್ಧಿ ಖಾತೆಗೆ ಪಟ್ಟು ಹಿಡಿದಿದ್ದು, ಅವರಿಗೆ ಜಲಸಂಪನ್ಮೂಲ ಇಲಾಖೆ ನೀಡಲು ತೀರ್ಮಾನಿಸಲಾಗಿದೆ. ಆದರೆ, ಇದಕ್ಕೆ ಒಲ್ಲದ ರೆಡ್ಡಿ ತನಗೆ ಬೆಂಗಳೂರು ನಗರಾಭಿವೃದ್ಧಿ ಖಾತೆಯೇ ಬೇಕು ಎಂದು ಒತ್ತಾಯಿಸಿದ್ದಾರೆ. ಜಲಸಂಪನ್ಮೂಲ ಖಾತೆ ನೀಡಿದರೆ ಅದನ್ನು ನಿಭಾಯಿಸುವುದು, ಪ್ರವಾಸ ಮಾಡುವುದು ಕಷ್ಟವಾಗುತ್ತದೆ. ಹಾಗಾಗಿ, ಬೆಂಗಳೂರು ನಗರಾಭಿವೃದ್ಧಿ ಖಾತೆ ಬೇಕು. ಈ ಖಾತೆ ಕೊಡುವುದಾಗಿ 2023ರಲ್ಲೇ ಡಿಕೆಶಿ ಭರವಸೆ ನೀಡಿದ್ದರು. ಅದರಂತೆ ಇದೇ ಖಾತೆಯೇ ನೀಡಬೇಕು. ಇಲ್ಲವಾದರೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಸ್ಪಷ್ಟ ನಿಲುವು ತಿಳಿಸಿದ್ದಾರೆ ಎಂದು ಹೇಳಲಾಗಿದೆ.

ಡಿಸಿಎಂ ಜಿ.ಪರಮೇಶ್ವರ್ ಅವರು ಕಂದಾಯ ಇಲಾಖೆ ನೀಡುವಂತೆ ಪಟ್ಟು ಹಿಡಿದಿದ್ದಾರೆ. ಈ ಹಿಂದಿನ ಗೃಹ ಖಾತೆಯನ್ನು ಪರಂ ಒಪ್ಪಿಕೊಳ್ಳುತ್ತಿಲ್ಲ ಎಂದು ಹೇಳಲಾಗುತ್ತಿದೆ.

ಸಚಿವ ಕೃಷ್ಣ ಬೈರೇಗೌಡರಿಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡಲು ತೀರ್ಮಾನ: ಸಚಿವ ಕೃಷ್ಣ ಬೈರೇಗೌಡಗೆ ಬೆಂಗಳೂರು ನಗರಾಭಿವೃದ್ಧಿ ಇಲಾಖೆ ನೀಡಲು ಹೈಕಮಾಂಡ್ ಮುಂದಾಗಿದೆ. ಆದರೆ, ಕೃಷ್ಣ ಬೈರೇಗೌಡ ತಮ್ಮ ಹಿಂದಿನ ಕಂದಾಯ ಇಲಾಖೆಯನ್ನೇ ನೀಡುವಂತೆ ಕೇಳಿದ್ದಾರೆ. ಕಂದಾಯ ಸಚಿವರಾಗಿ ಕೃಷ್ಣ ಬೈರೇಗೌಡ ಉತ್ತಮ ಕೆಲಸಗಳನ್ನು ಮಾಡಿದ್ದಾರೆ. ಡಿಜಿಟಲೀಕರಣ ಸೇರಿ ಇಲಾಖೆಯಲ್ಲಿ ಸಾಕಷ್ಟು ಸುಧಾರಣಾ ಕ್ರಮಗಳನ್ನು ಕೈಗೊಳ್ಳುತ್ತಿದ್ದರು. ಆ ಸುಧಾರಣಾ ಕ್ರಮಗಳನ್ನು ಮುಂದುವರಿಸಲು ಅದೇ ಖಾತೆ ನೀಡುವಂತೆ ಒತ್ತಾಯಿಸುತ್ತಿದ್ದಾರೆ ಎಂಬ ಮಾಹಿತಿ ದೊರೆತಿದೆ.

ಕೆ.ಹೆಚ್.ಮುನಿಯಪ್ಪ ತಮಗೆ ಹಿಂದಿದ್ದ ಆಹಾರ ಇಲಾಖೆ ನೀಡುವಂತೆ ತಿಳಿಸಿದ್ದಾರೆ. ಸಚಿವ ಈಶ್ವರ್ ಖಂಡ್ರೆ ಕೂಡ ಹಿಂದಿನ ಅರಣ್ಯ ಇಲಾಖೆ ನೀಡುವಂತೆ ಮನವಿ ಮಾಡಿದ್ದಾರೆ. ಯು.ಟಿ.ಖಾದರ್ ಆರೋಗ್ಯ ಇಲಾಖೆಯ ಮೇಲೆ ಕಣ್ಣಿಟ್ಟಿದ್ದಾರೆ. ಬಹುತೇಕ ಸಚಿವರು ಹಿಂದಿನ ಖಾತೆಗಳನ್ನೇ ಈ ಬಾರಿಯೂ ನೀಡುವಂತೆ ಒತ್ತಾಯಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ. ವಿಧಾನಸೌಧ ಸಿಎಂ ಕಚೇರಿಯಲ್ಲಿ ಸಚಿವ ರಾಮಲಿಂಗಾರೆಡ್ಡಿ ಜೊತೆ ಚರ್ಚೆ ನಡೆಸಿದ ಸಿಎಂ ಡಿ.ಕೆ.ಶಿವಕುಮಾರ್ ರಾಜೀನಾಮೆ ನೀಡದಂತೆ ಮನವಿ ಮಾಡಿದ್ದಾರೆ. ಅದೇ ರೀತಿ ಕಂದಾಯ ಇಲಾಖೆಗೆ ಪಟ್ಟು ಹಿಡಿದಿರುವ ಪರಮೇಶ್ವರ್ ಅವರ ಮನವೊಲಿಸಲು ಸಿಎಂ ಯತ್ನಿಸುತ್ತಿರುವುದಾಗಿ ಹೇಳಲಾಗುತ್ತಿದೆ.

ಭಾರತ ಸಾರಥಿ
05/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ರಸ್ತೆ ಇಕ್ಕೆಲ ಮಣ್ಣು ತೆರವು

ಶಿಡ್ಲಘಟ್ಟ

ನಗರದಿಂದ ದಿಬ್ಬೂರಹಳ್ಳಿ ಮಾರ್ಗದಲ್ಲಿರುವ ರೈಲ್ವೆ ಅಂಡರ್ ಪಾಸ್ ನಲ್ಲಿ ರಸ್ತೆಯ ಎರಡು ಭಾಗದ ಇಕ್ಕೆಲಗಳಲ್ಲಿ ತುಂಬಿದ್ದ ಮಣ್ಣಿಗೆ ಕೊನೆಗೂ ಮೋಕ್ಷ ಸಿಕ್ಕಿದೆ. ಈ ಮಾರ್ಗದಲ್ಲಿ ಸಂಚರಿಸುವ ದ್ವಿಚಕ್ರ ವಾಹನ ಸವಾರರು ಮತ್ತು ನಾಗರಿಕರು ನಗರಸಭೆಯ ಸಹಾಯಕ ಕಾರ್ಯ ಪಾಲಕ ಅಭ್ಯಂತರ (ಪರಿಸರ) ಮೋಹನ್ ಕುಮಾರ್ ಅವರಿಗೆ ರಸ್ತೆಯ ಇಕ್ಕಲಳ್ಳಿರುವ ಮಣ್ಣಿನಿಂದ ಆಗುತ್ತಿರುವ ಅಪಘಾತಗಳ ಕುರಿತು ಮಾಹಿತಿ ನೀಡಿದರು.

ಕೂಡಲೇ ಕಾರ್ಯ ಪ್ರವೃತ್ತರಾದ ಪರಿಸರ ಅಭ್ಯಂತರ ಮೋಹನ್ ಕುಮಾರ್ ಮತ್ತು ನಗರಸಭೆಯ ಪೌರಕಾರ್ಮಿಕರು ಅಂಡರ್ ಪಾಸ್ ನಿಂದ ತಾಲೂಕ ಕಚೇರಿ ತನಕ ರಸ್ತೆಯ ಇಕ್ಕಳಲ್ಲಿ ತುಂಬಿದ ಮಣ್ಣನ್ನು ತೆರವು ಮಾಡುವ ಕಾರ್ಯವನ್ನು ಕೈಗೊಂಡರು.

ನಗರಸಭೆಯ ಅಧಿಕಾರಿಗಳ ಈ ಕಾರ್ಯವನ್ನು ನಾಗರಿಕರು ಮತ್ತು ದ್ವಿಚಕ್ರ ವಾಹನ ಸವಾರರು ಮೆಚ್ಚುಗೆ ವ್ಯಕ್ತಪಡಿಸಿದ್ದು ಈ ಮಾರ್ಗದಲ್ಲಿ ಸುಗಮವಾಗಿ ಸಂಚರಿಸಲು ಅನುವು ಮಾಡಿಕೊಟ್ಟಿದ್ದಾರೆ.

# ಜಾಗತಿಕ "ಗೋ ಹೆಲ್ದಿ ವಿತ್ ತೈವಾನ್ 2026" ಅಭಿಯಾನಕ್ಕೆ ಚಾಲನೆ

ಬೆಂಗಳೂರು

ತೈವಾನ್ ನ ಆರೋಗ್ಯ ಮತ್ತು ಸ್ವಾಸ್ಥ್ಯ ಉದ್ಯಮಗಳ ಜಾಗತಿಕ ವಿಸ್ತರಣೆಯನ್ನು ಚುರುಕುಗೊಳಿಸುವ ಹಾಗೂ ಅಂತರರಾಷ್ಟ್ರೀಯ ಸಹಭಾಗಿತ್ವವನ್ನು ಬಲಪಡಿಸುವ ಉದ್ದೇಶದಿಂದ ಜಾಗತಿಕ ಮಟ್ಟದ "ಗೋ ಹೆಲ್ದಿ ವಿತ್ ತೈವಾನ್ 2026" ಪ್ರಸ್ತಾವನಾ ಅಭಿಯಾನಕ್ಕೆ ಅಧಿಕೃತ ಚಾಲನೆ ನೀಡಲಾಗಿದೆ.




ಇತ್ತೀಚೆಗೆ ನಡೆದ ಅಭಿಯಾನದ ಉದ್ಘಾಟನಾ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಟಿಟಾ ಮಹಾನಿರ್ದೇಶಕರಾದ ವಿಲಿಯಂ ಲಿಯು ಅವರು, "ಆರೋಗ್ಯಕರ ತೈವಾನ್ ಎಂಬುದು ನಮ್ಮ ಸರ್ಕಾರದ ಪ್ರಮುಖ ದೃಷ್ಟಿಕೋನಗಳಲ್ಲಿ ಒಂದಾಗಿದೆ. ಜಾಗತಿಕ ವೇದಿಕೆಯಲ್ಲಿ ತೈವಾನ್ ಅನ್ನು ಆರೋಗ್ಯಕರ, ನವೀನ ಮತ್ತು ಕ್ರಿಯಾಶೀಲ ಕೈಗಾರಿಕಾ ಶಕ್ತಿಯಾಗಿ ಬಿಂಬಿಸಲು ಈ ಅಭಿಯಾನವು ಮತ್ತೊಮ್ಮೆ ನೆರವಾಗಲಿದೆ" ಎಂದರು. ಆರ್ಥಿಕ ವ್ಯವಹಾರಗಳ ಸಚಿವಾಲಯದ ಅಂತರರಾಷ್ಟ್ರೀಯ ವ್ಯಾಪಾರ ಆಡಳಿತ ಸಂಸ್ಥೆಯಾದ ಟಿಟಾ ಮಾರ್ಗದರ್ಶನದಲ್ಲಿ, ತೈವಾನ್ ಬಾಹ್ಯ ವ್ಯಾಪಾರ ಅಭಿವೃದ್ಧಿ ಮಂಡಳಿಯು ಈ ವಿನೂತನ ಅಭಿಯಾನವನ್ನು ಸಂಘಟಿಸುತ್ತಿದೆ. ಈ ವರ್ಷದ ಅಭಿಯಾನವು "ಒಟ್ಟಾಗಿ ಆರೋಗ್ಯಕರ ಭವಿಷ್ಯವನ್ನು ರೂಪಿಸುವುದು" ಎಂಬ ವಿಷಯದ ಆಧಾರದಲ್ಲಿ ನಡೆಯುತ್ತಿದ್ದು, ಜಾಗತಿಕ ಮಟ್ಟದಲ್ಲಿ ಅನುಷ್ಠಾನಗೊಳಿಸಬಹುದಾದ ಆರೋಗ್ಯ ಪರಿಹಾರಗಳನ್ನು ರೂಪಿಸಲು ಜಗತ್ತಿನಾದ್ಯಂತದ ಸರ್ಕಾರಿ ಸಂಸ್ಥೆಗಳು, ಉದ್ಯಮಗಳು ಮತ್ತು ಪ್ರಮುಖ ಸಂಸ್ಥೆಗಳಿಂದ ನವೀನ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ.

ಸ್ಮಾರ್ಟ್ ಹೆಲ್ತ್ ಕೇರ್, ಕ್ರೀಡಾ ತಂತ್ರಜ್ಞಾನ ಮತ್ತು ಹೈ-ಎಂಡ್ ಬೈಸಿಕಲ್‌ಗಳ ಕ್ಷೇತ್ರಗಳಲ್ಲಿ ತೈವಾನ್ ಹೊಂದಿರುವ ಅತ್ಯಾಧುನಿಕ ಸಾಮರ್ಥ್ಯಗಳನ್ನು ಸಂಯೋಜಿಸಿ, ಜಾಗತಿಕ ವೈದ್ಯಕೀಯ ರಂಗಕ್ಕೆ ಹೊಸ ಮಾದರಿಯನ್ನು ಕೊಡುಗೆಯಾಗಿ ನೀಡುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ.

ಸಮಗ್ರವಾಗಿ ನವೀಕರಿಸಲಾದ ಈ ಅಭಿಯಾನದ ಮೂಲಕ ಜಾಗತಿಕ ಆರೋಗ್ಯ ಪರಿಹಾರಗಳಿಗಾಗಿ ತೈವಾನ್ ಅನ್ನು ವಿಶ್ವದ ಅತ್ಯಂತ ಆದ್ಯತೆಯ ಕೇಂದ್ರವನ್ನಾಗಿ ಬಿಂಬಿಸುವ ಗುರಿ ಹೊಂದಲಾಗಿದೆ. ಇದರ ಜೊತೆಗೆ, ಈ ಜೂನ್ ನಲ್ಲಿ ಪೋಲೆಂಡ್ ನಲ್ಲಿ ನಡೆಯಲಿರುವ ಪ್ರತಿಷ್ಠಿತ ತೈವಾನ್ ಎಕ್ಸ್ ಪೋದಲ್ಲಿ, ಕಳೆದ ವರ್ಷದ (2025) ಅಭಿಯಾನದ ಅಗ್ರ ಮೂರು ವಿಜೇತ ತಂಡಗಳು ಭಾಗವಹಿಸಲಿದ್ದು, ತಮ್ಮ ಸಹಭಾಗಿತ್ವದ ಯಶಸ್ವಿ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ ಎಂದು ಅವರು ವಿಲಿಯಂ ಲಿಯು ಮಾಹಿತಿ ನೀಡಿದರು.

# ಭಾರತದಲ್ಲಿ ವೇಗವಾಗಿ ಬೆಳೆಯುತ್ತಿರುವ ಕ್ರಿಯೇಟರ್ ಆರ್ಥಿಕತೆ

ಬೆಂಗಳೂರು

ಇಂಡೀಡ್ ಬಿಡುಗಡೆ ಮಾಡಿದ ಹೊಸ ಮಾಹಿತಿಯ ಪ್ರಕಾರ, ಭಾರತದಲ್ಲಿ ಕ್ರಿಯೇಟರ್ ಆರ್ಥಿಕತೆ ಹೆಚ್ಚು ಸಂಘಟಿತ ಮತ್ತು ವೃತ್ತಿಪರ ಹಂತಕ್ಕೆ ಕಾಲಿಟ್ಟಿದೆ. ಕಂಟೆಂಟ್ ರಚನೆ ಇನ್ನು ವೈಯಕ್ತಿಕ ಸಾಮಾಜಿಕ ಮಾಧ್ಯಮ ಚಟುವಟಿಕೆಗೆ ಮಾತ್ರ ಸೀಮಿತವಾಗದೆ, ಕಂಪನಿಗಳು ಮತ್ತು ಸಂಸ್ಥೆಗಳಲ್ಲಿಯೂ ಅಧಿಕೃತ ಉದ್ಯೋಗದ ಭಾಗವಾಗಿ ರೂಪುಗೊಳ್ಳುತ್ತಿದೆ.

ಇಂಡೀಡ್‌ನ ಅಂಕಿಅಂಶಗಳ ಪ್ರಕಾರ, ಭಾರತದಲ್ಲಿ ಕಂಟೆಂಟ್ ಕ್ರಿಯೇಟರ್, ಇನ್ಫ್ಲುಯೆನ್ಸರ್ ಹಾಗೂ ಸಾಮಾಜಿಕ ಮಾಧ್ಯಮ ಮತ್ತು ಮಾರುಕಟ್ಟೆ ಪ್ರಚಾರ ಕೌಶಲ್ಯಗಳಿಗೆ ಸಂಬಂಧಿಸಿದ ಉದ್ಯೋಗ ಜಾಹೀರಾತುಗಳ ಪ್ರಮಾಣವು 2020ರಿಂದ 2026ರ ಆರಂಭದವರೆಗೆ ಶೇ.919ರಷ್ಟು ಏರಿಕೆಯಾಗಿದೆ.

ಒಮ್ಮೆ ಮಾರುಕಟ್ಟೆ ಪ್ರಚಾರ ಕ್ಷೇತ್ರದಲ್ಲಿ ಅತಿ ಕಡಿಮೆ ಪಾಲು ಹೊಂದಿದ್ದ ಈ ರೀತಿಯ ಹುದ್ದೆಗಳು ಈಗ ಸಂಸ್ಥೆಗಳ ಪ್ರಮುಖ ಕಾರ್ಯವ್ಯವಸ್ಥೆಯ ಭಾಗವಾಗುತ್ತಿವೆ. ಇದರಿಂದ ಕ್ರಿಯೇಟರ್ ಪಾತ್ರಗಳು ವಿಶೇಷ ಅಥವಾ ತಾತ್ಕಾಲಿಕ ಉದ್ಯೋಗಗಳಿಂದ ಹೊರಬಂದು, ಸ್ಥಿರ ಮತ್ತು ಸಂಘಟಿತ ಉದ್ಯೋಗ ಕ್ಷೇತ್ರವಾಗಿ ಬೆಳೆಯುತ್ತಿರುವುದು ಸ್ಪಷ್ಟವಾಗಿದೆ.

ಭಾರತ ಸರ್ಕಾರವೂ ತನ್ನ ನೀತಿ ಚೌಕಟ್ಟಿನೊಳಗೆ ಕ್ರಿಯೇಟರ್ ಪರಿಸರ ವ್ಯವಸ್ಥೆಯನ್ನು ಅಧಿಕೃತವಾಗಿ ಗುರುತಿಸಲು ಮುಂದಾಗಿರುವ ಸಂದರ್ಭದಲ್ಲಿ ಈ ಬೆಳವಣಿಗೆ ಗಮನಾರ್ಹವಾಗಿದೆ. ಇದರಿಂದ ಕ್ರಿಯೇಟರ್ಗಳು ಕೇವಲ ಸ್ವತಂತ್ರ ವೃತ್ತಿಪರರಾಗಿ ಉಳಿಯದೇ, ವಿವಿಧ ಸಂಸ್ಥೆಗಳು, ಏಜೆನ್ಸಿಗಳು ಮತ್ತು ಕಂಪನಿಗಳಲ್ಲಿ ಪೂರ್ಣಕಾಲಿಕ ಉದ್ಯೋಗಿಗಳಾಗಿ ಅವಕಾಶ ಪಡೆಯುತ್ತಿದ್ದಾರೆ.

ಈ ಕುರಿತು ಮಾತನಾಡಿದ ಇಂಡೀಡ್‌ನ ಕರಿಯರ್ ತಜ್ಞ ಸೌಮಿತ್ರ ಆರ್. ಚಂದ್, "ಒಬ್ಬ ಕ್ರಿಯೇಟರ್ ಬ್ರ್ಯಾಂಡ್ ಅನ್ನು ಪ್ರತಿನಿಧಿಸುವಾಗ ವಿಶ್ವಾಸವೇ ಅತಿದೊಡ್ಡ ಬಲ ಹಾಗೂ ಅಪಾಯವಾಗಿರುತ್ತದೆ. ಅದಕ್ಕಾಗಿಯೇ ಕಂಪನಿಗಳು ಕ್ರಿಯೇಟರ್ಗಳನ್ನು ನೇರವಾಗಿ ತಮ್ಮ ಸಂಸ್ಥೆಗಳಲ್ಲಿ ನೇಮಕ ಮಾಡಿಕೊಳ್ಳಲು ಮುಂದಾಗುತ್ತಿವೆ" ಎಂದು ಹೇಳಿದರು.

ಉದ್ಯೋಗದಾತರು ಈಗ ಕೇವಲ ಹೆಚ್ಚು ಜನರನ್ನು ತಲುಪುವ ಸಾಮರ್ಥ್ಯವನ್ನಷ್ಟೇ ಅಲ್ಲದೆ, ಜವಾಬ್ದಾರಿತನ ಮತ್ತು ವಿಶ್ವಾಸಾರ್ಹತೆಯನ್ನೂ ಮಹತ್ವದಿಂದ ಪರಿಗಣಿಸುತ್ತಿದ್ದಾರೆ ಎಂದು ಅವರು ಅಭಿಪ್ರಾಯಪಟ್ಟರು.

# ಪ್ರಮಾಣವಚನ

ಕೋಲಾರ

ಗ್ಲಾಸ್ ಹೌಸ್‌ಅನ್ನು ಕೆಂಪು ಮತ್ತು ಹಳದಿ ಬಣ್ಣಗಳಲ್ಲಿ ಅಲಂಕರಿಸಲಾಗಿತ್ತು, ಇದು ಕರ್ನಾಟಕದ ಧ್ವಜದ ಬಣ್ಣಗಳನ್ನು ಪ್ರತಿಬಿಂಬಿಸುತ್ತದೆ. ಜ್ಯೋತಿಷಿಯ ಸಲಹೆಯಂತೆ ವೇದಿಕೆಯನ್ನು ಪೂರ್ವಕ್ಕೆ ಮುಖ ಮಾಡಿ ಇರಿಸಲಾಗಿತ್ತು, ಇದನ್ನು ಶುಭವೆಂದು ಪರಿಗಣಿಸಲಾಗಿದೆ.

ವೇದಿಕೆಗೆ ಹೋಗುವ ಮೊದಲು, ಶಿವಕುಮಾರ್ ಪ್ರಮಾಣವಚನ ಸಮಾರಂಭಕ್ಕಾಗಿ ನೆರೆದಿದ್ದ ವಿವಿಧ ಧಾರ್ಮಿಕ ನಾಯಕರ ಆಶೀರ್ವಾದ ಪಡೆದರು. ಅವರಲ್ಲಿ ಕೆಲವರು ಅವರ ಮೇಲೆ ಹೂದಳಗಳನ್ನು ಸುರಿಸಿದರೆ, ಇತರರು ಆಶೀರ್ವಾದ ಮತ್ತು ಸದ್ಭಾವನೆಯ ಸಂಕೇತವಾಗಿ 'ರುದ್ರಾಕ್ಷ ಮಾಲೆ' ನೀಡಿದರು.

ಶಿವಕುಮಾರ್ ಅವರು ಕಂದು ಬಣ್ಣದ ರೇಷ್ಮೆ ಜುಬ್ಬಾ ಮತ್ತು ಕಾಂಗ್ರೆಸ್ ಪಕ್ಷದ ತ್ರಿವರ್ಣ ಧ್ವಜವನ್ನು ಹೊಂದಿರುವ ಶಾಲು ಧರಿಸಿದ್ದರು. ಪ್ರಮಾಣ ವಚನ ಸ್ವೀಕರಿಸುವ ಮೊದಲು ಶಿವಕುಮಾರ್ ಗಣ್ಯರನ್ನು ಸ್ವಾಗತಿಸಿದರು.

ಶಿವಕುಮಾರ್ ಅವರ ಪತ್ನಿ ಉಷಾ, ಮಗಳು ಐಶ್ವರ್ಯ ಡಿಕೆಎಸ್ ಹೆಗ್ಡೆ ಮತ್ತು ಇತರ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಿರ್ಗಮಿತ ಸಿಎಂ ಸಿದ್ದರಾಮಯ್ಯ, ಮಾಜಿ ಸಿಎಂ ವೀರಪ್ಪ ಮೊಯ್ಲಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಕರ್ನಾಟಕ ಉಸ್ತುವಾರಿ) ರಣದೀಪ್ ಸಿಂಗ್ ಸುರ್ಜೇವಾಲಾ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಮತ್ತು ರಾಜ್ಯಸಭಾ ಸದಸ್ಯ ಕೆ.ಸಿ. ವೇಣುಗೋಪಾಲ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇರಳ ಸಿಎಂ ವಿ.ಡಿ. ಸತೀಶನ್, ಹಿಮಾಚಲ ಪ್ರದೇಶ ಸಿಎಂ ಸುಖವಿಂದರ್ ಸಿಂಗ್ ಸುಖು ಮತ್ತು ಇತರರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಿದ್ದ ಗಣ್ಯರಲ್ಲಿ ಕರ್ನಾಟಕದ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ಇನ್ಫೋಸಿಸ್ ಸಹ-ಸಂಸ್ಥಾಪಕ ನಾರಾಯಣ ಮೂರ್ತಿ ಮತ್ತು ಅವರ ಪತ್ನಿ ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ; ಮಾಜಿ ಭಾರತೀಯ ಕ್ರಿಕೆಟಿಗರಾದ ಮೊಹಮ್ಮದ್ ಅಜರುದ್ದೀನ್, ಅನಿಲ್ ಕುಂಬ್ಳೆ, ಖ್ಯಾತ ನಟ ಧನಂಜಯ, ಸಂಗೀತ ನಿರ್ದೇಶಕರಾದ ಅರ್ಜುನ್ ಜನ್ಯ ಮತ್ತು ಗುರುಕಿರಣ್ ಮತ್ತು ನಟಿ-ರಾಜಕಾರಣಿ ರಮ್ಯಾ ಸೇರಿದ್ದಾರೆ.

# ಎಚ್‌ಡಿಎಫ್‌ಸಿ ಪರಿವರ್ತನ್‌ನಿಂದ ಕೃಷಿ ತ್ಯಾಜ್ಯ ಸುಡುವಿಕೆ ತಡೆಗೆ ಮಹತ್ವದ ಕೊಡುಗೆ

ಬೆಂಗಳೂರು

ಎಚ್‌ಡಿಎಫ್‌ಸಿ ಬ್ಯಾಂಕ್ ತನ್ನ ಸಿಎಸ್‌ಆರ್ ಕಾರ್ಯಕ್ರಮ "ಪರಿವರ್ತನ್" ಅಡಿಯಲ್ಲಿ ಸಿಐಐ ಫೌಂಡೇಶನ್ ಸಹಯೋಗದೊಂದಿಗೆ ಕೈಗೊಂಡಿರುವ "ಬೆಳೆ ತ್ಯಾಜ್ಯ ನಿರ್ವಹಣೆ" ಪ್ರಮುಖ ಉಪಕ್ರಮವು ಉತ್ತರ ಭಾರತದಲ್ಲಿ ಕೃಷಿ ತ್ಯಾಜ್ಯ ಸುಡುವಿಕೆಯನ್ನು ತಡೆಯುವಲ್ಲಿ ಗಮನಾರ್ಹ ಸಾಧನೆ ಮಾಡಿದೆ.

ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪ್ರಕಟಿಸಲಾದ ಮಾಹಿತಿಯ ಪ್ರಕಾರ, 2025ರ ಹಂಗಾಮಿನಲ್ಲಿ ಪಂಜಾಬ್ ಮತ್ತು ಹರಿಯಾಣದಾದ್ಯಂತ 3,78,425 ಎಕರೆ ಕೃಷಿ ಭೂಮಿಯಲ್ಲಿ ಶೇ.88ರಷ್ಟು ಪ್ರದೇಶವನ್ನು ಕೃಷಿ ತ್ಯಾಜ್ಯ ಸುಡುವುದರಿಂದ ರಕ್ಷಿಸಲಾಗಿದೆ. ಈ ಉಪಕ್ರಮದಿಂದ ಪಂಜಾಬ್‌ನ ಲೂಧಿಯಾನ ಮತ್ತು ಸಂಗ್ರೂರ್ ಜಿಲ್ಲೆಗಳು ಹಾಗೂ ಹರಿಯಾಣದ ಫತೇಹಾಬಾದ್ ಜಿಲ್ಲೆಯ 380ಕ್ಕೂ ಹೆಚ್ಚು ಗ್ರಾಮಗಳ ಸುಮಾರು 86,000 ರೈತರಿಗೆ ನೇರ ಪ್ರಯೋಜನವಾಗಿದೆ.

ಉತ್ತರ ಭಾರತದಲ್ಲಿ ಚಳಿಗಾಲದ ವೇಳೆಯಲ್ಲಿ ಉಂಟಾಗುವ ತೀವ್ರ ವಾಯು ಮಾಲಿನ್ಯಕ್ಕೆ ಭತ್ತದ ಕೊಯ್ಲಿನ ಬಳಿಕ ಕೃಷಿ ತ್ಯಾಜ್ಯ ಸುಡುವುದು ಪ್ರಮುಖ ಕಾರಣಗಳಲ್ಲಿ ಒಂದಾಗಿದೆ. ಇದರ ಪರಿಣಾಮವಾಗಿ ವಾಯುಮಾಲಿನ್ಯ ಹೆಚ್ಚುವುದರ ಜೊತೆಗೆ ಹೃದಯ ಮತ್ತು ಶ್ವಾಸಕೋಶ ಸಂಬಂಧಿ ಆರೋಗ್ಯ ಸಮಸ್ಯೆಗಳೂ ಉಲ್ಬಣಗೊಳ್ಳುತ್ತವೆ.

ಒಂದು ಟನ್ ಭತ್ತದ ಒಣಹುಲ್ಲನ್ನು ಸುಟ್ಟಾಗ ವಾತಾವರಣಕ್ಕೆ ಸುಮಾರು ಮೂರು ಕಿಲೋಗ್ರಾಂ ಸೂಕ್ಷ್ಮ ಕಣಗಳು ಬಿಡುಗಡೆಯಾಗುತ್ತವೆ. ಜೊತೆಗೆ ಮಣ್ಣಿನಲ್ಲಿರುವ ಅಗತ್ಯ ಪೋಷಕಾಂಶಗಳು ನಾಶವಾಗುವುದರಿಂದ ಭೂಮಿಯ ಫಲವತ್ತತೆಯ ಮೇಲೂ ದುಷ್ಪರಿಣಾಮ ಬೀರುತ್ತದೆ.

# ಹೊಸ ವಿನ್ಯಾಸದಲ್ಲಿ ಮಿಂಚಿದ ಟೊಯೊಟಾ ಇನ್ನೋವಾ ಕ್ರಿಸ್ಟಾ

ಬೆಂಗಳೂರು

ಟೊಯೊಟಾ ಕಿರ್ಲೋಸ್ಕರ್ ಮೋಟಾರ್ ಸಂಸ್ಥೆಯು ಭಾರತದ ಜನಪ್ರಿಯ ಎಂಪಿವಿಗಳಲ್ಲಿ ಒಂದಾದ ಹೊಸ "ಇನ್ನೋವಾ ಕ್ರಿಸ್ಟಾ" ಕಾರನ್ನು ಹೊಸ ವಿನ್ಯಾಸ ಅಂಶಗಳು ಹಾಗೂ ಹೆಚ್ಚುವರಿ ಅನುಕೂಲಗಳೊಂದಿಗೆ ಬಿಡುಗಡೆ ಮಾಡಿದೆ.




ಗ್ರಾಹಕರ ಬದಲಾಗುತ್ತಿರುವ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಿರುವ ಈ ಹೊಸ ಮಾದರಿ, ಆರಾಮ, ಪ್ರಾಯೋಗಿಕತೆ ಹಾಗೂ ಸೊಗಸಿನ ಸಮನ್ವಯವನ್ನು ಒಳಗೊಂಡಿದೆ. ಎರಡು ದಶಕಗಳಿಗೂ ಹೆಚ್ಚು ಕಾಲ ವಿಶ್ವಾಸಾರ್ಹತೆ, ಸುರಕ್ಷತೆ, ಐಷಾರಾಮಿತನ ಮತ್ತು ಬಲಿಷ್ಠ ಕಾರ್ಯಕ್ಷಮತೆಯಿಂದ ಜನಪ್ರಿಯತೆ ಪಡೆದಿರುವ ಇನ್ನೋವಾ ಬ್ರಾಂಡ್‌ನ ಪರಂಪರೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಹೊಸ ರೂಪದಲ್ಲಿ ಪರಿಚಯಿಸಲಾಗಿದೆ.

ಹೊಸ ಇನ್ನೋವಾ ಕ್ರಿಸ್ಟಾದ ಹೊರಭಾಗದಲ್ಲಿ ದಪ್ಪ ಮತ್ತು ಅತ್ಯಾಧುನಿಕ ವಿನ್ಯಾಸದ ಹೊಸ ರೇಡಿಯೇಟರ್ ಗ್ರಿಲ್, ನವೀಕರಿಸಿದ ಮುಂಭಾಗ ಹಾಗೂ ಹಿಂಭಾಗದ ಬಂಪರ್ ಅಲಂಕಾರಗಳು ಕಾರಿಗೆ ಇನ್ನಷ್ಟು ಆಕರ್ಷಕ ಮತ್ತು ಗಟ್ಟಿಯಾದ ನೋಟವನ್ನು ನೀಡುತ್ತವೆ.

ಒಳಾಂಗಣ ವಿನ್ಯಾಸದಲ್ಲೂ ಹಲವು ಹೊಸ ಬದಲಾವಣೆಗಳನ್ನು ಮಾಡಲಾಗಿದೆ. ಹೊಸ ಡ್ಯುಯಲ್-ಟೋನ್ ಲೆದರ್ ಸೀಟ್ ವ್ಯವಸ್ಥೆ, ಇನ್‌ಸ್ಟ್ರುಮೆಂಟ್ ಪ್ಯಾನಲ್, ಡೋರ್ ಟ್ರಿಮ್ ಹಾಗೂ ಒಳಾಂಗಣ ಭಾಗಗಳಲ್ಲಿ ಗ್ರೇಸ್ ಕಾಪರ್ ಮತ್ತು ವುಡ್ ಪ್ಯಾಟರ್ನ್ ವಿನ್ಯಾಸದ ಅಲಂಕಾರಗಳನ್ನು ಸೇರಿಸಲಾಗಿದೆ. ಎಸಿ ನಿಯಂತ್ರಣ ವ್ಯವಸ್ಥೆ ಹಾಗೂ ಸ್ವಿಚ್‌ಗಳಿಗೆ ಸೂಕ್ಷ್ಮ ವಿನ್ಯಾಸದ ಸ್ಪರ್ಶ ನೀಡಲಾಗಿದೆ.

# ಭಾರತ್ ಕ್ಲೌಡ್ ಮತ್ತು ಬಿಡಿಐಎ ಸಹಯೋಗದಲ್ಲಿ ರಾಷ್ಟ್ರೀಯ ಮಟ್ಟದ ಚರ್ಚೆ




ಬೆಂಗಳೂರು

ಭಾರತ್ ಕ್ಲೌಡ್ ನವದೆಹಲಿಯಲ್ಲಿ ಭಾರತ್ ಡಿಜಿಟಲ್ ಇನ್ಫ್ರಾಸ್ಟ್ರಕ್ಚರ್ ಅಸೋಸಿಯೇಷನ್ (ಬಿಡಿಐಎ) ಆಯೋಜಿಸಿದ್ದ "ಭಾರತ್ ಡಿಜಿಟಲ್ ಸಂವಾದ್" ಕಾರ್ಯಕ್ರಮದಲ್ಲಿ ಭಾಗವಹಿಸಿ ಭಾರತದ ಡಿಜಿಟಲ್ ಸಾರ್ವಭೌಮತೆ ಮತ್ತು ಎಐ ಮೂಲಸೌಕರ್ಯದ ಭವಿಷ್ಯದ ಕುರಿತು ಮಹತ್ವದ ಚರ್ಚೆಗಳನ್ನು ನಡೆಸಿತು.

ಈ ರಾಷ್ಟ್ರೀಯ ಮಟ್ಟದ ಕಾರ್ಯಕ್ರಮದಲ್ಲಿ ನೀತಿ ನಿರೂಪಕರು, ಕ್ಲೌಡ್ ಮೂಲಸೌಕರ್ಯ ತಜ್ಞರು, ನಿಯಂತ್ರಣ ಸಂಸ್ಥೆಗಳ ಪ್ರತಿನಿಧಿಗಳು, ಉದ್ಯಮಿಗಳು ಹಾಗೂ ತಂತ್ರಜ್ಞಾನ ಪಾಲುದಾರರು ಭಾಗವಹಿಸಿ ಭಾರತದ ಡಿಜಿಟಲ್ ಸ್ವಾವಲಂಬನೆ, ಎಐ ಸನ್ನದ್ಧತೆ ಹಾಗೂ ಸ್ಥಳೀಯ ಕ್ಲೌಡ್ ವ್ಯವಸ್ಥೆಗಳ ಬಲವರ್ಧನೆ ಕುರಿತು ಚರ್ಚಿಸಿದರು.

ಕಾರ್ಯಕ್ರಮದ ಅಂಗವಾಗಿ ಲಾಭರಹಿತ ಉದ್ಯಮ ಸಂಘಟನೆಯಾದ ಬಿಡಿಐಎಯ ಅಧಿಕೃತ ಪ್ರಾರಂಭವೂ ನಡೆಯಿತು.

ಭಾರತದ ಡಿಜಿಟಲ್ ಮೂಲಸೌಕರ್ಯವನ್ನು ಬಲಪಡಿಸುವುದು, ನೀತಿ ಚರ್ಚೆಗಳಿಗೆ ವೇದಿಕೆ ಕಲ್ಪಿಸುವುದು ಹಾಗೂ ಡೇಟಾ ಸ್ವರಾಜ್ ಧ್ಯೇಯವನ್ನು ಉತ್ತೇಜಿಸುವ ಉದ್ದೇಶದಿಂದ ಈ ಸಂಘಟನೆ ಕಾರ್ಯನಿರ್ವಹಿಸಲಿದೆ. ನಿಯಂತ್ರಿತ ಡಿಜಿಟಲ್ ಮೂಲಸೌಕರ್ಯಗಳ ಮೇಲಿನ ಅವಲಂಬನೆ ಕಡಿಮೆ ಮಾಡುವ ಅಗತ್ಯದ ಕುರಿತು ಚರ್ಚೆಗಳು ನಡೆದವು.

ಡಿಜಿಟಲ್ ಸ್ವರಾಜ್ ಹಾಗೂ ಸ್ವಯಂ-ಸಾರ್ವಭೌಮ ಎಐ ಸನ್ನದ್ಧ ಮೂಲಸೌಕರ್ಯ ನಿರ್ಮಾಣವು ಭಾರತದ ದೀರ್ಘಾವಧಿಯ ತಂತ್ರಜ್ಞಾನ ಸದೃಢತೆಗೆ ಅಗತ್ಯವಾಗಿದೆ ಎಂಬ ಅಭಿಪ್ರಾಯಗಳು ವ್ಯಕ್ತವಾದವು.

# ಅಕ್ರಮ ಕೆರೆ ಮಣ್ಣು ಸಾಗಾಟ: 7 ಟಿಪ್ಪರ್ ವಶ




> ಬಾಶೆಟ್ಟಹಳ್ಳಿ ಭಾಗದಲ್ಲಿ ಅಕ್ರಮ ಮಣ್ಣು ಸಾಗಾಟ ನಡೆಯುತ್ತಿದೆ ಎಂಬ ಸಾರ್ವಜನಿಕ ದೂರುಗಳು ಹಾಗೂ ಪೊಲೀಸ್ ಠಾಣೆ ಆಯೋಜಿಸುತ್ತಿರುವ ಗ್ರಾಮ ಸಭೆಗಳ ಮೂಲಕ ಸಿಕ್ಕ ಮಾಹಿತಿಯ ಆಧಾರದ ಮೇಲೆ ಈ ದಂಧೆ ಬಹಿರಂಗವಾಗಿದೆ. ಸಾರ್ವಜನಿಕರ ಮಾಹಿತಿ ಆಧಾರವಾಗಿ ತಕ್ಷಣ ಕ್ರಮ ಕೈಗೊಂಡ ಪೊಲೀಸರು ಅಕ್ರಮ ಚಟುವಟಿಕೆಗೆ ಕಡಿವಾಣ ಹಾಕಿದ್ದಾರೆ.

ದೊಡ್ಡಬಳ್ಳಾಪುರ

ಬಾಶೆಟ್ಟಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಅಕ್ರಮವಾಗಿ ಕೆರೆ ಮಣ್ಣು ಅಗೆದು ಸಾಗಿಸುತ್ತಿದ್ದ ದಂಧೆ ಬೆಳಕಿಗೆ ಬಂದಿದೆ. ಖಚಿತ ಮಾಹಿತಿಯ ಆಧಾರದ ಮೇಲೆ ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಿದ ಪೊಲೀಸರು, ಸುಮಾರು 7 ಟಿಪ್ಪರ್ ಲಾರಿಗಳನ್ನು ವಶಕ್ಕೆ ಪಡೆದಿದ್ದಾರೆ.

ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಇನ್ಸ್‌ಪೆಕ್ಟರ್ ಡಾ. ನವೀನ್ ಕುಮಾರ್ ಎಂ.ಬಿ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ, ಪರವಾನಗಿ ಇಲ್ಲದೆ ಕೆರೆಯಿಂದ ಮಣ್ಣು ತೆಗೆದು ಸಾಗಿಸುತ್ತಿದ್ದ ಲಾರಿಗಳನ್ನು ಚಾಲಕರ ಸಮೇತ ವಶಕ್ಕೆ ಪಡೆಯಲಾಗಿದೆ ಎಂದು ಮೂಲಗಳು ತಿಳಿಸಿವೆ.

ಬಾಶೆಟ್ಟಹಳ್ಳಿ ಭಾಗದಲ್ಲಿ ಅಕ್ರಮ ಮಣ್ಣು ಸಾಗಾಟ ನಡೆಯುತ್ತಿದೆ ಎಂಬ ಸಾರ್ವಜನಿಕ ದೂರುಗಳು ಹಾಗೂ ಪೊಲೀಸ್ ಠಾಣೆ ಆಯೋಜಿಸುತ್ತಿರುವ ಗ್ರಾಮ ಸಭೆಗಳ ಮೂಲಕ ಸಿಕ್ಕ ಮಾಹಿತಿಯ ಆಧಾರದ ಮೇಲೆ ಈ ದಂಧೆ ಬಹಿರಂಗವಾಗಿದೆ. ಸಾರ್ವಜನಿಕರ ಮಾಹಿತಿ ಆಧಾರವಾಗಿ ತಕ್ಷಣ ಕ್ರಮ ಕೈಗೊಂಡ ಪೊಲೀಸರು ಅಕ್ರಮ ಚಟುವಟಿಕೆಗೆ ಕಡಿವಾಣ ಹಾಕಿದ್ದಾರೆ.

ಅಕ್ರಮವಾಗಿ ತೆಗೆದುಕೊಳ್ಳುವ ಕೆರೆ ಮಣ್ಣು ಕೃಷಿ ಜಮೀನಿನ ಫಲವತ್ತತೆ ಹೆಚ್ಚಿಸಲು ಬಳಸಲಾಗುತ್ತದೆ ಎಂದು ಹೇಳಲಾಗುತ್ತಿದರೂ, ಅದನ್ನು ಪರವಾನಗಿ ಇಲ್ಲದೆ ವಾಣಿಜ್ಯ ಉದ್ದೇಶಕ್ಕೆ ಸಾಗಿಸುವುದು ಕಾನೂನುಬಾಹಿರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.


ಕೆರೆ ಮಣ್ಣು ನೈಸರ್ಗಿಕವಾಗಿ ಪೋಷಕಾಂಶಗಳಿಂದ ಸಮೃದ್ಧವಾಗಿದ್ದು, ನೈಟ್ರೋಜನ್, ಫಾಸ್ಫರಸ್, ಪೊಟ್ಯಾಸಿಯಮ್ ಸೇರಿದಂತೆ ಹಲವು ಸೂಕ್ಷ್ಮ ಪೋಷಕಾಂಶಗಳನ್ನು ಹೊಂದಿದೆ. ಇದು ಮಣ್ಣಿನ ತೇವಾಂಶ ಹಿಡಿದಿಡುವ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ಬೆಳೆಗಳ ಇಳುವರಿಗೂ ಸಹಾಯಕವಾಗುತ್ತದೆ. ಆದರೆ ಇಂತಹ ಮಣ್ಣನ್ನು ನಿಯಮ ಉಲ್ಲಂಘಿಸಿ ವ್ಯಾಪಾರ ಉದ್ದೇಶಕ್ಕೆ ಬಳಸುತ್ತಿರುವುದು ಗಂಭೀರ ವಿಷಯವಾಗಿದೆ ಎಂದು ಕೃಷಿ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಪೊಲೀಸರು ವಶಕ್ಕೆ ಪಡೆದ ಲಾರಿಗಳ ಕುರಿತು

# ಡಾಲರ್ ಏರಿಕೆ, ತೈಲ ಬೆಲೆ ಹೆಚ್ಚಳದಿಂದ ಜಾಗತಿಕ ಕರೆನ್ಸಿಗಳ ಮೇಲೆ ಒತ್ತಡ

ಬೆಂಗಳೂರು

ಎಮ್ಕೆ ವೆಲ್ತ್ ಮ್ಯಾನೇಜ್ಮೆಂಟ್ ಪ್ರಕಾರ, ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಯಿಂದ ಜಾಗತಿಕ ಕರೆನ್ಸಿ ಮಾರುಕಟ್ಟೆಗಳಲ್ಲಿ ತೀವ್ರ ಏರಿಳಿತ ಕಂಡುಬಂದಿದ್ದು, ಅಮೆರಿಕನ್ ಡಾಲರ್ ಬಲಿಷ್ಠಗೊಂಡ ಪರಿಣಾಮ ಪ್ರಮುಖ ಕರೆನ್ಸಿಗಳ ಮೇಲೆ ಒತ್ತಡ ಹೆಚ್ಚಾಗಿದೆ.



ಕಳೆದ ಒಂದು ತಿಂಗಳಲ್ಲಿ ಅಮೆರಿಕನ್ ಡಾಲರ್ ಸೂಚ್ಯಂಕವು 97.80 ಮಟ್ಟದಿಂದ ಏರಿಕೆ ಕಂಡು 100.27 ಮಟ್ಟ ತಲುಪಿದ್ದು, ಪ್ರಸ್ತುತ 99.50ರ ಸುತ್ತ ವ್ಯವಹಾರವಾಗುತ್ತಿದೆ. ಜಾಗತಿಕ ಅನಿಶ್ಚಿತತೆಯ ನಡುವೆಯೂ ಡಾಲರ್ ಸುರಕ್ಷಿತ ಹೂಡಿಕೆ ಆಯ್ಕೆಯಾಗಿ ಹೆಚ್ಚು ಬೇಡಿಕೆ ಪಡೆಯುತ್ತಿದೆ ಎಂದು ಸಂಸ್ಥೆ ತಿಳಿಸಿದೆ.

ತೈಲ ಬೆಲೆಗಳ ಏರಿಕೆ ಕೂಡ ಡಾಲರ್‌ಗೆ ಹೆಚ್ಚುವರಿ ಬಲ ನೀಡಿದೆ. ಜಾಗತಿಕ ಕಚ್ಚಾ ತೈಲ ವ್ಯವಹಾರಗಳು ಅಮೆರಿಕನ್ ಡಾಲರ್‌ನಲ್ಲಿ ನಡೆಯುವುದರಿಂದ, ಪ್ರತಿ ಬ್ಯಾರೆಲ್‌ಗೆ 120 ಅಮೆರಿಕನ್ ಡಾಲರ್‌ವರೆಗೆ ಏರಿದ್ದ ಬ್ರೆಂಟ್ ಕಚ್ಚಾ ತೈಲದ ಬೆಲೆ ಡಾಲರ್‌ಗೆ ಬೆಂಬಲ ಒದಗಿಸಿದೆ. ನಂತರ ತೈಲ ಬೆಲೆಗಳು 97 ರಿಂದ 100 ಅಮೆರಿಕನ್ ಡಾಲರ್ ವ್ಯಾಪ್ತಿಗೆ ಇಳಿದಿದ್ದರೂ ಮಾರುಕಟ್ಟೆಯ ಅನಿಶ್ಚಿತತೆ ಮುಂದುವರಿದಿದೆ.

ಯುಎಸ್ ಫೆಡರಲ್ ರಿಸರ್ವ್ ಬಡ್ಡಿದರ ನೀತಿಯಲ್ಲಿ ಎಚ್ಚರಿಕೆಯ ನಿಲುವು ತಾಳುತ್ತಿರುವುದರಿಂದ ಹೂಡಿಕೆದಾರರು ಅಮೆರಿಕದ ಖಜಾನೆ ಆಧಾರಿತ ಹೂಡಿಕೆಗಳತ್ತ ಮರಳುತ್ತಿದ್ದಾರೆ ಎಂದು ವರದಿ ತಿಳಿಸಿದೆ.

ಅಮೆರಿಕದ ಆರ್ಥಿಕ ಅಂಕಿಅಂಶಗಳು ನಿರೀಕ್ಷೆಗಿಂತ ಉತ್ತಮವಾಗಿರುವುದು ಹಾಗೂ ಖಜಾನೆ ಬಾಂಡ್‌ಗಳ ಪ್ರತಿಫಲ ಹೆಚ್ಚಿರುವುದು ಡಾಲರ್‌ಗೆ ಮತ್ತಷ್ಟು ಬಲ ನೀಡುತ್ತಿದೆ.

ಇದರ ಪರಿಣಾಮವಾಗಿ ವಿದೇಶಿ ಸಾಂಸ್ಥಿಕ ಹೂಡಿಕೆದಾರರು ಭಾರತೀಯ ಮಾರುಕಟ್ಟೆಗಳತ್ತ ಎಚ್ಚರಿಕೆಯಿಂದ ನಡೆದುಕೊಳ್ಳುತ್ತಿದೆ.

# ನಿಪ್ಪೋ ಥಾರ್ ಮ್ಯಾಕ್ಸ್ ಬಿಡುಗಡೆ

ಬೆಂಗಳೂರು

ಇಂಡೋ ನ್ಯಾಷನಲ್ ಲಿಮಿಟೆಡ್, ತನ್ನ ಅತ್ಯಂತ ಮುಂದುವರಿದ ಕ್ಷಾರೀಯ ಬ್ಯಾಟರಿಯಾದ ನಿಪ್ಪೋ ಥಾರ್ ಮ್ಯಾಕ್ಸ್ ಅನ್ನು ಬಿಡುಗಡೆ ಮಾಡುವುದಾಗಿ ಘೋಷಿಸಿದೆ, ಇದು ಕಂಪನಿಯ ಪ್ರೀಮಿಯಂ ಬ್ಯಾಟರಿ ವಿಭಾಗಕ್ಕೆ ವಿಸ್ತರಣೆಯಲ್ಲಿ ಮಹತ್ವದ ಹೆಜ್ಜೆಯಾಗಿದೆ.




ಸುಧಾರಿತ ಕೆಎಚ್ ತಂತ್ರಜ್ಞಾನದೊಂದಿಗೆ ವಿನ್ಯಾಸಗೊಳಿಸಲಾದ ನಿಪ್ಪೋ ಥಾರ್ ಮ್ಯಾಕ್ಸ್ ಅನ್ನು ಗೇಮಿಂಗ್ ನಿಯಂತ್ರಕಗಳು, ಆಟಿಕೆಗಳು, ಸ್ಮಾರ್ಟ್ ಹೋಮ್ ಸಾಧನಗಳು ಮತ್ತು ವೈರ್‌ಲೆಸ್ ಪರಿಕರಗಳಂತಹ ಹೆಚ್ಚಿನ ಡ್ರೈನ್ ಸಾಧನಗಳಿಗೆ ಉತ್ತಮ ಮತ್ತು ದೀರ್ಘಕಾಲೀನ ಕಾರ್ಯಕ್ಷಮತೆಯನ್ನು ನೀಡಲು ವಿನ್ಯಾಸಗೊಳಿಸಲಾಗಿದೆ. ವಿಶ್ವಾಸಾರ್ಹತೆ ಮತ್ತು ಶಕ್ತಿಯ ಮೇಲೆ ಕೇಂದ್ರೀಕರಿಸಿ, ಉತ್ಪನ್ನವನ್ನು "ಭಾರತದ ಅತ್ಯಂತ ಶಕ್ತಿಶಾಲಿ ಕ್ಷಾರೀಯ ಬ್ಯಾಟರಿ" ಎಂದು ಇರಿಸಲಾಗಿದೆ.

ಪ್ರಸ್ತುತ ಕ್ಷಾರೀಯ ವರ್ಗದ ವ್ಯವಹಾರದ ಸುಮಾರು 20% ರಷ್ಟಿರುವ ಪ್ರೀಮಿಯಂ ಕ್ಷಾರೀಯ ಬ್ಯಾಟರಿ ವಿಭಾಗವು ಸ್ಥಿರವಾದ ಬೆಳವಣಿಗೆಯನ್ನು ಕಾಣುತ್ತಿರುವ ಸಮಯದಲ್ಲಿ ಈ ಬಿಡುಗಡೆ ಬಂದಿದೆ, ಇದು ಬ್ಯಾಟರಿ-ತೀವ್ರ ಸಾಧನಗಳ ಹೆಚ್ಚುತ್ತಿರುವ ಬಳಕೆ ಮತ್ತು ಕಾರ್ಯಕ್ಷಮತೆ-ನೇತೃತ್ವದ ಉತ್ಪನ್ನಗಳಿಗೆ ಹೆಚ್ಚುತ್ತಿರುವ ಗ್ರಾಹಕರ ಆದ್ಯತೆಯಿಂದ ನಡೆಸಲ್ಪಡುತ್ತದೆ.

ನಿಪ್ಪೋ ಥಾರ್ ಮ್ಯಾಕ್ಸ್, ಹೆಚ್ಚಿನ ನೀರಿನ ವ್ಯಯ ತಡೆದುಕೊಳ್ಳುವ ಅನ್ವಯಿಕೆಗಳಲ್ಲಿ ಸ್ಪರ್ಧೆಯ ವಿರುದ್ಧ 20% ಕ್ಕಿಂತ ಹೆಚ್ಚು ದೀರ್ಘ ಕಾರ್ಯಕ್ಷಮತೆಯನ್ನು ನೀಡುತ್ತದೆ, ಆಂತರಿಕ ಪ್ರಯೋಗಾಲಯ ಪರೀಕ್ಷೆಯಿಂದ ಬೆಂಬಲಿತವಾಗಿದೆ,.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com
05/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER


# ಜ್ಞಾನವಿಕಾಸ ಕ್ರಿಯಾ ಯೋಜನೆ ಸಭೆ

ಚಿಂತಾಮಣಿ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಜ್ಞಾನವಿಕಾಸ ಕಾರ್ಯಕ್ರಮದ 2026–27ನೇ ಸಾಲಿನ ಕ್ರಿಯಾ ಯೋಜನೆ ಸಭೆಯನ್ನು ಚಿಂತಾಮಣಿ ನಗರದಲ್ಲಿ ಯಶಸ್ವಿಯಾಗಿ ನಡೆಸಲಾಯಿತು.

ನಗರದಲ್ಲಿರುವ ಸಂಘದ ಕಚೇರಿಯಲ್ಲಿ ನಡೆದ ಈ ಕಾರ್ಯಕ್ರಮವನ್ನು ಜಿಲ್ಲಾ ನಿರ್ದೇಶಕ ಚಿದಾನಂದ (ಬೆಂಗಳೂರು), ಪ್ರಾದೇಶಿಕ ವಿಭಾಗದ ಜ್ಞಾನವಿಕಾಸ ಯೋಜನಾಧಿಕಾರಿ ಸಂಗೀತ ಹಾಗೂ ತಾಲೂಕು ಯೋಜನಾಧಿಕಾರಿಗಳು, ಜ್ಞಾನವಿಕಾಸ ಸಮನ್ವಯಾಧಿಕಾರಿಗಳು ಹಾಗೂ ಎಲ್ಲಾ ಸಂಯೋಜಕರ ಸಮ್ಮುಖದಲ್ಲಿ ದೀಪ ಬೆಳಗುವ ಮೂಲಕ ಉದ್ಘಾಟಿಸಲಾಯಿತು.

ಸಭೆಯಲ್ಲಿ ಮಾತನಾಡಿದ ಜಿಲ್ಲಾ ನಿರ್ದೇಶಕ ಚಿದಾನಂದ ಅವರು, ಜ್ಞಾನವಿಕಾಸ ಕೇಂದ್ರಗಳ ಕಾರ್ಯಪದ್ಧತಿ ಹಾಗೂ ಕ್ರಿಯಾ ಯೋಜನೆಯ ಅನುಷ್ಠಾನದ ಕುರಿತು ವಿವರವಾಗಿ ಮಾಹಿತಿ ನೀಡಿದರು. ಸಂಯೋಜಕರು ತಾಲೂಕಿನಲ್ಲಿ ಮಾದರಿಯಾಗುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಹಾಗೂ ತಮ್ಮ ಕೇಂದ್ರಗಳನ್ನು ಶ್ರೇಷ್ಠತೆಯತ್ತ ಕೊಂಡೊಯ್ಯಬೇಕು ಎಂದು ಸಲಹೆ ನೀಡಿದರು.

ಸದಸ್ಯರೊಂದಿಗೆ ಉತ್ತಮ ಬಾಂಧವ್ಯ ಬೆಳೆಸುವುದು, ಕೇಂದ್ರಗಳ ಗುಣಮಟ್ಟವನ್ನು ಕಾಯ್ದುಕೊಳ್ಳುವುದು, ದಾಖಲಾತಿಗಳನ್ನು ಸಮರ್ಪಕವಾಗಿ ನಿರ್ವಹಿಸುವುದು ಹಾಗೂ ನಿಯಮಾನುಸಾರ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಅತ್ಯಂತ ಅಗತ್ಯ ಎಂದು ಅವರು ಹೇಳಿದರು. ಜೊತೆಗೆ ಮನೆ ಭೇಟಿ ಕಾರ್ಯಕ್ರಮಗಳನ್ನು ನಿಯಮಿತವಾಗಿ ನಡೆಸುವಂತೆ ಸೂಚಿಸಿದರು.

ಪ್ರಾದೇಶಿಕ ಯೋಜನಾಧಿಕಾರಿ ಸಂಗೀತ ಅವರು ಜ್ಞಾನವಿಕಾಸ ಕಾರ್ಯಕ್ರಮದ ಹಿನ್ನೆಲೆ ಹಾಗೂ ಮಹತ್ವದ ಕುರಿತು ಸಂಯೋಜಕರಿಗೆ ಮಾಹಿತಿ ನೀಡಿದರು. ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕಿರು ಪರೀಕ್ಷೆಗಳು ಹಾಗೂ ಗುಂಪು ಚಟುವಟಿಕೆಗಳನ್ನು ನಡೆಸಿ ಸಂಯೋಜಕರಿಗೆ ವಿಷಯವನ್ನು ಮನದಟ್ಟು ಮಾಡಿಸಿದರು.

ಈ ಸಂದರ್ಭದಲ್ಲಿ 2026–27ನೇ ಸಾಲಿನ ಜ್ಞಾನವಿಕಾಸ ಕಾರ್ಯಕ್ರಮದ ಕ್ರಿಯಾ ಯೋಜನೆ ವಿಂಗಡಣೆ ಮಾಡಲಾಯಿತು. ಸಭೆಯಲ್ಲಿ ಎಲ್ಲಾ

# ಮಧುಕರ್ ಶೆಟ್ಟಿ ಜೀವನಾಧಾರಿತ ನಾಟಕಕ್ಕೆ ಮೆಚ್ಚುಗೆ

ಕೋಲಾರ

ಇಲ್ಲನ ಆದಿಮ ಸಾಂಸ್ಕೃತಿಕ ಕೇಂದ್ರದಲ್ಲಿ ನಡೆದ 'ಹುಣ್ಣಿಮೆ ಹಾಡು–230' ಕಾರ್ಯಕ್ರಮವು ಅತಿಥಿಗಳ ಮಾತುಗಳು ಹಾಗೂ ವಿಶೇಷ ನಾಟಕ ಪ್ರದರ್ಶನದಿಂದ ಗಮನ ಸೆಳೆದಿತು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ, ದಿವಂಗತ ಹಿರಿಯ ಪೊಲೀಸ್ ಅಧಿಕಾರಿ ಮಧುಕರ್ ಶೆಟ್ಟಿ ಅವರ ಜೀವನಾಧಾರಿತ 'ಖಾಕಿಯೊಳಗಿನ ಸಂತ' ಎಂಬ ನಾಟಕವನ್ನು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಾಂಸ್ಕೃತಿಕ ಕಲಾ ಕುಟೀರ ತಂಡ ಪ್ರದರ್ಶಿಸಿತು. ಈ ನಾಟಕವು ಪೊಲೀಸ್ ಸೇವೆಯೊಳಗಿನ ಮಾನವೀಯತೆ, ಪ್ರಾಮಾಣಿಕತೆ ಹಾಗೂ ಮಧುಕರ್ ಶೆಟ್ಟಿ ಅವರ ಜೀವನದ ಮಹತ್ವದ ಘಟನೆಗಳನ್ನು ರಂಗಮಂಚದ ಮೇಲೆ ಜೀವಂತವಾಗಿ ತಂದಿತು.



ಕಾರ್ಯಕ್ರಮದಲ್ಲಿ ಬೆಂಗಳೂರು ಪೊಲೀಸ್ ತರಬೇತಿ ಕೇಂದ್ರದ ಡಿಐಜಿಪಿ ಆರ್. ದೇವರಾಜ್ ಮಾತನಾಡಿ, ಆದಿಮ ಸಾಂಸ್ಕೃತಿಕ ಕೇಂದ್ರವು ಸಮಾಜಮುಖಿ ಚಟುವಟಿಕೆಗಳ ಮೂಲಕ ಜನರ ನಡುವೆ ಉತ್ತಮ ಸಾಂಸ್ಕೃತಿಕ ಜಾಗೃತಿ ಮೂಡಿಸುತ್ತಿದೆ ಎಂದು ಶ್ಲಾಘಿಸಿದರು. ಕೇಂದ್ರಕ್ಕೆ ವಸತಿಗೃಹ ಹಾಗೂ ಗ್ರಂಥಾಲಯ ನಿರ್ಮಿಸುವ ಭರವಸೆ ನೀಡಿರುವುದಾಗಿ ತಿಳಿಸಿದ ಅವರು, ಯೋಜನೆಗಳು ವಿಳಂಬವಾದರೂ ಶೀಘ್ರವೇ ಪೂರ್ಣಗೊಳ್ಳಲಿವೆ ಎಂದು ಹೇಳಿದರು.

ಮಧುಕರ್ ಶೆಟ್ಟಿ ಅವರ ವ್ಯಕ್ತಿತ್ವವನ್ನು ಸ್ಮರಿಸಿದ ಅವರು, ಅವರು ಸರಳ ಜೀವನ ನಡೆಸಿದವರು ಹಾಗೂ ಕೆಳಸ್ತರದ ಸಿಬ್ಬಂದಿಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದವರು ಎಂದು ಹೇಳಿದರು. ಮಾನವೀಯತೆ ಎಲ್ಲ ಧರ್ಮಗಳಿಗಿಂತ ದೊಡ್ಡದು ಎಂಬ ಸಂದೇಶವನ್ನು ಅವರು ತಮ್ಮ ಸೇವೆಯಿಂದ ನೀಡಿದ್ದಾರೆ ಎಂದು ಭಾವುಕರಾಗಿ ನೆನಪಿಸಿಕೊಂಡರು.

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ನಿರ್ದೇಶಕರೂ ಆಗಿರುವ ಡಿಐಜಿಪಿ ಅಬ್ದುಲ್ ಅಹದ್ ಮಾತನಾಡಿ, ಸಮಾಜದಲ್ಲಿ ಸಂಸ್ಕೃತಿ ಪ್ರಜ್ಞೆ ಇಲ್ಲದಿದ್ದರೆ ದಿಕ್ಕು ತಪ್ಪುವ ಸಾಧ್ಯತೆ ಇದೆ ಎಂದು ಹೇಳಿದರು. ಮಧುಕರ್ ಶೆಟ್ಟಿ ಅವರಂತಹ ಪ್ರಾಮಾಣಿಕ ಅಧಿಕಾರಿಗಳ ಅಗತ್ಯ ಇಂದಿನ ಸಮಾಜಕ್ಕೆ ಹೆಚ್ಚು ಇದೆ ಎಂದು ಅವರು ಅಭಿಪ್ರಾಯಪಟ್ಟರು.

ವಿವೇಕಾನಂದ ಕಾನೂನು ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ನಾರಾಯಣ ಕ್ಯಾಸಂಬಳ್ಳಿ ಮಾತನಾಡಿ, ಪತ್ರಿಕೋದ್ಯಮ ಸಮಾಜದ ನಾಲ್ಕನೇ ಅಂಗವಾಗಿದ್ದು, ಧ್ವನಿಯಿಲ್ಲದವರ ಧ್ವನಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಗಾಂಧಿ ಮತ್ತು ಅಂಬೇಡ್ಕರ್ ಅವರ ವಿಚಾರಗಳನ್ನು ಉಲ್ಲೇಖಿಸಿದರು. ಮಧುಕರ್ ಶೆಟ್ಟಿ ಅವರ ಸೇವೆ ಸಮಾಜಕ್ಕೆ ಮಾದರಿಯಾಗಿದೆ ಎಂದು ಅವರು ಹೇಳಿದರು.

ಆದಿಮ ಕೇಂದ್ರದ ಅಧ್ಯಕ್ಷ ಎನ್. ಮುನಿಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಅತಿಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ವಿವಿಧ ಕಲಾವಿದರು, ಕವಿಗಳು ಹಾಗೂ ಸಾಮಾಜಿಕ ಮುಖಂಡರು ಭಾಗವಹಿಸಿದ್ದರು.

ನಾಟಕವು ಪ್ರಾಮಾಣಿಕ ಪೊಲೀಸ್ ಅಧಿಕಾರಿಯ ಜೀವನದ ವಿವಿಧ ಹಂತಗಳನ್ನು ಸರಳ ಹಾಗೂ ಪರಿಣಾಮಕಾರಿ ದೃಶ್ಯಗಳ ಮೂಲಕ ಪ್ರದರ್ಶಿಸಿತು. ಹವ್ಯಾಸಿ ಕಲಾವಿದರಾದರೂ ಪಾತ್ರಗಳಿಗೆ ನ್ಯಾಯ ಒದಗಿಸಿದ ಪ್ರದರ್ಶನ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು. ಕಾರ್ಯಕ್ರಮದ ನಿರೂಪಣೆಯನ್ನು ಡಾ. ಕುಪ್ನಳ್ಳಿ ಭೈರಪ್ಪ ನಡೆಸಿಕೊಟ್ಟರು.

# ಒತ್ತುವರಿ: ಕ್ರಮಕ್ಕೆ ಆಗ್ರಹಿಸಿ ಗ್ರಾಮಸ್ಥರ ಪ್ರತಿಭಟನೆ



ತಿಪಟೂರು

ಕಿಬ್ಬನಹಳ್ಳಿ ಹೋಬಳಿಯ ಕರಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೊಮ್ಮೇನಹಳ್ಳಿ ಗ್ರಾಮದಲ್ಲಿ ಸರ್ಕಾರಿ ಜಮೀನಿನ ಒತ್ತುವರಿ ಹಾಗೂ ಪರಿಸರ ಮಾಲಿನ್ಯ ಆರೋಪಗಳನ್ನು ಮುಂದಿಟ್ಟುಕೊಂಡು ಗ್ರಾಮಸ್ಥರು ತೀವ್ರ ಪ್ರತಿಭಟನೆ ನಡೆಸಿದರು.

ಗ್ರಾಮದ ಸರ್ವೆ ನಂಬರ್ 12ರಲ್ಲಿ ಇರುವ ಸುಮಾರು ಏಳುಕುಂಟೆ ಸರ್ಕಾರಿ ಜಮೀನನ್ನು ಪಕ್ಕದ ಸರ್ವೆ ನಂಬರ್ 11ರ ಭೂ ಮಾಲೀಕ ಕೊಪ್ಪ ಹೇಮಂತ್ ಅಕ್ರಮವಾಗಿ ಒತ್ತುವರಿ ಮಾಡಲು ಯತ್ನಿಸುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ದಲಿತ ಮುಖಂಡ ಲೋಕೇಶ್ ಮಾತನಾಡಿ, ಈ ಸರ್ಕಾರಿ ಜಮೀನನ್ನು ತಾಲೂಕು ಆಡಳಿತ ತಕ್ಷಣ ಸಂರಕ್ಷಿಸಬೇಕು ಹಾಗೂ ವಸತಿ ರಹಿತರಿಗೆ ನಿವೇಶನ ಹಂಚಿಕೆ, ಶಾಲಾ ಮೈದಾನ, ದೇವಸ್ಥಾನ ಅಥವಾ ಸಮುದಾಯ ಭವನ ನಿರ್ಮಾಣಕ್ಕೆ ಮೀಸಲಿಡಬೇಕು ಎಂದು ಒತ್ತಾಯಿಸಿದರು. ಜೊತೆಗೆ ಒತ್ತುವರಿ ಆರೋಪದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ವ್ಯಕ್ತಿಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಗ್ರಾಮಸ್ಥ ದಿನೇಶ್ ಮಾತನಾಡಿ, ಬೊಮ್ಮೇನಹಳ್ಳಿ ಹಾಗೂ ಕೋಟೆ ನಾಯಕನಹಳ್ಳಿ ಸಮೀಪ ಈಗಾಗಲೇ ಸರ್ಕಾರಿ ಜಮೀನು ಒತ್ತುವರಿ ಮಾಡಿಕೊಂಡು ತೆಂಗಿನ ಚಿಪ್ಪು ಸುಡುವ ಕಾರ್ಖಾನೆ ಕಾರ್ಯನಿರ್ವಹಿಸುತ್ತಿದ್ದು, ಇದರಿಂದ ತೀವ್ರ ವಾಯು ಮಾಲಿನ್ಯ ಉಂಟಾಗುತ್ತಿದೆ ಎಂದು ಆರೋಪಿಸಿದರು.

ಕಾರ್ಖಾನೆಯಿಂದ ಹೊರಬರುವ ಹೊಗೆಯಿಂದ ಗ್ರಾಮದಲ್ಲಿ ವಾಸಿಸುವ ವಯೋವೃದ್ಧರು, ಮಹಿಳೆಯರು, ಮಕ್ಕಳು ಹಾಗೂ ಬಾಣಂತಿಯರು ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ಅವರು ಹೇಳಿದರು. ಅಂತರ್ಜಲಕ್ಕೂ ಹಾನಿಯಾಗುವ ಸಾಧ್ಯತೆ ಇದೆ ಎಂದು ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದರು.

ರಾಜಕೀಯ ಪ್ರಭಾವ ಬಳಸಿಕೊಂಡು ಸರ್ಕಾರಿ ಜಮೀನನ್ನು ತಮ್ಮ ಹೆಸರಿಗೆ ಮಾಡಿಸಿಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂಬ ಆರೋಪವೂ ಪ್ರತಿಭಟನೆಯಲ್ಲಿ ಕೇಳಿಬಂತು. ಪರಿಸರ ಇಲಾಖೆ ಹಾಗೂ ತಾಲೂಕು ಆಡಳಿತ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದರು.

ಪ್ರತಿಭಟನೆಯ ಸಂದರ್ಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ವಸತಿ ರಹಿತ ಕ್ಷೇಮಾಭಿವೃದ್ಧಿ ಸಂಘದ ನಾಮಫಲಕವನ್ನು ಸ್ಥಳದಲ್ಲಿ ಅಳವಡಿಸಲಾಯಿತು.

ಪ್ರತಿಭಟನೆಯಲ್ಲಿ ಚೇತನ್, ರಾಕಿ, ನಾಗರಾಜ್, ದೇವರಾಜ್, ಉಮೇಶ್, ಸುಬ್ರಹ್ಮಣ್ಯ, ವಿಜಯ್, ಕಾಂತರಾಜು, ಮುನಿರಾಜು ಸೇರಿದಂತೆ ಅನೇಕ ದಲಿತ ಮುಖಂಡರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# 7ರಂದು ಶಿಡ್ಲಘಟ್ಟದಲ್ಲಿ ಸಂಭ್ರಮಾಚರಣೆ: ಬಿ.ವಿ.ರಾಜೀವ್‌ಗೌಡ

ಶಿಡ್ಲಘಟ್ಟ

ಸಂಘಟನಾ ಚತುರ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಹಿನ್ನೆಲೆಯಲ್ಲಿ ಜೂನ್ 7ರಂದು ಭಾನುವಾರ ಶಿಡ್ಲಘಟ್ಟದ ಕಾಂಗ್ರೆಸ್ ಭವನದಲ್ಲಿ ಸಂಭ್ರಮಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮುಖಂಡ ಬಿ.ವಿ.ರಾಜೀವ್‌ಗೌಡ ತಿಳಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂದು ಕಾಂಗ್ರೆಸ್ ಭವನದಲ್ಲಿ ಸುಮಾರು 6 ಸಾವಿರ ಮಂದಿಗೆ ಸಿಹಿ ಹಂಚಿ ಬಿರಿಯಾನಿ ಸೇರಿದಂತೆ ಮಾಂಸಾಹಾರಿ ಊಟದ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಚಿವ ಕೆ.ಎಚ್. ಮುನಿಯಪ್ಪ ಭಾಗವಹಿಸಲಿದ್ದು, ಕ್ಷೇತ್ರದ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ವಿವಿಧ ಪದಾಧಿಕಾರಿಗಳು ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಉಪಸ್ಥಿತರಿರಲಿದ್ದಾರೆ ಎಂದು ವಿವರಿಸಿದರು.

ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅಧಿಕಾರ ಸ್ವೀಕರಿಸಿರುವುದು ಕಾಂಗ್ರೆಸ್ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಮೂಡಿಸಿದ್ದು, ಅದನ್ನು ಸಂಭ್ರಮದಿಂದ ಆಚರಿಸಲು ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ರಾಜೀವ್‌ಗೌಡ ತಿಳಿಸಿದರು.

# ರಾಜ್ಯ ಮಟ್ಟದ 'ಕನ್ನಡ ಸಾಹಿತ್ಯ ಕಲ್ಪತರು' ಪ್ರಶಸ್ತಿಗೆ ಹಾಸ್ಯ ಸಾಹಿತಿ ವೈ.ವಿ.ಗುಂಡರಾವ್ ಆಯ್ಕೆ

ತಿಪಟೂರು

ಬಯಲುಸೀಮೆ ಸಾಮಾಜಿಕ ಹಾಗೂ ಸಾಂಸ್ಕೃತಿಕ ಸಂಘವು ನೀಡುವ ರಾಜ್ಯಮಟ್ಟದ 'ಕನ್ನಡ ಸಾಹಿತ್ಯ ಕಲ್ಪತರು' ಪ್ರಶಸ್ತಿಗೆ ನಾಡಿನ ಪ್ರಸಿದ್ಧ ಹಾಸ್ಯ ಸಾಹಿತಿ ವೈ.ವಿ. ಗುಂಡರಾವ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಎನ್. ಭಾನುಪ್ರಶಾಂತ್ ತಿಳಿಸಿದ್ದಾರೆ.

ಪ್ರಶಸ್ತಿಯು 10,000 ನಗದು, ಫಲಕ ಹಾಗೂ ಸನ್ಮಾನವನ್ನು ಒಳಗೊಂಡಿದ್ದು, ಜೂನ್ 13ರಂದು ತಿಪಟೂರಿನಲ್ಲಿ ನಡೆಯುವ ಸಮಾರಂಭದಲ್ಲಿ ಪ್ರದಾನ ಮಾಡಲಾಗುತ್ತದೆ.

ಆಧ್ಯಾತ್ಮಿಕ ಚಿಂತಕ ಹಾಗೂ ಶ್ರೇಷ್ಠ ವಾಗ್ಮಿಯಾಗಿ ಗುರುತಿಸಿಕೊಂಡಿರುವ ವೈ.ವಿ. ಗುಂಡರಾವ್ ಅವರ ಸಾಹಿತ್ಯ ಹಾಗೂ ಸಮಾಜಮುಖಿ ಸೇವೆಯನ್ನು ಪರಿಗಣಿಸಿ ಈ ಗೌರವ ನೀಡಲಾಗುತ್ತಿದೆ ಎಂದು ಸಂಘ ತಿಳಿಸಿದೆ.

ಪ್ರತಿ ವರ್ಷ ನೀಡಲಾಗುವ ಈ ಪ್ರಶಸ್ತಿ ಈ ಬಾರಿ ಏಳನೇ ಆವೃತ್ತಿಯಾಗಿದ್ದು, ಈವರೆಗೆ ಹಿರಿಯ ಕವಿಗಳು ಡುಂಡಿರಾಜ್, ಬಿ.ಆರ್. ಲಕ್ಷ್ಮಣರಾವ್, ಕನ್ನಡ ಶಾಯರಿ ಕವಿ ಅಸಾದುಲ್ಲಾ ಬೇಗ್, 'ಥಟ್ ಅಂತ ಹೇಳಿ' ಖ್ಯಾತಿಯ ಡಾ. ನಾ. ಸೋಮೇಶ್ವರ, ಕವಯತ್ರಿ ಪ್ರೊ. ಎಂ.ಆರ್. ಕಮಲ, ಮಿಮಿಕ್ರಿ ಕಲಾವಿದ ಮೈಸೂರು ಆನಂದ್ ಹಾಗೂ ರಿಚರ್ಡ್ ಲೂಯಿಸ್ ಸೇರಿದಂತೆ ಹಲವು ಗಣ್ಯರಿಗೆ ಈ ಗೌರವ ನೀಡಲಾಗಿದೆ.

ಬಯಲುಸೀಮೆ ಸಂಘವು ತನ್ನ 25ನೇ ವರ್ಷದ ಸಂಭ್ರಮದ ಅಂಗವಾಗಿ ಈ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಆಯೋಜಿಸುತ್ತಿದೆ.

# ಶಿಕ್ಷಕ ಧರ್ಮೇಶ್ ಅಭಿಮಾನಿಗಳ ಆತ್ಮೀಯ ಬೀಳ್ಕೊಡುಗೆ




ಕೋಲಾರ

ಸಾಮಾನ್ಯ ಶಿಕ್ಷಕನಾದರೂ ತನ್ನ ಸಂಬಳದ ಅರ್ಧಭಾಗ ಜಿಲ್ಲೆಯ ವಿವಿಧ ಸರ್ಕಾರಿ ಶಾಲಾ ಮಕ್ಕಳಿಗೆ ಸಮವಸ್ತ್ರ,ಪುಸ್ತಕ,ಶಾಲೆಗಳಿಗೆ ಧ್ವನಿವರ್ಧಕ, ಫಿಲ್ಟರ್, ತಟ್ಟೆ,ಲೋಟ ಹೀಗೆ ಹತ್ತಾರು ನೆರವು ನೀಡಲು ಬಳಸುತ್ತಿದ್ದ ಮಹಾದಾನಿ ತಾಲ್ಲೂಕಿನ ಸೀಗೇಹಳ್ಳಿ ಶಾಲಾ ಶಿಕ್ಷಕ ಧರ್ಮೇಶ್ ನಿವೃತ್ತರಾಗಿದ್ದು, ಅವರನ್ನು ಎಸ್‌ಡಿಎಂಸಿ ಸದಸ್ಯರು, ಶಿಕ್ಷಕರು, ಅಭಿಮಾನಿಗಳು ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ಕಾರಿ ಶಾಲೆಯ ಶಿಕ್ಷಕರಾಗಿ ನಾವು ಮಕ್ಕಳ ಋಣದಲ್ಲಿದ್ದೇವೆ, ನನ್ನ ಜೀವಮಾನದುದ್ದಕ್ಕೂ ಈ ಮಕ್ಕಳಿಗಾಗಿ ಹಾಗೂ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಲು ನನ್ನ ವೇತನದ ಅರ್ಧಭಾಗವನ್ನು ಪ್ರತಿ ತಿಂಗಳು ಸರ್ಕಾರಿ ಶಾಲೆ ಮಕ್ಕಳಿಗೆ ಮುಡಿಪಾಗಿಡುವುದಾಗಿ ತಿಳಿಸಿ ಅದರಂತೆ ನಡೆದುಕೊಂಡು ಬಂದಿದ್ದರು.

ಮಕ್ಕಳು ಸಂಸ್ಕಾರ ಬೆಳೆಸಿಕೊಳ್ಳಿ, ನಿಮ್ಮ ಪೋಷಕರು ನಿಮ್ಮ ಮೇಲೆ ಹೆಚ್ಚಿನ ನಿರೀಕ್ಷೆಯೊಂದಿಗೆ ಶಾಲೆಗೆ ಕಳುಹಿಸಿದ್ದಾರೆ, ಅವರಿಗೆ ಊಟವಿಲ್ಲದಿದ್ದರೂ ನಿಮ್ಮನ್ನು ಶಾಲೆಗೆ ಕಳುಹಿಸಿದ್ದಾರೆ, ಅವರ ಆಶಯ ಈಡೇರಿಸಲು ಚೆನ್ನಾಗಿ ಓದಿ, ಜೀವನದಲ್ಲಿ ಶಿಸ್ತು ಅತಿ ಮುಖ್ಯವಾಗಿದೆ, ಶಿಸ್ತು,ಶ್ರದ್ಧೆ ಇಲ್ಲವಾದಲ್ಲಿ ನೀವು ಸಾಧನೆ ಮಾಡಲು ಸಾಧ್ಯವಿಲ್ಲ ಎಂದರು.

ನನ್ನ ಎಲ್ಲಾ ಆಶಯಗಳು ಸರ್ಕಾರಿ ಮಕ್ಕಳ ವಿದ್ಯಾರ್ಜನೆಗಾಗಿ ನನ್ನ ಸಂಬಳದಲ್ಲಿ ಕೊಡಿಟ್ಟು ಈ ರೀತಿಯ ಸಮಾಜ ಸೇವೆ ಮಾಡುತ್ತಿರುವುದು ನನಗೆ ತುಂಬಾ ಖುಷಿ ಅನಿಸುತ್ತದೆ ಇದನ್ನು ಕಂಡು ಹಲವಾರು ಟೀಕೆ ಮಾಡಬಹುದಾದರೂ ನನಗೇನು ಚಿಂತೆಯಿಲ್ಲ ಎಂದರು.

ನನ್ನ ಕಾರ್ಯವನ್ನು ನನ್ನ ಉಸಿರಿರುವವರಿಗೂ ಮಾಡುತ್ತಲೇ ಇರುತ್ತೇನೆ ಎಂದ ಅವರು, ಇದನ್ನು ಕೆಲವರು ಸ್ವಯಂ ಪ್ರೇರಿತರಾಗಿ ಅವರವರ ಶಾಲೆಗಳಲ್ಲಿಯೇ ಎಲ್ಲಾ ಸಿಬ್ಬಂದಿಯು ತಿಂಗಳಿಗಿಷ್ಟು ತಮ್ಮ ವೇತನದಲ್ಲಿ ಒಂದು ಕಡೆ ಜಮಾಯಿಸಿ ಆ ಶಾಲಾ ಮಕ್ಕಳಿಗೆ ಅಗತ್ಯವಿರುವ ಪರಿಕರಗಳನ್ನು ಒದಗಿಸುವ ಆಲೋಚನೆ ಎಲ್ಲರಲ್ಲೂ ಬರಲಿ ಎಂದು ಆ ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದರು.

ನಿವೃತ್ತ ಶಿಕ್ಷಣಾಧಿಕಾರಿ ಸಿ.ಆರ್.ಅಶೋಕ್ ಮಾತನಾಡಿ, ಸ್ಥಳೀಯವಾಗಿ ಆ ಊರಿನಲ್ಲಿ ಓದಿದಂತಹ ಅನೇಕ ಮಹನೀಯರುಗಳು ವಿದ್ಯಾರ್ಥಿಗಳು ಜನಪ್ರತಿನಿಧಿಗಳು ಇದ್ದು ಅವರನ್ನು ಗುರುತಿಸುವ ಕೆಲಸ ಆಗಬೇಕಾಗಿದೆ ಇಲಾಖೆಯೂ ಸಹ ಹಳೆಯ ವಿದ್ಯಾರ್ಥಿಗಳ ಸಂಘ ಮಾಡಿ ಅವರಿಂದ ಸಹ ಸಹಾಯ ಪಡೆದು ಶಾಲೆ ಅಭಿವೃದ್ಧಿ ಪಡಿಸುವತ್ತ ಸಾಗಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳು, ಅಧಿಕಾರಿಗಳು, ವಿವಿಧ ಶಾಲೆಗಳ ಶಿಕ್ಷಕರು, ಎಸ್‌ಡಿಎಂಸಿ ಪದಾಧಿಕಾರಿಗಳು, ಗ್ರಾಮಸ್ಥರು ಹಾಜರಿದ್ದು, ಆತ್ಮೀಯವಾಗಿ

# ನ್ಯಾಯಾಧೀಶರ ನೇಮಕಕ್ಕೆ ಸುಪ್ರೀಂ ಅನುಮೋದನೆ

ನವದೆಹಲಿ

ಕರ್ನಾಟಕ ಹೈಕೋರ್ಟ್‌ಗೆ 6 ವಕೀಲರನ್ನು ನ್ಯಾಯಾಧೀಶರನ್ನಾಗಿ ನೇಮಕ ಮಾಡಲು ಸುಪ್ರೀಂಕೋರ್ಟ್ ಕೊಲಿಜಿಯಂ ಅನುಮೋದನೆ ನೀಡಿದೆ.

ಈ ಕುರಿತು ಸುಪ್ರೀಂಕೋರ್ಟ್‌ನ ಕೊಲಿಜಿಯಂ ಹೇಳಿಕೆ ಬಿಡುಗಡೆ ಮಾಡಿದೆ. ಜೂ.2ರಂದು ನಡೆದ ಸಭೆಯಲ್ಲಿ ಕರ್ನಾಟಕ ಹೈಕೋರ್ಟ್ನ ಪೀಠಕ್ಕೆ ರಾಘವೇಂದ್ರ ಸೀತಾರಾಮ್ ಶ್ರೀವತ್ಸ, ಹೇಮಾ ಕುಲಕರ್ಣಿ, ಸುಬ್ರಹ್ಮಣ್ಯ ರಂಗರಾವ್, ತಡಗವಾಡಿ ಪ್ರಕಾಶ ವಿವೇಕಾನಂದ, ಬಕ್ಕೇಶ್ವರ ಪ್ರಮೋದ್, ಹೊಂಬೆ ಗೌಡ ಶಾಂತಿಭೂಷಣ್ ಹೆಸರುಗಳನ್ನು ಭಾರತದ ಮುಖ್ಯ ನ್ಯಾಯಮೂರ್ತಿ ನೇತೃತ್ವದ ಮತ್ತು ಸುಪ್ರೀಂ ಕೋರ್ಟ್‌ನ ಇಬ್ಬರು ಹಿರಿಯ ನ್ಯಾಯಾಧೀಶರನ್ನು ಒಳಗೊಂಡ ಕೊಲಿಜಿಯಂ ಶಿಫಾರಸು ಮಾಡಿದೆ.

ಸುಪ್ರೀಂಕೋರ್ಟ್ ಕೊಲಿಜಿಯಂ ಎಂದರೆ ಭಾರತದ ಸುಪ್ರೀಂಕೋರ್ಟ್ ಮತ್ತು ಹೈಕೋರ್ಟ್ ನ್ಯಾಯಾಧೀಶರನ್ನು ನೇಮಕ ಮಾಡಲು ಮತ್ತು ವರ್ಗಾವಣೆ ಮಾಡಲು ಶಿಫಾರಸು ಮಾಡುವ ನ್ಯಾಯಾಧೀಶರ ಅತ್ಯುನ್ನತ ಸಮಿತಿಯಾಗಿದೆ.

# ಅಗ್ನಿ ದುರಂತ: 21 ಬಲಿ

ನವದೆಹಲಿ

ದಕ್ಷಿಣ ದೆಹಲಿಯ ಮಾಲ್ವಿಯಾ ನಗರದ ರೆಸ್ಟೋರೆಂಟ್‌ವೊಂದರಲ್ಲಿ ಭಾರೀ ಅಗ್ನಿ ಅವಘಡ ಸಂಭವಿಸಿದ್ದು, 21 ಮಂದಿ ಸಾವನ್ನಪ್ಪಿದ್ದಾರೆ. ಸಾವಿಗೀಡಾದವರಲ್ಲಿ ಹೆಚ್ಚಿನವರು ವಿದೇಶಿ ಪ್ರಜೆಗಳು ಎಂದು ದೆಹಲಿ ಪೊಲೀಸರು ಮಾಹಿತಿ ನೀಡಿದ್ದಾರೆ.

ದೆಹಲಿ ದಕ್ಷಿಣ ವಿಭಾಗದ ಡಿಸಿಪಿ ಅನಂತ್ ಮಿತ್ತಲ್ ಅವರು ಪ್ರತಿಕ್ರಿಯಿಸಿ, "ಬೆಳಿಗ್ಗೆ 8:48ಕ್ಕೆ ಮಾಲ್ವಿಯಾ ನಗರದ ಫ್ಲೋರಿಶ್ ಸ್ಟೇ ಬಿ&ಬಿಯಲ್ಲಿ ಬೆಂಕಿ ಕಾಣಿಸಿಕೊಂಡ ಬಗ್ಗೆ ನಮಗೆ ಮಾಹಿತಿ ಬಂತು. ಸ್ಥಳೀಯ ಪೊಲೀಸರು ತಕ್ಷಣವೇ ಸ್ಥಳ ತಲುಪಿ ರಕ್ಷಣಾ, ಸ್ಥಳಾಂತರ ಪ್ರಕ್ರಿಯೆ ಮತ್ತು ಪರಿಹಾರ ಕಾರ್ಯಾಚರಣೆ ಶುರು ಮಾಡಿದರು. 8 ಅಗ್ನಿಶಾಮಕ ದಳದವರ ಸಹಾಯದಿಂದ ಬೆಂಕಿಯನ್ನು ಯಶಸ್ವಿಯಾಗಿ ನಂದಿಸಲಾಯಿತು. ಪೊಲೀಸರು, ಅಗ್ನಿಶಾಮಕ ಸೇವೆಗಳು ಮತ್ತು ಇತರ ತುರ್ತು ಪ್ರತಿಕ್ರಿಯೆ ತಂಡಗಳ ಸಂಘಟಿತ ಪ್ರಯತ್ನಗಳಿಂದ 40ಕ್ಕೂ ಹೆಚ್ಚು ಜನರನ್ನು ರಕ್ಷಿಸಿ ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಸೇರಿಸಲಾಗಿದೆ. ಈ ದುರಂತದಲ್ಲಿ 21 ಜನರು ಸಾವನ್ನಪ್ಪಿದ್ದಾರೆ. ರಕ್ಷಣಾ ಮತ್ತು ಶೋಧ ಕಾರ್ಯಾಚರಣೆಗಳು ಇನ್ನೂ ನಡೆಯುತ್ತಿವೆ. ಸಂತ್ರಸ್ತರಿಗೆ ಸಾಧ್ಯವಿರುವ ಎಲ್ಲ ಸಹಾಯ ಎಲ್ಲಾ ಸಂಬಂಧಿತ ಸಂಸ್ಥೆಗಳು ಸ್ಥಳದಲ್ಲಿ ಒದಗಿಸುತ್ತಿವೆ" ಎಂದು ತಿಳಿಸಿದರು.

ಸ್ಥಳೀಯ ಬಿಜೆಪಿ ಶಾಸಕ ಸತೀಶ್ ಉಪಾಧ್ಯಾಯ ಅವರು ಪ್ರತಿಕ್ರಿಯಿಸಿ, "ಬೆಂಕಿ ಅನಾಹುತ ಹೇಗೆ ಸಂಭವಿಸಿತು ಎಂಬುದು ತನಿಖೆಯ ವಿಷಯ. ಇದು ತುಂಬಾ ದುಃಖಕರ ಘಟನೆ. ಸರ್ಕಾರಿ ಸಂಸ್ಥೆಗಳು ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ. ರಕ್ಷಣಾ ತಂಡಗಳು ತಕ್ಷಣವೇ ಪ್ರತಿಕ್ರಿಯಿಸದೇ ಇರುತ್ತಿದ್ದರೆ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸುತ್ತಿತ್ತು. ಬಾಂಗ್ಲಾದೇಶ ಮತ್ತು ಇತರೆ ಸಾರ್ಕ್ ದೇಶಗಳ ಜನರು ವೈದ್ಯಕೀಯ ಚಿಕಿತ್ಸೆಗಾಗಿ ಬಂದು ಇಲ್ಲಿ ಉಳಿದುಕೊಂಡಿದ್ದರು" ಎಂದು ಮಾಹಿತಿ ನೀಡಿದರು.

ಪ್ರಧಾನಿ ಸಂತಾಪ, ಪರಿಹಾರ ಘೋಷಣೆ: ಮಾಳವೀಯ ನಗರ ಅಗ್ನಿ ಅವಘಡದಲ್ಲಿ ಮೃತಪಟ್ಟವರಿಗೆ ಪ್ರಧಾನಿ ಮೋದಿ ಸಂತಾಪ ಸೂಚಿಸಿದ್ದಾರೆ.

# 'ಪ್ರಾತಃಸ್ಮರಣೀಯವಾದ ಶಿಕ್ಷಕ ವೃತ್ತಿಯ ಘನತೆ ಉಳಿಸಿ'

ಕೋಲಾರ


ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಣೆ ಅತ್ಯಂತ ಖುಷಿ ತಂದಿದೆ, ಇಲ್ಲಿನ ಸಮಾಜ ಕಟ್ಟುವ ಶಿಕ್ಷಕರು, ಅಧಿಕಾರಿಗಳು ನೀಡಿದ ಸಹಕಾರ ಸ್ಮರಣೀಯವಾಗಿದ್ದು, ತಮಗೆ ಉತ್ತಮ ಕೆಲಸ ಮಾಡಿದ ಆತ್ಮತೃಪ್ತಿ ಸಿಕ್ಕಿದೆ ಎಂದು ಡಯಟ್ ಪ್ರಾಂಶುಪಾಲರು ಹಾಗೂ ಶಾಲಾ ಶಿಕ್ಷಣ ಇಲಾಖೆ ಅಕಾಡಿಮಿಕ್ ಉಪನಿರ್ದೇಶಕರೂ ಆದ ಕೃಷ್ಣಮೂರ್ತಿ ತಿಳಿಸಿದರು.

ನಗರದ ಸ್ಕೌಟ್ಸ್‌ಭವನದಲ್ಲಿ ವಿವಿಧ ಶಾಲೆಗಳ ಮುಖ್ಯಶಿಕ್ಷಕರು, ಶಿಕ್ಷಕ ಸಂಘಟನೆಗಳು, ಡಯಟ್ ಅಧಿಕಾರಿ,ಸಿಬ್ಬಂದಿ ನೀಡಿದ ಬೀಳ್ಕೊಡುಗೆ ಸ್ವೀಕರಿಸಿ ಅವರು ಮಾತನಾಡಿ, ಶಿಕ್ಷಕರು ಶಿಕ್ಷಕ ವೃತ್ತಿಯ ಘನತೆ ಉಳಿಸಿ ಕೋಲಾರದ ಘನತೆ ಹೆಚ್ಚಿಸಿ ಎಂದರು.

ಶಿಕ್ಷಣ ಇಲಾಖೆಯಲ್ಲಿ ಅಧಿಕಾರಿಯಾಗಿ ನಿರ್ವಹಿಸಿದ ಜವಾಬ್ದಾರಿಗಳು ನನಗೆ ತೃಪ್ತಿ ತಂದಿದೆ ಮತ್ತು ಪ್ರಾಮಾಣಿಕತೆ, ಬದ್ದತೆಯಿಂದ ಕೆಲಸ ಮಾಡಿದ್ದೇನೆ ಇದಕ್ಕಾಗಿ ಎಲ್ಲರ ಸಹಕಾರವೂ ಸಿಕ್ಕಿದೆ ಎಂದು ಧನ್ಯವಾದ ಸಲ್ಲಿಸಿದರು.

ನನ್ನ ಜೀವನದಲ್ಲಿ ಶಾಲೆಗಳ ಪುಟಾಣಿಗಳೊಂದಿಗೆ ಕಳೆದ ಸಮಯವೇ ನನಗೆ ಅತ್ಯಂತ ಖುಷಿ ನೀಡಿರುವುದು ಎಂದ ಅವರು, ತಮ್ಮ ಅವಧಿಯಲ್ಲಿ ಶಾಲೆಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ಪ್ರಯತ್ನ ಮಾಡಿ ಯಶ ಕಂಡಿದ್ದೇನೆ. ನನ್ನ ಕಾರ್ಯಕ್ಕೆ ಜಿಲ್ಲಾಧಿಕಾರಿಗಳು, ಜಿಪಂ ಸಿಇಒ, ಮಾರ್ಗದರ್ಶನ ನೀಡಿದ್ದಾರೆ ಎಂದರು.

ಜಿಲ್ಲೆಯಲ್ಲಿ ನಾನು ಡಿಡಿಪಿಐ ಆಗಿದ್ದಾಗ ಎಲ್ಲಾ ಶಾಲೆಗಳಿಗೂ ಇ–ಖಾತಾ ಮಾಡಿಸುವಲ್ಲಿ ಡಿಸಿಯವರ ಮಾರ್ಗದರ್ಶನದಲ್ಲಿ ಯಶಸ್ಸು ಸಾಧಿಸಿದ್ದೇವೆ, ಈ ಕಾರ್ಯ ತಮಗೆ ಹೆಚ್ಚಿನ ಸಂತಸ ತಂದಿದೆ ಎಂದರು.



ಇದಾದ ನಂತರ ಶಿಕ್ಷಕರಿಗೆ ಮಾರ್ಗದರ್ಶನ,ತರಬೇತಿ ನೀಡುವ ಡಯಟ್ ಪ್ರಾಂಶುಪಾಲನಾಗಿಯೂ ಮಾಡಿದ ಕೆಲಸದಿಂದ ಖುಷಿ ಸಿಕ್ಕಿದೆ ಎಂದ ಅವರು, ಕೋಲಾರ ಜಿಲ್ಲೆಯಲ್ಲಿ ಮಾಡಿದ ಕೆಲಸ, ಇಲ್ಲಿನವರ ಸಹಕಾರ ಮರೆಯಲು ಸಾಧ್ಯವಿಲ್ಲ ಎಂದರು.

ತಮ್ಮ ತಂದೆ ತಾಯಿಯನ್ನು ಹಾಗೂ ತಮಗೆ ಕೆಲಸ ಸಿಕ್ಕಂತ ದಿನಗಳಲ್ಲಿ ತಾವು ವಿವಿಧ ಸ್ಥಳಗಳಲ್ಲಿ ಮತ್ತು ಅಧಿಕಾರದಲ್ಲಿ ಭಾಗವಹಿಸಿದಂತಹ ದಿನಗಳಲ್ಲೂ ನೆನೆಸಿಕೊಂಡು ಭಾವುಕರಾದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಅಲ್ಮಾಸ್ ಫರ್ವೀನ್ ತಾಜ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಕರಾಗಿ ಮಾಡುವ ಕೆಲಸ ನಮ್ಮ ಜೀವನವಿಡೀ ನೆನಪಿನಲ್ಲಿರುತ್ತದೆ, ಇಂತಹ ಪವಿತ್ರ ವೃತ್ತಿಯಿಂದ ಬಂದವರಾಗಿದ್ದು, ನಂತರ ಅಧಿಕಾರಿಯಾಗಿ ಅದೇ ಶಿಕ್ಷಕರ ನೇತೃತ್ವ ವಹಿಸಿ ಮುನ್ನಡೆಯುವುದು ಜೀವನದ ಸಾರ್ಥಕತೆ ಎಂದು ತಿಳಿಸಿದರು.

ಡಯಟ್ ಪ್ರಾಂಶುಪಾಲ ನಂಜುಂಡಯ್ಯ ಮಾತನಾಡಿ, ಅವರೊಂದಿಗೆ ನಾನು ಕೆಲಸ ಮಾಡಿದ್ದು, ಅವರ ಸರಳತೆ, ಸಜ್ಜನಿಕೆ ಮೆಚ್ಚುವಂತದ್ದು, ಅವರ ನಿವೃತ್ತಿ ಜೀವನವೂ ಅವರಿಗೆ ಹೆಚ್ಚಿನ ಸಂತಸ ತರಿಸಲಿದೆ ಎಂದು ತಿಳಿಸಿ, ಡಯಟ್ ಪರವಾಗಿ ಅಭಿನಂದನೆ ಸಲ್ಲಿಸಿದರು.

ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ಕನ್ನಯ್ಯ ಮಾತನಾಡಿ, ಶೈಕ್ಷಣಿಕವಾಗಿ ಚಟುವಟಿಕೆಗಳನ್ನು ಕೈಗೊಳ್ಳಲು, ಆಡಳಿತನಡೆಸಲು ಅವರು ಡಿಡಿಪಿಐ ಆಗಿ ಅವರು ನೀಡಿದ ಮಾರ್ಗದರ್ಶನ ಶ್ಲಾಘನೀಯವಾಗಿದ್ದು, ಅವರ ನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು.

ಅಭಿನಂದನಾ ಭಾಷಣ ಮಾಡಿದ ಡಯಟ್ ಉಪನ್ಯಾಸಕ ಬಾಲಾಜಿ, ಸರ್ಕಾರಿ ನೌಕರಿಯಲ್ಲಿ ನಿವೃತ್ತಿ ಸಾಮಾನ್ಯ ಆದರೆ ಹೆಚ್ಚು ಕಾಲ ಶಿಕ್ಷಕರಾಗಿ ಅಧಿಕಾರಿಯಾಗಿ ಎಲ್ಲರ ಅಭಿಮಾನ ಸಂಪಾದಿಸಿ ಹೊರ ಹೋಗುವಾಗ ಮನಸ್ಸು ಭಾರವಾಗಿರುತ್ತದೆ, ಸಹೋದ್ಯೋಗಿಗಳೊಂದಿಗೆ ಇದ್ದ ಸಂಬಂಧ ಆತ್ಮೀಯತೆ ಇನ್ನು ಸಿಗಲಾರದು ಎಂಬ ಭಾವನೆ ಇಣುಕಿ ನೋಡುತ್ತದೆ ಎಂದು ತಿಳಿಸಿ ಶುಭ ಕೋರಿದರು.

ಡಯಟ್ ಉಪನ್ಯಾಸಕ ನಾರಾಯಣಸ್ವಾಮಿ ನಿರೂಪಿಸಿದ ಕಾರ್ಯಕ್ರಮದಲ್ಲಿ ಜಿಲ್ಲಾ ಶಿಕ್ಷಣಾಧಿಕಾರಿ ಡಾ.ಎಸ್.ಆರ್.ವೀಣಾ, ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಮೋಹನ್ ಬಾಬು, ಬಿ.ಜಿ.ನಾರಾಯಣಸ್ವಾಮಿ, ರಘುನಾಥರೆಡ್ಡಿ, ವಿಷಯಪರಿವೀಕ್ಷಕರಾದ ಶಂಕರೇಗೌಡ, ಸಮೀವುಲ್ಲ, ಶರಣಪ್ಪಜಮಾದಾರ್, ಸ್ಕೌಟ್ ಬಾಬು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ತಾಲ್ಲೂಕು ಅಧ್ಯಕ್ಷ ವೆಂಕಟಾಚಲಪತಿಗೌಡ, ಎಸ್ಸಿಎಸ್ಟಿ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಮುನಿಯಪ್ಪ, ನೌಕರರ ಸಂಘದ ನಿರ್ದೇಶಕ ಗೋವಿಂದ್, ಡಯಟ್ ಉಪನ್ಯಾಸಕರು, ವಿವಿಧ ಶಿಕ್ಷಕ ಸಂಘಟನೆಗಳ ಮುಖಂಡರು ಹಾಜರಿದ್ದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
05/06/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

ಬೆಂ.ಗ್ರಾ ಜಿಲ್ಲೆ

ಪ್ರತಿ ವರ್ಷ ಜೂನ್ 12 ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಿಸಲಾಗುತ್ತಿದ್ದು, ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ ಸೂಚಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಂತಾರಾಷ್ಟ್ರೀಯ ಕಾರ್ಮಿಕ ಸಂಸ್ಥೆಯು 2002 ರಲ್ಲಿ ಜೂನ್ 12 ದಿನವನ್ನು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ ಎಂದು ಘೋಷಣೆ ಮಾಡಿದೆ ಅಂದಿನಿಂದ ಪ್ರತಿ ವರ್ಷ ಜೂನ್ 12 ರಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನವನ್ನು ಆಚರಿಸಲಾಗುತ್ತಿದೆ. "ಬಾಲಕಾರ್ಮಿಕತೆಗೆ ರೆಡ್ ಕಾರ್ಡ್: ಮಕ್ಕಳಿಗೆ ನ್ಯಾಯಯುತ ಬಾಲ್ಯ, ವಯಸ್ಕರಿಗೆ ಘನತೆಯ ಕೆಲಸ" ಎಂಬುದು ಈ ವರ್ಷದ ಘೋಷವಾಕ್ಯ ಎಂದು ಹೇಳಿದರು.

ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆಯನ್ನು ಜಿಲ್ಲಾಮಟ್ಟದಲ್ಲಿ ಜೂನ್ 12 ರಂದು ದೊಡ್ಡಬಳ್ಳಾಪುರದ ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದ ಸರ್ಕಾರಿ ಪ್ರೌಢಶಾಲೆಯಲ್ಲಿ ಆಚರಿಸಲು ತೀರ್ಮಾನಿಸಲಾಗಿದೆ. ಅಲ್ಲಿ ಸಾಕಷ್ಟು ಕೈಗಾರಿಕೆಗಳು, ಕಾರ್ಮಿಕರು ಇರುವುದರಿಂದ ಅಂದು ಜಾಗೃತಿ ಜಾಥಾ ನಡೆಯಲಿದ್ದು ಕಾರ್ಮಿಕರಿಗೆ, ಸಾರ್ವಜನಿಕರಿಗೆ ಅರಿವು ಮೂಡಿಸಲಾಗುವುದು ಎಂದರು.

ಜಾಥಾ ಕಾರ್ಯಕ್ರಮದಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಲಿದ್ದು ಅವರಿಗೆ ಟಿ-ಶರ್ಟ್ ಮತ್ತು ಟೋಪಿ ವಿತರಿಸಲು, ಕಾರ್ಯಕ್ರಮಕ್ಕೆ ಲಘು ಉಪಹಾರದ ವ್ಯವಸ್ಥೆ ಸೇರಿದಂತೆ ಅಗತ್ಯ ಸಿದ್ಧತೆ ಕೈಗೊಳ್ಳಲು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಡಿಸಿ ಸೂಚಿಸಿದರು.

ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಾದ್ಯಂತ ಕೈಗಾರಿಕೆ, ಕಾರ್ಖಾನೆ, ವಿವಿಧ ವಾಣಿಜ್ಯ ಸಂಸ್ಥೆಗಳ ಮೇಲೆ ಅಧಿಕಾರಿಗಳ ಜಂಟಿ ದಾಳಿ ನಡೆಸಿ 28 ಬಾಲ ಕಾರ್ಮಿಕರನ್ನು ರಕ್ಷಿಸಲಾಗಿದೆ. ರಕ್ಷಿಸಲ್ಪಟ್ಟ ಬಾಲ ಹಾಗೂ ಕಿಶೋರ ಕಾರ್ಮಿಕರಿಗೆ ಪುನರ್ವಸತಿ ಒದಗಿಸಲಾಗಿ ಮಕ್ಕಳ ಶಿಕ್ಷಣ, ಕುಟುಂಬ ನಿರ್ವಹಣೆ, ಜೊತೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಅವರ ಜೀವನ ಸುಧಾರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದ್ದು 18 ವರ್ಷದೊಳಗಿನ ಮಕ್ಕಳನ್ನು ಯಾವುದೇ ಕ್ಷೇತ್ರದಲ್ಲಿ ಕೆಲಸಕ್ಕೆ ನೇಮಿಸಿ ಕೊಂಡಿರುವುದು ಕಂಡುಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ 1098 ಮತ್ತು ಪೊಲೀಸ್ ಇಲಾಖೆಯ ಸಹಾಯವಾಣಿ ಸಂಖ್ಯೆ 112 ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ.

ಸಭೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀ ಶೈಲ ಭೀಮಸೇನ ಬಾಗಡಿ, ನ್ಯಾ. ನಿತೀಶ್, ಕಾರ್ಮಿಕ ಅಧಿಕಾರಿ ಮುಕುಂದ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಕೊಟ್ಟ ಅವಕಾಶ ಜನರ ಒಳಿತಿಗಾಗಿ ಮುಡಿಪು: ಬೈರತಿ ಸುರೇಶ್

ಬೆಂಗಳೂರು



ನಾನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ಸರ್ಕಾರದಲ್ಲಿ ಸಚಿವನಾಗುತ್ತಿರುವುದಕ್ಕೆ ಅತೀವ ಸಂತಸವಾಗುತ್ತಿದೆ ಎಂದು ಸಂಪುಟ ದರ್ಜೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಬೈರತಿ ಸುರೇಶ್ ಹೇಳಿದ್ದಾರೆ.

ಪ್ರಮಾಣವಚನ ಸ್ವೀಕರಿಸಿದ ನಂತರ ಪ್ರತಿಕ್ರಿಯೆ ನೀಡಿರುವ ಅವರು, ಎಐಸಿಸಿ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕ ಗಾಂಧಿ, ಕಾಂಗ್ರೆಸ್ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ರಣದೀಪ್ ಸುರ್ಜೇವಾಲ, ಕೆ.ಸಿ.ವೇಣುಗೋಪಾಲ್, ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಎಲ್ಲಾ ಇತರ ನಾಯಕರು ನನ್ನ ಮೇಲೆ ನಂಬಿಕೆ, ವಿಶ್ವಾಸವಿಟ್ಟು ಸಚಿವನನ್ನಾಗಿ ಆಯ್ಕೆ ಮಾಡಿರುವುದಕ್ಕೆ ಧನ್ಯವಾದಗಳನ್ನು ತಿಳಿಸುತ್ತಿದ್ದೇನೆ ಎಂದರು.

ಈ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುತ್ತೇನೆ. ಈ ಹೊಣೆಗಾರಿಕೆ ಮೂಲಕ ರಾಜ್ಯದ ಜನರ ಸೇವೆಯನ್ನು ಮಾಡುತ್ತೇನೆ. ವಿಶೇಷವಾಗಿ ನನ್ನನ್ನು ಎರಡು ಬಾರಿ ವಿಧಾನಸಭೆಗೆ ಆಯ್ಕೆ ಮಾಡಿರುವ ಹೆಬ್ಬಾಳ ಕ್ಷೇತ್ರದ ಜನತೆಗೆ ಧನ್ಯವಾದಗಳನ್ನು ಅರ್ಪಿಸುತ್ತಿದ್ದೇನೆ ಎಂದು ಹೇಳಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ ಖುದ್ದು ದೂರವಾಣಿ ಕರೆ ಮಾಡಿ ಮಂತ್ರಿಯಾಗಿ ಆಯ್ಕೆ ಮಾಡಲಾಗಿದ್ದು, ಪ್ರಮಾಣ ವಚನ ಸ್ವೀಕರಿಸುವಂತೆ ತಿಳಿಸಿದರು. ನಾನು ಯಾವುದೇ ಖಾತೆಗೆ ಬೇಡಿಕೆ ಇಟ್ಟಿಲ್ಲ. ಯಾವುದೇ ಖಾತೆ ನೀಡಿದರೂ ಸಂತಸದಿಂದ ಸ್ವೀಕರಿಸಿ ಆ ಮೂಲಕ ರಾಜ್ಯದ ಜನತೆಯ ಸೇವೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಈ ಮೂಲಕ ಜನರ ಪರವಾಗಿರುವ ಏಕೈಕ ಪಕ್ಷವೆಂದರೆ ಕಾಂಗ್ರೆಸ್. ನಮ್ಮ ಪಕ್ಷಕ್ಕೆ ಮತ್ತು ರಾಜ್ಯಕ್ಕೆ ಒಳ್ಳೆಯ ಹೆಸರನ್ನು ತರುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇನೆ ಎಂದೂ ಅವರು ತಿಳಿಸಿದರು.

# ಬ್ರಾಹ್ಮಣ ಸಮುದಾಯಕ್ಕೆ ಪ್ರಾತಿನಿಧ್ಯ ನೀಡಲು ನೂತನ ಸಿಎಂಗೆ ಮನವಿ

ಬೆಂಗಳೂರು



ಕರ್ನಾಟಕ ಸರ್ಕಾರದ 25ನೇ ನೂತನ ಮುಖ್ಯಮಂತ್ರಿಗಳಾಗಿ ಇಂದು ಸಂಜೆ ಅಧಿಕಾರ ಪಡೆದ ಡಿ.ಕೆ.ಶಿವಕುಮಾರ್ ಅವರಿಗೆ ಮತ್ತು ಅವರ ಮಂತ್ರಿ ಮಂಡಲದ ಗೌರವಾನ್ವಿತ ಸದಸ್ಯರಿಗೆ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದಿಂದ ಶುಭಾಶಯಗಳೊಂದಿಗೆ ಅಭಿನಂದನೆಗಳನ್ನು ಸಲ್ಲಿಸಲಾಗಿದೆ. ಇದರ ಜೊತೆಗೆ ಮುಂದಿನ ಸಂಪುಟ ವಿಸ್ತರಣೆಯ ಸಮಾರಂಭದಲ್ಲಿ ಬ್ರಾಹ್ಮಣ ಸಮುದಾಯದವರಿಗೆ ಪ್ರಾತಿನಿಧ್ಯ ನೀಡುವಂತೆ ಕೋರಲಾಗಿದೆ.

ಈ ಕುರಿತು ಮಹಾಸಭಾದ ರಾಜ್ಯಾಧ್ಯಕ್ಷ ಎಸ್.ರಘುನಾಥ್ ಅವರು ಪತ್ರಿಕಾ ಪ್ರಕಟಣೆ ನೀಡಿದ್ದು, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ಎಲ್ಲಾ ಪದಾಧಿಕಾರಿಗಳು ಡಿ.ಕೆ.ಶಿವಕುಮಾರ್ ಅವರ ನೂತನ ಸರ್ಕಾರಕ್ಕೆ ಅಭಿನಂದನೆ ಹಾಗೂ ಶುಭಾಶಯಗಳನ್ನು ಕೋರುತ್ತೇವೆ ಎಂದು ಅವರು ತಿಳಿಸಿದ್ದಾರೆ.

ಸುಮಾರು 40 ವರ್ಷದ ಅವಿರತ ರಾಜಕೀಯ ಪರಿಶ್ರಮ ಹಾಗೂ ಅನುಭವಗಳ ಭಂಡಾರದ ಹಿನ್ನೆಲೆಯಲ್ಲಿ ತಮಗೆ ದೇವರು ರಾಜ್ಯದ ಆಡಳಿತದ ಜವಾಬ್ದಾರಿಯನ್ನು ಕರುಣಿಸಿದ್ದಾನೆ. ಪ್ರೀತಿ, ಕರುಣೆ ಹಾಗೂ ಅತ್ಯಂತ ನ್ಯಾಯಯುತವಾಗಿ ತಾವು ಆಡಳಿತವನ್ನು ರಾಜ್ಯದ ಜನತೆಗೆ ನೀಡಿ ಯಶಸ್ವೀ ಮುಖ್ಯಮಂತ್ರಿಗಳಾಗಬೇಕೆಂದು ಆಶಿಸುತ್ತೇವೆ. ತಾವು ಮುಂದಿನ ಸಂಪುಟ ವಿಸ್ತರಣೆಯ ಸಮಾರಂಭದಲ್ಲಿ ಬ್ರಾಹ್ಮಣ ಸಮುದಾಯಕ್ಕೂ ಪ್ರಾತಿನಿಧ್ಯ ನೀಡುತ್ತೀರಿ ಎಂಬ ವಿಶ್ವಾಸವನ್ನು ಹೊಂದಿದ್ದೇವೆ ಎಂದೂ ಅವರು ತಿಳಿಸಿದ್ದಾರೆ.



ತಿಪಟೂರು ನಗರದ ಮಾರನಗೆರೆಯ ಶ್ರೀ ಪ್ಲೇಗಿನಮ್ಮ ದೇವಿ ಮತ್ತು ಶ್ರೀ ಗಂಗಮ್ಮ ದೇವಿಯವರ 22ನೇ ವರ್ಷದ ಜಾತ್ರಾ ಮಹೋತ್ಸವ ಅದ್ದೂರಿಯಾಗಿ ಜರುಗಿತು. ನಗರಸಭೆ ಮಾಜಿ ಸದಸ್ಯ ನಿಜಗುಣ,ಕರವೇ ಅಧ್ಯಕ್ಷ ಸತೀಶ್ ಮಾರನಗೆರೆ, ಜೈ ರಾಜ್, ಗೋಪಾಲ್, ವಸಂತ್, ಮನು, ಹರೀಶ್, ಅಜಿತ್, ಶಂಕರ್, ಶಶಿಧರ್ ಮತ್ತು ಪ್ರಜ್ವಲ್ ಸೇರಿದಂತೆ ಬಡಾವಣೆಯ ಮುಖಂಡರು ಹಾಗೂ ಗ್ರಾಮಸ್ಥರು ಹಾಜರಿದ್ದರು.

# 'ಪಲ್ಸ್ ಪೋಲಿಯೋ ಲಸಿಕೆಯಿಂದ ಮಕ್ಕಳು ವಂಚಿತರಾಗದಂತೆ ಕ್ರಮವಹಿಸಿ'

ಬೆಂ.ಗ್ರಾ.ಜಿಲ್ಲೆ

ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 01 ರವರೆಗೆ ರಾಷ್ಟ್ರೀಯ ಪಲ್ಸ್ ಪೊಲಿಯೋ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಪೋಷಕರು ತಮ್ಮ 0–5 ವರ್ಷದೊಳಗಿನ ಮಕ್ಕಳನ್ನು ಹತ್ತಿರದ ಪೊಲಿಯೋ ಬೂತ್‌ಗಳಿಗೆ ಕರೆದುಕೊಂಡು ಬಂದು ಉಚಿತ ಪೊಲಿಯೋ ಲಸಿಕೆಯನ್ನು ತಪ್ಪದೆ ಹಾಕಿಸಬೇಕು ಎಂದು ಜಿಲ್ಲಾಧಿಕಾರಿ ಡಾ ಕೆ.ಎನ್ ಅನುರಾಧ ಹೇಳಿದರು.



ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ಬುಧವಾರ ನಡೆದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ 'ಜಿಲ್ಲಾ ಮಟ್ಟದ ಟಾಸ್ಕ್ ಪೋರ್ಸ್ ಸಮಿತಿ ಸಭೆ'ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಐದು ವರ್ಷದೊಳಗಿನ ಯಾವುದೇ ಮಕ್ಕಳು ಪಲ್ಸ್ ಪೋಲಿಯೋ ಲಸಿಕೆಯಿಂದ ವಂಚಿತರಾಗದಂತೆ ಎಲ್ಲಾ ಮಕ್ಕಳಿಗೂ ತಪ್ಪದೇ ಲಸಿಕೆ ಹಾಕಿಸಲು ಆರೋಗ್ಯ ಇಲಾಖೆ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು. ಆಶಾ, ಅಂಗನವಾಡಿ ಆರೋಗ್ಯಧಿಕಾರಿಗಳು ಪಲ್ಸ್ ಪೋಲಿಯೋ ಲಸಿಕೆ ಬಗ್ಗೆ ಅರಿವು ಮೂಡಿಸಿ ಎಂದರು.

ಗ್ರಾಮೀಣ ಪ್ರದೇಶದಲ್ಲಿ ಪೋಲಿಯೋ ಲಸಿಕೆ ಅಭಿಯಾನದ ಕುರಿತು ಧ್ವನಿವರ್ಧಕ ಮೂಲಕ ವ್ಯಾಪಕ ಜಾಗೃತಿ ಮೂಡಿಸಬೇಕು. ಎನ್.ಸಿ.ಸಿ ಹಾಗೂ ಎನ್.ಎಸ್.ಎಸ್ ವಿದ್ಯಾರ್ಥಿಗಳ ಸಹಕಾರ ಪಡೆದುಕೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯ ಎಲ್ಲಾ ಸರ್ಕಾರಿ ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಮ್ಮ ಕ್ಲಿನಿಕ್‌ಗಳಲ್ಲಿ ಹಾಗೂ ಆಯ್ದ ಶಾಲಾ, ಅಂಗನವಾಡಿ ಕೇಂದ್ರಗಳು, ಸಾರ್ವಜನಿಕ ಸ್ಥಳಗಳಾದ ಬಸ್ ನಿಲ್ದಾಣ, ರೈಲು ನಿಲ್ದಾಣ, ಮಾರುಕಟ್ಟೆ, ರಸ್ತೆ ಟೋಲ್ ಗೇಟ್‌ಗಳಲ್ಲಿ ಪೊಲಿಯೋ ಬೂತ್ ಗಳನ್ನು ತೆರೆಯಲಾಗುತ್ತದೆ ಎಂದರು.

ಗರ್ಭಿಣಿಯರಿಗೆ ಸೂಕ್ತ ಲಸಿಕೆ ಸಿಗಲಿ: ಜಿಲ್ಲೆಯಲ್ಲಿ ಗರ್ಭಿಣಿ, ಬಾಣಂತಿಯರಿಗೆ ಗರ್ಭಾವಸ್ಥೆಯಿಂದ ಹೆರಿಗೆ ಆಗುವ ವರೆಗೂ ಸಮಯಕ್ಕೆ ಸರಿಯಾಗಿ ಆರೋಗ್ಯ ತಪಾಸಣೆ ಹಾಗೂ ಸೂಕ್ತ ಲಸಿಕೆಗಳು ತಪ್ಪದೇ ನೀಡಬೇಕು. ಹೆರಿಗೆ ನಂತರದಲ್ಲಿ ತಾಯಿ ಮಗುವಿಗೆ ಒಳ್ಳೆಯ ಆರೈಕೆ ಸಿಗುವಂತಾಗಬೇಕು.

ತಾಯಿ ಹಾಗೂ ಶಿಶು ಮರಣ ತಡೆಯಿರಿ: ಜಿಲ್ಲೆಯಲ್ಲಿ ಹೆರಿಗೆ ಸಮಯದಲ್ಲಿ ಯಾವುದೇ ಬಾಣಂತಿಯರು ಹಾಗೂ ಶಿಶು ಮರಣ ಸಂಭವಿಸದಂತೆ ಅಗತ್ಯ ವೈದ್ಯಕೀಯ ಸೇವೆ ಸಿಗಬೇಕು. ಹೆರಿಗೆಗೆ ಬರುವ ಗರ್ಭಿಣಿಯರಿಗೆ ಸುಖಾಸುಮ್ಮನೆ ಬೇರೆ ಆಸ್ಪತ್ರೆಗೆ ಕಳುಹಿಸಿದರೆ ಸಂಬಂಧಪಟ್ಟ ವೈದ್ಯರು ಹಾಗೂ ಸಿಬ್ಬಂದಿ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಡಿಸಿ ಎಚ್ಚರಿಕೆ ನೀಡಿದರು.

ಹೆಚ್.ಪಿ.ವಿ ಲಸಿಕೆ ಅರಿವು ಹೆಚ್ಚಿಸಿ:

ಹೆಚ್‌ಪಿವಿ ಲಸಿಕೆಯು ಹೆಣ್ಮಕ್ಕಳಲ್ಲಿ ಗರ್ಭಕಂಠದ ಕ್ಯಾನ್ಸರ್ ಬರದಂತೆ ರಕ್ಷಣೆ ನೀಡುತ್ತದೆ. ಜಿಲ್ಲೆಯ ಶಾಲಾ–ಕಾಲೇಜುಗಳಲ್ಲಿನ ಹೆಣ್ಮಕ್ಕಳಲ್ಲಿ ಲಸಿಕೆ ಕುರಿತು ಹೆಚ್ಚಿನ ಅರಿವು ಮೂಡಿಸಿ, ಲಸಿಕೆ ಹಾಕಿಸಿಕೊಳ್ಳುವಂತೆ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.

ಶಾಲಾ–ಕಾಲೇಜುಗಳ ಸುತ್ತಮುತ್ತ ತಂಬಾಕು ಉತ್ಪನ್ನಗಳ ಮಾರಾಟ ಮಾಡುವುದನ್ನು ತಡೆಗಟ್ಟಬೇಕು. ಶಾಲೆಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಅವಕಾಶವಿಲ್ಲ. ನಿಯಮಬಾಹಿರವಾಗಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಾರ್ವಜನಿಕ ಸ್ಥಳದಲ್ಲಿ ಧೂಮಪಾನ ಮಾಡುವುದು ಕಂಡುಬಂದರೆ ಹತ್ತಿರದ ಪೊಲೀಸ್ ಠಾಣೆಗೆ ದೂರು ನೀಡಿ. ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು ಕಡ್ಡಾಯವಾಗಿ ಮೂರು ತಿಂಗಳಗೊಮ್ಮೆ ಆಯಾ ತಾಲ್ಲೂಕಿನ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ತಂಬಾಕು ನಿಯಂತ್ರಣ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಲು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ಅಧಿಕಾರಿ ಲಕ್ಕಾ ಕೃಷ್ಣಾರೆಡ್ಡಿ, ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳಾದ ಡಾ.ಸೀಮಾ ರುದ್ರಪ್ಪ ಮಾಬಳೆ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ. ಹೇಮಾವತಿ, ತಾಲ್ಲೂಕು ಆರೋಗ್ಯಾಧಿಕಾರಿಗಳು, ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಪ್ರಮಾಣ ವಚನ ಸ್ವೀಕಾರ; ಬಸ್ ನಿಲ್ದಾಣಗಳಲ್ಲಿ ನೇರಪ್ರಸಾರ

ರಾಮನಗರ




ರಾಜ್ಯದ ನೂತನ ಮುಖ್ಯಮಂತ್ರಿಗಳಾಗಿ ಡಿ.ಕೆ. ಶಿವಕುಮಾರ್ ಅವರ ಪ್ರಮಾಣ ವಚನ ಕಾರ್ಯಕ್ರಮ ಜೂ.3ರ ಬುಧವಾರ ಸಂಜೆ ಬೆಂಗಳೂರಿನ ಲೋಕಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಪ್ರಮಾಣ ವಚನ ಕಾರ್ಯಕ್ರಮದ ನೇರ ಪ್ರಸಾರವನ್ನು ರಾಮನಗರದ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರು ಹಾಗೂ ಸಾರ್ವಜನಿಕರು ವೀಕ್ಷಣೆಗೆ ವ್ಯವಸ್ಥೆ ಮಾಡಲಾಗಿತ್ತು.

ಬೆಂಗಳೂರಿನ ಲೋಕ ಭವನದ ಗಾಜಿನ ಮನೆಯಲ್ಲಿ ಆಯೋಜಿಸಲಾಗಿರುವ ಭವ್ಯ ಸಮಾರಂಭದಲ್ಲಿ ಮುಖ್ಯಮಂತ್ರಿಗಳು ಹಾಗೂ ಅವರ ಸಂಪುಟದ ಸಚಿವರು ಪ್ರಮಾಣ ವಚನ ಸ್ವೀಕರಿಸಿದರು. ಈ ಐತಿಹಾಸಿಕ ಮತ್ತು ಮಹತ್ವದ ಕ್ಷಣವನ್ನು ಸಾರ್ವಜನಿಕರು ಕಣ್ತುಂಬಿಕೊಳ್ಳಲು ರಾಜ್ಯದ ಆಯ್ದ 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ನೇರ ಪ್ರಸಾರದ ವ್ಯವಸ್ಥೆ ಮಾಡಲಾಗಿತ್ತು.

ರಾಜ್ಯದ ಜನತೆಗೆ ಈ ಮಹತ್ವದ ಕಾರ್ಯಕ್ರಮವನ್ನು ತಲುಪಿಸುವ ಉದ್ದೇಶದಿಂದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ 'ವೃತ್ತಿ ಸೊಲ್ಯೂಷನ್ಸ್ ಲಿಮಿಟೆಡ್' ಸಂಸ್ಥೆಯ ಸಹಯೋಗದಲ್ಲಿ ವಿಶೇಷ ವ್ಯವಸ್ಥೆ ಮಾಡಲಾಗಿತ್ತು.

ರಾಜ್ಯಾದ್ಯಂತ ಇರುವ ಪ್ರಮುಖ 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಅಳವಡಿಸಲಾಗಿರುವ ಡಿಜಿಟಲ್ ಡಿಸ್‌ಪ್ಲೇ ಪರದೆಗಳ ಮೂಲಕ ಪ್ರಮಾಣ ವಚನ ಸ್ವೀಕಾರ ಸಮಾರಂಭದ ಸಂಪೂರ್ಣ ಕಾರ್ಯಕ್ರಮವನ್ನು ನೇರ ಪ್ರಸಾರ ಮಾಡಲಾಗುತ್ತದೆ.

ದೂರದ ಊರುಗಳಿಗೆ ಪ್ರಯಾಣಿಸುವ ಸಾರ್ವಜನಿಕರು ಹಾಗೂ ಸಾಮಾನ್ಯ ಜನರು ಈ ಐತಿಹಾಸಿಕ ಸಮಾರಂಭದಿಂದ ವಂಚಿತರಾಗಬಾರದು ಎನ್ನುವ ಉದ್ದೇಶದಿಂದ ಈ ತಂತ್ರಜ್ಞಾನ ಆಧಾರಿತ ಉಪಕ್ರಮವನ್ನು ಕೈಗೊಳ್ಳಲಾಗಿತ್ತು. ಇದರಿಂದಾಗಿ ಸಾರ್ವಜನಿಕರು ತಮ್ಮ ಹತ್ತಿರದ ಬಸ್ ನಿಲ್ದಾಣಗಳಲ್ಲೇ ನಿಂತು ಮುಖ್ಯಮಂತ್ರಿಗಳು ಹಾಗೂ ಸಚಿವರ ಪ್ರಮಾಣ ವಚನ ಸ್ವೀಕಾರ ಸಮಾರಂಭವನ್ನು ಉಚಿತವಾಗಿ ಕಣ್ತುಂಬಿಕೊಂಡರು.

## ಧರ್ಮಸ್ಥಳದಲ್ಲಿ ಚಿಂತಾಮಣಿಯ ಶ್ರೀ ಶ್ರೀನಿವಾಸ ಭಜನಾ ಮಂಡಳಿಯಿಂದ

# ಭಕ್ತಿಪೂರ್ವಕ ಗಾಯನ ಸೇವೆ

ಚಿಂತಾಮಣಿ



ನಗರದ ಪ್ರಮುಖ ಗಾಯಕಿ ವೀಣಾ ಕೃಷ್ಣಪ್ಪ ಅವರ ನೇತೃತ್ವದ ಶ್ರೀ ಶ್ರೀನಿವಾಸ ಭಜನಾ ಮಂಡಳಿಯ ಸದಸ್ಯರು ಇತ್ತೀಚೆಗೆ ಪವಿತ್ರ ಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿ, ಶ್ರೀ ಕ್ಷೇತ್ರ ಮಂಜುನಾಥ ಸ್ವಾಮಿಯ ಸನ್ನಿಧಿಯಲ್ಲಿ ಭಕ್ತಿಪೂರ್ವಕ ಗಾಯನ ಸೇವೆ ಸಲ್ಲಿಸಿದರು.

ಮಂಡಳಿಯ ಸದಸ್ಯರು ಸಮೂಹವಾಗಿ ಹಾಡಿದ ಭಜನೆಗಳು, ದಾಸಸಾಹಿತ್ಯ ಹಾಗೂ ಭಕ್ತಿಗೀತೆಗಳು ಕ್ಷೇತ್ರಕ್ಕೆ ಆಗಮಿಸಿದ್ದ ನೂರಾರು ಭಕ್ತರ ಮನಸೂರೆಗೊಂಡವು.

ಭಕ್ತಿ ಭಾವದಿಂದ ಮೂಡಿಬಂದ ಗಾಯನ ಸೇವೆಯ ವೇಳೆ ದೇವಸ್ಥಾನದ ಆವರಣದಲ್ಲಿ ಆಧ್ಯಾತ್ಮಿಕ ವಾತಾವರಣ ನಿರ್ಮಾಣವಾಗಿದ್ದು, ಭಕ್ತಾದಿಗಳು ಭಜನೆಗಳಲ್ಲಿ ತಲ್ಲೀನರಾದ ದೃಶ್ಯ ಕಂಡುಬಂತು. ಶ್ರೀ ಮಂಜುನಾಥ ಸ್ವಾಮಿಗೆ ಅರ್ಪಿಸಿದ ನಾದಾರಾಧನೆ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಗಾಯನ ಸೇವೆ ಯಶಸ್ವಿಯಾಗಿ ಪೂರ್ಣಗೊಂಡ ಬಳಿಕ ಭಜನಾ ಮಂಡಳಿಯ ಪದಾಧಿಕಾರಿಗಳು, ಮಹಿಳಾ ಸದಸ್ಯರು ಹಾಗೂ ಕಲಾವಿದರು ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗಡೆ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು.

ಈ ವೇಳೆ ಮಾತನಾಡಿದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆಯವರು, ಚಿಂತಾಮಣಿಯ ಶ್ರೀ ಶ್ರೀನಿವಾಸ ಭಜನಾ ಮಂಡಳಿ ನಿರಂತರವಾಗಿ ನಡೆಸುತ್ತಿರುವ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಶ್ಲಾಘಿಸಿದರು. "ಇಂದಿನ ಯುವ ಪೀಳಿಗೆಗೆ ಭಕ್ತಿ, ಸಂಸ್ಕೃತಿ ಮತ್ತು ಆಧ್ಯಾತ್ಮಿಕ ಮೌಲ್ಯಗಳ ಅರಿವು ಅತ್ಯಗತ್ಯವಾಗಿದೆ.

ಇಂತಹ ಭಜನಾ ಮಂಡಳಿಗಳು ಸಮಾಜದಲ್ಲಿ ಸಕಾರಾತ್ಮಕ ಚಿಂತನೆ ಬೆಳೆಸುವ ಕಾರ್ಯ ಮಾಡುತ್ತಿವೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಧಾರ್ಮಿಕ ಹಾಗೂ ಸಾಂಸ್ಕೃತಿಕ ಸೇವೆಗಳು ನಿರಂತರವಾಗಿ ನಡೆಯಲಿ ಎಂದು ಅವರು ಹಾರೈಸಿದರು. ಧರ್ಮಸ್ಥಳದಂತಹ ಪವಿತ್ರ ಕ್ಷೇತ್ರದಲ್ಲಿ ಗಾಯನ ಸೇವೆ ಸಲ್ಲಿಸಿರುವುದು ಮಂಡಳಿಗೆ ಗೌರವದ ಸಂಗತಿ ಎಂದು ಹೇಳಿದರು.

ಚಿಂತಾಮಣಿ ನಗರಕ್ಕೆ ಹೆಮ್ಮೆ ತಂದ ಈ ಧಾರ್ಮಿಕ ಪ್ರವಾಸ ಹಾಗೂ ಗಾಯನ ಸೇವೆಯ ಯಶಸ್ಸಿಗೆ ಭಜನಾ ಮಂಡಳಿಯ ಸದಸ್ಯರು ಸಂತಸ ವ್ಯಕ್ತಪಡಿಸಿದರು. ಕ್ಷೇತ್ರದಲ್ಲಿ ಮಂಡಳಿಗೆ ದೊರೆತ ಗೌರವ ಮತ್ತು ಧರ್ಮಾಧಿಕಾರಿಗಳ ಆಶೀರ್ವಾದವು ಮುಂದಿನ ದಿನಗಳಲ್ಲಿ ಇನ್ನಷ್ಟು ಸೇವಾ ಕಾರ್ಯಗಳಿಗೆ ಪ್ರೇರಣೆಯಾಗಲಿದೆ ಎಂದು ಸದಸ್ಯರು ತಿಳಿಸಿದರು.

ಈ ಸಂದರ್ಭದಲ್ಲಿ ಭಜನಾ ಮಂಡಳಿಯ ಪದಾಧಿಕಾರಿಗಳು, ಮಹಿಳಾ ಸದಸ್ಯರು, ಭಕ್ತರು ಹಾಗೂ ಅನೇಕ ಗಣ್ಯರು ಉಪಸ್ಥಿತರಿದ್ದರು.

# 5ವರೆಗೆ ಮಿಂಚು ಗುಡುಗು ಸಹಿತ ಮಳೆ

ಬೆಂ.ಗ್ರಾ.ಜಿಲ್ಲೆ

ಭಾರತೀಯ ಹವಾಮಾನ ಇಲಾಖೆ/ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಬೆಂಗಳೂರು ಇವರ ಮುನ್ಸೂಚನೆಯಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮುಂದಿನ 3 ದಿನಗಳ ಕಾಲ (ದಿನಾಂಕ:03.06.2026 ರಿಂದ 05.06.2026 ರವರೆಗೆ) ಮಿಂಚು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇರುತ್ತದೆ.

ಈ ಹಿನ್ನಲೆಯಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕರಿಗೆ ಮುನ್ನೆಚ್ಚರಿಕೆ ಸೂಚನೆಗಳನ್ನು ನೀಡಲಾಗಿದೆ.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿನ ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರವನ್ನು (ಜಿಲ್ಲಾ ಸಹಾಯವಾಣಿ ಸಂಖ್ಯೆ: 080–28388005) ತೆರೆಯಲಾಗಿದ್ದು, ಸಾರ್ವಜನಿಕರು ಜಿಲ್ಲೆಯ ಹವಾಮಾನ ಪರಿಸ್ಥಿತಿಯ ಕುರಿತಂತೆ 24/7 ವರದಿಗಳನ್ನು ಪರಿಶೀಲಿಸಬಹುದಾಗಿರುತ್ತದೆ. ಹಾಗೂ ಸಾರ್ವಜನಿಕರು ಯಾವುದೇ ಅನಧಿಕೃತ/ವದಂತಿಗಳಿಗೆ ಕಿವಿಗೊಡಬೇಡಿ. ನೀರು ಇರುವ ತಗ್ಗು ಪ್ರದೇಶ, ಕೆರೆ, ಕಾಲುವೆ ಪ್ರದೇಶಗಳಿಗೆ ಹೋಗದಂತೆ ಸಾರ್ವಜನಿಕರು ಹಾಗೂ ಮುಖ್ಯವಾಗಿ ಮಕ್ಕಳು ಹೋಗದಂತೆ ಪಾಲಕರು ಜಾಗ್ರತೆವಹಿಸುವುದು.

ಕೃಷಿಕರು ಮಳೆಯಂತಹ ಸಂದರ್ಭದಲ್ಲಿ ಕೃಷಿ ಚಟುವಟಿಕೆಯಿಂದ ದೂರವಿರುವುದು ಸಾರ್ವಜನಿಕರು/ಮಕ್ಕಳು/ಕಾರ್ಮಿಕರು ಮಳೆ ಬೀಳುವ ಸಂದರ್ಭದಲ್ಲಿ ಹೊರಗೆ ತಿರುಗಾಡದೆ, ಸೂಕ್ತ ಕಟ್ಟಡದಲ್ಲಿ ಆಶ್ರಯ ಪಡೆಯುವುದು. ಈ ಸಂದರ್ಭದಲ್ಲಿ ಮಕ್ಕಳು/ಸಾರ್ವಜನಿಕರು ಅಪಾಯಕಾರಿ ಮರ/ವಿದ್ಯುತ್ ಕಂಬದ ಹತ್ತಿರ ಸುಳಿಯಬಾರದು ಮತ್ತು ತುಂಡಾದ ವಿದ್ಯುತ್ ತಂತಿಗಳಿಂದ ದೂರವಿರುವುದು. ದುರ್ಬಲವಾದ/ಹಳೆಯ ಕಟ್ಟಡ ಅಥವಾ ಮರಗಳ ಹತ್ತಿರ/ಮರಗಳ ಕೆಳಗೆ ನಿಲ್ಲಬಾರದು.

ಮೇಲಿನ ಅಂಶಗಳನ್ನು ಮಳೆ ಗಾಳಿಯಂತಹ ಸಂದರ್ಭಗಳಲ್ಲಿ ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸುವುದು. ಸಾರ್ವಜನಿಕರು ತಗ್ಗು ಪ್ರದೇಶದಲ್ಲಿ ಅಥವಾ ಮಳೆಯಿಂದ ಅಪಾಯಕ್ಕೀಡಾಗುವ ಪ್ರದೇಶದಲ್ಲಿ ವಾಸವಿದ್ದಲ್ಲಿ ಅಥವಾ ಶೀಥಿಲಾವಸ್ಥೆಯಿಂದ ಜಾರುವ ಹಂತದಲ್ಲಿರುವ ಕಂಪೌಂಡ್ ಅಥವಾ ಮನೆಯ ಗೋಡೆ, ಇಂತಹ ದುರ್ಬಲವಾದ ಕಟ್ಟಡದಲ್ಲಿ ವಾಸವಿರುವ ಸಾರ್ವಜನಿಕರು ಸುರಕ್ಷಿತ ಸ್ಥಳಗಳಲ್ಲಿ ವಾಸಿಸುವುದು. ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕಾಲುವೆ, ಕಿರು ಸೇತುವೆ ಇತ್ಯಾದಿಗಳನ್ನು ದಾಟುವ ಮುನ್ನ ಎಚ್ಚರಿಕೆ ವಹಿಸುವುದು.

# ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನ

ತುಮಕೂರು

ಜಿಲ್ಲೆಯ ಕ್ರೈಸ್‌ನ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಕಾಲೇಜುಗಳಲ್ಲಿ ಖಾಲಿ ಇರುವ ಕನ್ನಡ, ಇಂಗ್ಲೀಷ್, ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ, ಜೀವಶಾಸ್ತ್ರ, ಗಣಕವಿಜ್ಞಾನ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಅಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ತುಮಕೂರಿನ ಕೋಡಿಮುದ್ದನಹಳ್ಳಿ ಹಾಗೂ ಕೊರಟಗೆರೆ ತಾಲ್ಲೂಕು ಬೈಚಾಪುರದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜು, ಸಿರಾ ತಾಲ್ಲೂಕು ಭುವನಹಳ್ಳಿ ಹಾಗೂ ಪಾವಗಡ ತಾಲ್ಲೂಕು ದೊಡ್ಡಹಳ್ಳಿಯಲ್ಲಿರುವ ಅಟಲ್ ಬಿಹಾರಿ ವಾಜಪೇಯಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜು, ಮಧುಗಿರಿ ತಾಲ್ಲೂಕು ನಲ್ಲೇಕಾಮನಹಳ್ಳಿಯಲ್ಲಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜುಗಳಿಗೆ ಭೇಟಿ ನೀಡಿ ಜೂನ್ 6ರೊಳಗಾಗಿ ಅರ್ಜಿಸಲ್ಲಿಸಬಹುದು. ಅರ್ಜಿಗಳನ್ನು ಪರಿಶೀಲಿಸಿ ಡೆಮೋ ತರಗತಿಗಳಿಗೆ ಅರ್ಹರಾದ ಅಭ್ಯರ್ಥಿಗಳನ್ನು ಜೂನ್ 2026ರ ಮಾಹೆಯಲ್ಲಿ ನಡೆಯುವ ಡೆಮೋ ತರಗತಿಗಳಿಗೆ ಹಾಜರಾಗಲು ದೂರವಾಣಿ ಕರೆ ಮೂಲಕ ತಿಳಿಸಲಾಗುವುದು.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಖಾಲಿ ಇರುವ ವಿಷಯದ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಸಂಬಂಧಿಸಿದಂತೆ ವಿಷಯದಲ್ಲಿ ಸ್ನಾತಕೊತ್ತರ ಪದವಿ ಹಾಗೂ ಬಿ.ಇಡಿ ಶಿಕ್ಷಣ ಪಡೆದಿರಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಕಾಮಗಾರಿಗಳಿಗೆ ವಿದ್ಯುದ್ದೀಕರಣ

ತುಮಕೂರು

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜಿಲ್ಲೆಯ ಕುಣಿಗಲ್ ತಾಲ್ಲೂಕು ಹುಲಿಯೂರುದುರ್ಗ ಗ್ರಾಮದ ಬಳಿ ನೂತನವಾಗಿ ನಿರ್ಮಾಣ ಮಾಡಿರುವ 2*500ಎಂ.ವಿ.ಎ. 400/220ಕೆ.ವಿ, 2*100ಎಂ.ವಿ.ಎ. 220/66ಕೆ.ವಿ ಉಪಸ್ಥಾವರಕ್ಕೆ ಹಾಲಿ ಇರುವ 220ಕೆವಿ ನಾಗಮಂಗಲ – ಅಂಚೆಪಾಳ್ಯ ವಿದ್ಯುತ್ ಮಾರ್ಗದಿಂದ 11.524ಕಿ.ಮೀ ಉದ್ದದ 220ಕೆವಿ ದ್ವಿ–ಲಿಲೋ ವಿದ್ಯುತ್ ಮಾರ್ಗ ಹಾಗೂ ಹಾಲಿ ಇರುವ 66ಕೆವಿ ಹುಲಿಯೂರುದುರ್ಗ – ಅಂಚೆಪಾಳ್ಯ ವಿದ್ಯುತ್ ಮಾರ್ಗಕ್ಕೆ 6.435ಕಿ.ಮೀ ಮತ್ತು 66ಕೆವಿ ಹುಲಿಯೂರುದುರ್ಗ – ನಿಡಸಾಲೆ ವಿದ್ಯುತ್ ಮಾರ್ಗಕ್ಕೆ 4.696ಕಿ.ಮೀ ಉದ್ದದ 66ಕೆವಿ ಲಿಲೋ ವಿದ್ಯುತ್ ಪ್ರಸರಣ ಮಾರ್ಗ ಹಾಗೂ ಹಾಲಿ ಇರುವ 66/11ಕೆವಿ ಯಡವಾಣಿ ವಿದ್ಯುತ್ ಉಪಸ್ಥಾವರಕ್ಕೆ 5.868ಕಿ.ಮೀ ಉದ್ದದ 66ಕೆವಿ ದ್ವಿಮುಖ ವಿದ್ಯುತ್ ಪ್ರಸರಣ ಮಾರ್ಗ ಹಾಗೂ ಹಾಲಿ ಇರುವ 66/11ಕೆವಿ ಅಮೃತೂರು ಉಪಸ್ಥಾವರಕ್ಕೆ ರೇಡಿಯಲ್ ಸಂಪರ್ಕ ಒದಗಿಸುವ ಜೊತೆಗೆ 2 ಸಂಖ್ಯೆಯ 66ಕೆವಿ ಟರ್ಮಿನಿಲ್ ಬೇ ಅನ್ನು 66/11ಕೆವಿ ಯಡವಾಣಿ ಉಪಸ್ಥಾವರದಲ್ಲಿ ಮತ್ತು 1 ಸಂಖ್ಯೆಯ 66ಕೆವಿ ಟರ್ಮಿನಿಲ್ ಬೇ ಅನ್ನು 66/11ಕೆವಿ ಅಮೃತೂರು ಉಪಸ್ಥಾವರದಲ್ಲಿ ನಿರ್ಮಾಣ ಮಾಡಿರುವ ಕಾಮಗಾರಿಯನ್ನು ಜೂನ್ 5ರಂದು ಅಥವಾ ತದನಂತರ ವಿದ್ಯುದ್ಧೀಕರಣ ಗೊಳಿಸಲಾಗುವುದು.

ಈ ಪ್ರಸರಣ ಮಾರ್ಗಗಳು ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕು ಅಮೃತೂರು ಹೋಬಳಿ ವ್ಯಾಪ್ತಿಯಲ್ಲಿ ಬರುವ ಪಡುವಗೆರೆ, ಕಂಠನಹಳ್ಳಿ, ಸಣಬ, ವಳಗೆರೆಪುರ, ಬೆಣವಾರ, ಕೋಡಿಹಳ್ಳಿ, ಕೀಲಾರ, ಬ್ಯಾಡಗೆರೆ, ಯಡವಾಣಿ, ಹುಲಿಯೂರುದುರ್ಗ ಹೋಬಳಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಾದ ಹಸಿಗೆ ಹೋಬಳಿ, ಶೃಂಗಾರಸಾಗರ, ಹಳೇವೂರು, ಕೆಬ್ಬಳ್ಳಿ, ಸೊಣ್ಣನಾಯಕನಹಳ್ಳಿ, ಸುಗ್ಗನಹಳ್ಳಿ, ಪುರ ಗ್ರಾಮಗಳ

# ಐಶರ್ ಸಂಸ್ಥೆ ವಿರುದ್ಧ ಆಕ್ರೋಶ



ಕೋಲಾರ

ನಗರದ ಹೊರವಲಯದ ಕಾಳಸ್ತಿಪುರ ಗೇಟ್ ಸಮೀಪ ಇರುವ ಐಶರ್ ವಾಹನಗಳ ಮಾರಾಟ, ಸೇವೆ ಹಾಗೂ ಬಿಡಿಭಾಗಗಳ ಕಚೇರಿಯ ಸಿಬ್ಬಂದಿಗಳ ನಿರ್ಲಕ್ಷ್ಯ ಖಂಡಿಸಿ ವಾಹನ ಮಾಲೀಕರು ಹಾಗೂ ಚಾಲಕರು ಬುಧವಾರ ತೀವ್ರ ಪ್ರತಿಭಟನೆ ನಡೆಸಿದರು. ಸಮಸ್ಯೆಗಳಿಗೆ ಸ್ಪಂದನೆ ಸಿಗುತ್ತಿಲ್ಲ ಎಂದು ಆರೋಪಿಸಿದ ಪ್ರತಿಭಟನಾಕಾರರು ಐಶರ್ ವಾಹನಗಳನ್ನು ಕಚೇರಿ ಮುಂದೆ ಅಡ್ಡಗಟ್ಟಿ ಆಕ್ರೋಶ ವ್ಯಕ್ತಪಡಿಸಿದರು.

ಹೊಸದಾಗಿ ಖರೀದಿಸಿದ ವಾಹನಗಳಿಗೆ ವ್ಯಾರಂಟಿ ಇದ್ದರೂ ಸಮರ್ಪಕ ಸೇವೆ ನೀಡುತ್ತಿಲ್ಲ ಎಂದು ವಾಹನ ಮಾಲೀಕರು ಆರೋಪಿಸಿದರು. ಸಣ್ಣಪುಟ್ಟ ದುರಸ್ತಿಗೂ ಹಲವು ದಿನಗಳನ್ನು ತೆಗೆದುಕೊಳ್ಳುತ್ತಿರುವುದರಿಂದ ತಮ್ಮ ಜೀವನೋಪಾಯಕ್ಕೆ ಭಾರಿ ಹೊಡೆತ ಬಿದ್ದಿದೆ ಎಂದು ಚಾಲಕರು ಅಸಮಾಧಾನ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಚಾಲಕ ಪುರುಷೋತ್ತಮ, "ಹೊಸದಾಗಿ ವಾಹನಗಳನ್ನು ಖರೀದಿಸಿದ್ದೇವೆ. ತಿಂಗಳಿಗೆ ಸುಮಾರು ಒಂದು ಲಕ್ಷ ಎಂಬತ್ತ ಸಾವಿರ ರೂಪಾಯಿ ಕಂತು ಪಾವತಿಸಬೇಕಾಗಿದೆ. ಆದರೆ ವಾಹನದಲ್ಲಿ ಸಮಸ್ಯೆ ಉಂಟಾದಾಗ ಇಲ್ಲಿ ಸರಿಯಾಗಿ ದುರಸ್ತಿ ಮಾಡುವುದಿಲ್ಲ. ಸಣ್ಣ ಕೆಲಸಕ್ಕೂ ಕನಿಷ್ಠ ಒಂದು ವಾರ ಕಾಲ ವಾಹನ ನಿಲ್ಲಿಸಿಕೊಳ್ಳುತ್ತಾರೆ. ಸಮಸ್ಯೆಗಳ ಬಗ್ಗೆ ಕೇಳಿದರೆ ಬೆಂಗಳೂರಿನ ಅಧಿಕಾರಿಗಳ ಮೇಲೆ ಹೊಣೆ ಹಾಕುತ್ತಾರೆ. ಕೆಲಸ ಮಾಡಲಾಗದಿದ್ದರೆ ಇಂತಹ ಕಚೇರಿಗಳನ್ನು ನಡೆಸುವುದೇ ಏಕೆ?" ಎಂದು ಪ್ರಶ್ನಿಸಿದರು.

ಸೇವಾ ಕೇಂದ್ರದಲ್ಲಿ ಸರಿಯಾದ ತಾಂತ್ರಿಕ ಸಿಬ್ಬಂದಿ ಇಲ್ಲದಿರುವುದು, ದುರಸ್ತಿ ಕಾರ್ಯ ವಿಳಂಬವಾಗುತ್ತಿರುವುದು ಹಾಗೂ ಗ್ರಾಹಕರಿಗೆ ಸಮರ್ಪಕ ಮಾಹಿತಿ ನೀಡದಿರುವುದು ಸಮಸ್ಯೆಗೆ ಪ್ರಮುಖ ಕಾರಣ ಎಂದು ಪ್ರತಿಭಟನಾಕಾರರು ದೂರಿದರು. ವಾಹನಗಳು ದೀರ್ಘಕಾಲ ನಿಂತಿರುವುದರಿಂದ ತಮ್ಮ ಆದಾಯ ಸಂಪೂರ್ಣ ಕುಂಠಿತವಾಗುತ್ತಿದೆ ಎಂದು ಹೇಳಿದರು.

ತಕ್ಷಣವೇ ಸಮಸ್ಯೆಗಳನ್ನು ಪರಿಹರಿಸಿ, ವಾಹನಗಳ ದುರಸ್ತಿ ಕಾರ್ಯವನ್ನು ವೇಗವಾಗಿ ಪೂರ್ಣಗೊಳಿಸಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಇನ್ನಷ್ಟು ಉಗ್ರ ಹೋರಾಟ ನಡೆಸುವುದಾಗಿ ವಾಹನ ಮಾಲೀಕರು ಹಾಗೂ ಚಾಲಕರು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ವಾಹನ ಮಾಲೀಕರು ಹಾಗೂ ಚಾಲಕರಾದ ಶೀತಲ್, ವಿ.ಎಸ್.ಆರ್. ವಿಜಯಕುಮಾರ್, ವೇಲು, ಶ್ಯಾಮ್, ಮುನ್ನಾ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ದೇವರ ಜಮೀನು ಕಬಳಿಕೆ ಯತ್ನ ಆರೋಪ

ಬಂಗಾರಪೇಟೆ

ತಾಲ್ಲೂಕು ಹಾಗೂ ಜಿಲ್ಲಾಡಳಿತ ದೇವರ ಮತ್ತು ಸರ್ಕಾರಿ ಜಮೀನುಗಳ ಸಂರಕ್ಷಣೆಯಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಕರ್ನಾಟಕ ದಲಿತ ರೈತಸೇನೆ ರಾಜ್ಯಾಧ್ಯಕ್ಷ ಹುಣಸನಹಳ್ಳಿ ಎನ್.ವೆಂಕಟೇಶ್ ಗಂಭೀರ ಆರೋಪ ಮಾಡಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಸಬಾ ಹೋಬಳಿಯ ಕೊಪ್ಪ ಗ್ರಾಮದ ಸರ್ವೆ ಸಂಖ್ಯೆ 189ರಲ್ಲಿರುವ 5 ಎಕರೆ 11 ಗುಂಟೆ ಜಮೀನು ಸುಮಾರು 80 ವರ್ಷಗಳಿಂದ ಆಂಜನೇಯ ದೇವರ ಹೆಸರಿನಲ್ಲಿ ಕಂದಾಯ ದಾಖಲೆಗಳಲ್ಲಿ ದಾಖಲಾಗಿದ್ದರೂ, 1985–86ರಲ್ಲಿ ಅಕ್ರಮವಾಗಿ ಖಾಸಗಿ ವ್ಯಕ್ತಿಯ ಹೆಸರನ್ನು ಸೇರಿಸಿ ದೇವರ ಜಮೀನು



ಕಬಳಿಸಲು ಯತ್ನಿಸಲಾಗಿದೆ ಎಂದು ಆರೋಪಿಸಿದರು.

ಸುಪ್ರೀಂ ಕೋರ್ಟ್ ತೀರ್ಪಿನ ಪ್ರಕಾರ ದೇವರ ಹೆಸರಿನಲ್ಲಿರುವ ಆಸ್ತಿಗೆ ದೇವರೇ ಮಾಲೀಕನಾಗಿದ್ದರೂ, ಈ ಜಮೀನಿನ ದಾಖಲೆಗಳಲ್ಲಿ ಖಾಸಗಿ ವ್ಯಕ್ತಿಯ ಹೆಸರು ಸೇರ್ಪಡೆಯಾಗಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಹೇಳಿದರು. ಈ ಕುರಿತು ತಹಸೀಲ್ದಾರ್ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದ್ದು, ಮೂಲ ದಾಖಲೆಗಳು, ಮ್ಯೂಟೇಷನ್ ಹಾಗೂ ಕಂದಾಯ ದಾಖಲೆಗಳನ್ನು ಸಲ್ಲಿಸುವಂತೆ ಸೂಚನೆ ನೀಡಲಾಗಿದ್ದರೂ ಸಂಬಂಧಪಟ್ಟವರು ಯಾವುದೇ ದಾಖಲೆಗಳನ್ನು ಒದಗಿಸಿಲ್ಲ ಎಂದು ದೂರಿದರು.

ಇದೇ ಜಮೀನನ್ನು ಖಾಸಗಿ ವ್ಯಕ್ತಿಗಳು ನೋಂದಣಿ ಮಾಡಿಸಿಕೊಳ್ಳಲು ಯತ್ನಿಸಿದ್ದು, ಬಂಗಾರಪೇಟೆ ಉಪನೋಂದಣಾಧಿಕಾರಿ ಕಚೇರಿಯಲ್ಲಿ ಸಾಧ್ಯವಾಗದ ಕಾರಣ ಕೆಜಿಎಫ್‌ನಲ್ಲಿ ಅಕ್ರಮವಾಗಿ ಕ್ರಯದ ಕರಾರು ನೋಂದಾಯಿಸಲಾಗಿದೆ ಎಂದು ಆರೋಪಿಸಿದರು. ಕೆಲ ಅಧಿಕಾರಿಗಳು ಹಾಗೂ ಪ್ರಭಾವಿ ವ್ಯಕ್ತಿಗಳು ಸೇರಿಕೊಂಡು ನಕಲಿ ದಾಖಲೆಗಳನ್ನು ಸೃಷ್ಟಿಸಿ ಜಮೀನು ಕಬಳಿಸಲು ಸಂಚು ರೂಪಿಸಿದ್ದಾರೆ ಎಂದು ವೆಂಕಟೇಶ್ ಹೇಳಿದರು. "2010–11ರಿಂದ ಲಭ್ಯವಿಲ್ಲದಿದ್ದ ದಾಖಲೆಗಳು ಈಗ ಹೊಸದಾಗಿ ಸೃಷ್ಟಿಯಾಗಿರುವ ಅನುಮಾನವಿದೆ. ತಹಸೀಲ್ದಾರ್ ಕಚೇರಿಯಲ್ಲಿಯೇ ದಾಖಲೆಗಳಲ್ಲಿ ತಿದ್ದುಪಡಿ ಮಾಡಿ ದೇವರ ಜಮೀನನ್ನು ಖಾಸಗಿ ಹೆಸರಿಗೆ ವರ್ಗಾಯಿಸಲು ಯತ್ನಿಸಲಾಗಿದೆ" ಎಂದು ಗಂಭೀರ ಆರೋಪ ಮಾಡಿದರು.

ಅಕ್ರಮವಾಗಿ ಸೇರಿಸಲಾದ ಹೆಸರನ್ನು ತಕ್ಷಣ ರದ್ದುಪಡಿಸಿ ಜಮೀನನ್ನು "ಆಂಜನೇಯ ದೇವರು ಹಾಗೂ ಸರ್ಕಾರ" ಹೆಸರಿಗೆ ಮರುದಾಖಲಿಸಬೇಕು ಎಂದು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ತಪ್ಪಿತಸ್ಥರು ಹಾಗೂ ಅವರಿಗೆ ಸಹಕಾರ ನೀಡಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳದಿದ್ದರೆ ಜೂನ್ 8ರಂದು ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಪ್ರತಿಮೆ ಎದುರು ಬೃಹತ್ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ಸಂಘಟನೆಯ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಕಾರಹಳ್ಳಿ ಸರ್ಕಾರಿ ಕಾಲುವೆ ಒತ್ತುವರಿ ಪ್ರಕರಣಕ್ಕೆ ಹೊಸ ತಿರುವು

ಬಂಗಾರಪೇಟೆ

ತಾಲ್ಲೂಕಿನ ಕಸಬಾ ಹೋಬಳಿಯ ಕಾರಹಳ್ಳಿ ಗ್ರಾಮದಲ್ಲಿನ ಸರ್ಕಾರಿ ರಾಜಕಾಲುವೆ ಒತ್ತುವರಿ ಪ್ರಕರಣಕ್ಕೆ ಹೊಸ ತಿರುವು ದೊರೆತಿದ್ದು, ಆಡಳಿತಾತ್ಮಕ ಕ್ರಮಗಳು ತೀವ್ರಗೊಂಡಿವೆ. ಸರ್ಕಾರಿ ಕಾಲುವೆ ಒತ್ತುವರಿ ಆರೋಪ ಎದುರಿಸುತ್ತಿರುವ 24 ಮಂದಿಗೆ ತಹಸೀಲ್ದಾರ್ ಕಚೇರಿಯಿಂದ ಎರಡನೇ ನೋಟಿಸ್ ಜಾರಿಗೊಳಿಸಲಾಗಿದ್ದು, ತಕ್ಷಣವೇ ಒತ್ತುವರಿ ತೆರವುಗೊಳಿಸುವಂತೆ ಸೂಚಿಸಲಾಗಿದೆ.

ಕಾರಹಳ್ಳಿ ಗ್ರಾಮದ ವಿವಿಧ ಸರ್ವೆ ಸಂಖ್ಯೆಗಳ ವ್ಯಾಪ್ತಿಯಲ್ಲಿರುವ ಸರ್ಕಾರಿ ಕಾಲುವೆ ಪ್ರದೇಶವನ್ನು ಮನೆ, ಕಾಂಪೌಂಡ್ ಹಾಗೂ ಇತರೆ ಕಟ್ಟಡಗಳ ಮೂಲಕ ಅಕ್ರಮವಾಗಿ ಒತ್ತುವರಿ ಮಾಡಲಾಗಿದೆ ಎಂದು ಆರೋಪಿಸಿ ವಿ. ಪ್ರೇಮ್ ಕುಮಾರ್ ಲೋಕಾಯುಕ್ತ ಕಚೇರಿಗೆ ದೂರು ಸಲ್ಲಿಸಿದ್ದರು. ದೂರಿನ ಆಧಾರದ ಮೇಲೆ ಪ್ರಕರಣದ ಕುರಿತು ತನಿಖೆ ನಡೆಸಿದ ಲೋಕಾಯುಕ್ತರು, ಅಗತ್ಯ ಕ್ರಮ ಕೈಗೊಂಡು ವರದಿ ಸಲ್ಲಿಸುವಂತೆ ಬಂಗಾರಪೇಟೆ ತಹಸೀಲ್ದಾರ್ ಅವರಿಗೆ ನಿರ್ದೇಶನ ನೀಡಿದ್ದರು.

ಈ ಹಿನ್ನೆಲೆಯಲ್ಲಿ ತಾಲ್ಲೂಕು ಭೂಮಾಪಕರು ಸ್ಥಳ ಪರಿಶೀಲನೆ ನಡೆಸಿ ಕಾಲುವೆಯ ಸರ್ವೆ ಕಾರ್ಯ



ಪೂರ್ಣಗೊಳಿಸಿ ನಕ್ಷೆಯೊಂದಿಗೆ ವರದಿ ಸಲ್ಲಿಸಿದ್ದರು. ವರದಿಯಲ್ಲಿ ಹಲವು ಕಡೆಗಳಲ್ಲಿ ಸರ್ಕಾರಿ ಕಾಲುವೆ ಪ್ರದೇಶ ಒತ್ತುವರಿಯಾಗಿರುವುದು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಮೇ 8ರಂದು ಮೊದಲ ನೋಟಿಸ್ ಜಾರಿಗೊಳಿಸಲಾಗಿತ್ತು. ಏಳು ದಿನಗಳೊಳಗೆ ಸ್ವಯಂಪ್ರೇರಿತವಾಗಿ ಒತ್ತುವರಿ ತೆರವುಗೊಳಿಸದಿದ್ದರೆ ಕರ್ನಾಟಕ ಭೂ ಕಂದಾಯ ಅಧಿನಿಯಮದ ಕಲಂ 192(ಎ) ಅನ್ವಯ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು ಎಂದು ಎಚ್ಚರಿಕೆ ನೀಡಲಾಗಿತ್ತು.

ಆದರೆ ನಿಗದಿತ ಅವಧಿಯೊಳಗೆ ಯಾವುದೇ ತೆರವು ಕಾರ್ಯ ನಡೆಯದ ಹಿನ್ನೆಲೆಯಲ್ಲಿ ಇದೀಗ ಮೇ 29ರಂದು ಎರಡನೇ ನೋಟಿಸ್ ಜಾರಿಗೊಳಿಸಲಾಗಿದೆ. ನೋಟಿಸ್‌ನಲ್ಲಿ ತಕ್ಷಣವೇ ಒತ್ತುವರಿ ತೆರವುಗೊಳಿಸಬೇಕು. ಇಲ್ಲವಾದಲ್ಲಿ ರಾಜಸ್ವ ನಿರೀಕ್ಷಕರು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳ ಸಮ್ಮುಖದಲ್ಲಿ ಸರ್ಕಾರವೇ ತೆರವು ಕಾರ್ಯಾಚರಣೆ ನಡೆಸಲಿದೆ ಎಂದು ಸ್ಪಷ್ಟಪಡಿಸಲಾಗಿದೆ.

ಇದೇ ವೇಳೆ ಬುಧವಾರ ತಹಸೀಲ್ದಾರ್ ಸುಜಾತಮ್ಮ ಸ್ಥಳಕ್ಕೆ ಭೇಟಿ ನೀಡಿ ಕಾಲುವೆ ಪ್ರದೇಶವನ್ನು ಪರಿಶೀಲಿಸಿದರು. ಪರಿಶೀಲನೆ ವೇಳೆ ದೂರುದಾರ ಪ್ರೇಮ್ ಕುಮಾರ್ ಹಾಗೂ ಕೆಲವು ಒತ್ತುವರಿದಾರರ ನಡುವೆ ಮಾತಿನ ಚಕಮಕಿ ನಡೆದ ಘಟನೆ ವರದಿಯಾಗಿದೆ. ಈಗಾಗಲೇ ಸರ್ವೆ ಮಾಡಿ ಗುರುತಿಸಲಾದ ಕಾಲುವೆ ನಕ್ಷೆಯ ನಿಖರತೆ ಬಗ್ಗೆ ಅನುಮಾನ ವ್ಯಕ್ತಪಡಿಸಿದ ಕೆಲವು ನಿವಾಸಿಗಳು ಮರು ಸರ್ವೆ ನಡೆಸುವಂತೆ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ಸ್ಥಳ ಪರಿಶೀಲನೆಯ ವೇಳೆ ನೀರು ಹರಿಯುವ ಕಾಲುವೆಯ ಅಗಲ ಕೆಲವೆಡೆ ಕೇವಲ ಮೂರುರಿಂದ ನಾಲ್ಕು ಅಡಿ ಮಾತ್ರ ಉಳಿದಿರುವುದು ಅಧಿಕಾರಿಗಳ ಗಮನ ಸೆಳೆದಿದ್ದು, ಈ ಸ್ಥಿತಿ ಅಚ್ಚರಿಗೆ ಕಾರಣವಾಯಿತು. ಕಾಲುವೆಯ ಮೂಲ ಅಗಲ ಕುಂಠಿತಗೊಂಡಿರುವುದರಿಂದ ಮಳೆಗಾಲದಲ್ಲಿ ನೀರು ಸರಾಗವಾಗಿ ಹರಿಯದ ಆತಂಕವೂ ವ್ಯಕ್ತವಾಗಿದೆ.

ಮೊದಲ ನೋಟಿಸ್ ಪಡೆದಿರುವ ಹಲವರು ಈಗಾಗಲೇ ನ್ಯಾಯಾಲಯದ ಮೊರೆ ಹೋಗಿರುವುದರಿಂದ ಪ್ರಕರಣಕ್ಕೆ ಕಾನೂನು ಸ್ವರೂಪವೂ ದೊರೆತಿದೆ. ಆಡಳಿತದ ಮುಂದಿನ ಕ್ರಮ ಏನಾಗಲಿದೆ ಎಂಬ ಕುತೂಹಲ ಗ್ರಾಮಸ್ಥರಲ್ಲಿ ಹೆಚ್ಚಾಗಿದೆ.

ಒಟ್ಟಾರೆ ಕಾರಹಳ್ಳಿ ಗ್ರಾಮದ ಸರ್ಕಾರಿ ಕಾಲುವೆ ಒತ್ತುವರಿ ಪ್ರಕರಣವು ಇದೀಗ ಆಡಳಿತ, ಸಾರ್ವಜನಿಕರು ಹಾಗೂ ನ್ಯಾಯಾಂಗದ ಗಮನ ಸೆಳೆದಿದ್ದು, ಮುಂದಿನ ದಿನಗಳಲ್ಲಿ ನಡೆಯುವ ಬೆಳವಣಿಗೆಗಳತ್ತ ಗ್ರಾಮಸ್ಥರು ಕಾತರದಿಂದ ಎದುರು ನೋಡುತ್ತಿದ್ದಾರೆ.

# ಉಚಿತ ಬಸ್

ಕೋಲಾರ

ಉದ್ಯೋಗ, ಶಿಕ್ಷಣಕ್ಕಾಗಿ ಹಳ್ಳಿಯಿಂದ ನಗರಕ್ಕೆ ವಲಸೆ ಹೋಗುವುದನ್ನು ತಪ್ಪಿಸಬೇಕಿದೆ. ಕೃಷಿ, ತೋಟಗಾರಿಕೆ, ಹೈನುಗಾರಿಕೆ ಬಗ್ಗೆ ಸಂಕುಚಿತ ಮನೋಭಾವ ನಿರ್ಮೂಲನೆ ಮಾಡಬೇಕಿದೆ" ಎಂದು ತಿಳಿಸಿದರು.

"ನಮ್ಮ ಸಚಿವ ಸಂಪುಟ ಸಭೆಯಲ್ಲಿ ಕೈಗೊಂಡ ತೀರ್ಮಾನಗಳಲ್ಲಿ ಮೊದಲನೆಯದು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ. ನಾನು ಬೇರೆ ಭಾಗಗಳಿಗೆ ಹೋದಾಗೆಲ್ಲಾ ಕೇವಲ ಹೆಣ್ಣುಮಕ್ಕಳಿಗೆ ಮಾತ್ರ ಬಸ್ ನಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಿದ್ದೀರಿ ನಮಗೆ ಇಲ್ಲ ಎಂದು ಬಾಲಕರು ಕೇಳುತ್ತಿದ್ದರು. ಹೀಗಾಗಿ ವಿದ್ಯಾರ್ಥಇಗಳಿಗೆ ಉಚಿತ ಬಸ್ ಪಾಸ್ ವಿತರಣೆ ಮಾಡಲು ತೀರ್ಮಾನಿಸಿದ್ದೇವೆ. ಈ ಸೌಲಭ್ಯ ಪಡೆಯಲು ಅರ್ಜಿ ಹಾಕಬೇಕಿದೆ" ಎಂದು ತಿಳಿಸಿದರು.

"ಎರಡನೆಯದಾಗಿ ಉದ್ಯೋಗದ ಸಮಸ್ಯೆಗೆ ನಿವಾರಣೆ ನೀಡಲು, ನಮ್ಮ ಸರ್ಕಾರ 56 ಸಾವಿರ ಹುದ್ದೆಗಳ ನೇಮಕಕ್ಕೆ ಮುಂದಾಗಿದೆ. ಈ ನೇಮಕಾತಿ ವೇಳಾಪಟ್ಟಿ ಬಿಡುಗಡೆಯನ್ನು ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು. ಈ ಮಧ್ಯೆ ಈ ರಾಜ್ಯ ಮಾನವ ಸಂಪನ್ಮೂಲದಲ್ಲಿ ಶಕ್ತಿಶಾಲಿ ರಾಜ್ಯ. ಇಡೀ ದೇಶದಲ್ಲೇ ನಮ್ಮಲ್ಲಿರುವ ಮಾನವ ಸಂಪನ್ಮೂಲ ಬೇರೆ ಎಲ್ಲೂ ಇಲ್ಲ. ಇಲ್ಲಿ ಸರ್ಕಾರವೇ ಖಾಸಗಿ ಉದ್ಯೋಗಾಕಾಂಕ್ಷಿಗಳಿಗೆ ಅನುಕೂಲವಾಗಲು ಉದ್ಯೋಗ ವಿನಿಮಯ ಸೌಲಭ್ಯ ಕಲ್ಪಿಸಲಾಗುವುದು. ಖಾಸಗಿ ಸಂಸ್ಥೆಗೆ ಯಾವ ರೀತಿ ಉದ್ಯೋಗಿಗಳು ಬೇಕು ಅದಕ್ಕೆ ತಕ್ಕಂತೆ ಯುವಕರನ್ನು ತರಬೇತಿ ನೀಡಿ ನೇಮಕಾತಿ ಮಾಡಿಕೊಳ್ಳಲು ಅವಕಾಶ ನೀಡಲಾಗುವುದು.

"ಮೂರನೆಯದು ನನ್ನ ಕನಸಿನ ಚಿಂತನೆಯಾಗಿದೆ. 10 ಸಾವಿರ ಭಾರತ ಜೋಡೋ ಯುವಕರ ಸಂಘ ರಚಿಸಲು ತೀರ್ಮಾನ ಮಾಡಲಾಗಿದೆ. ಪ್ರತಿ ಪಂಚಾಯ್ತಿಯಲ್ಲಿ ಯುವಕರ ಸಂಘ ರಚಿಸಬೇಕು. ಈ ಸಂಘದಲ್ಲಿ ಕನಿಷ್ಠ 150–200 ಯುವಕರಿರುತ್ತಾರೆ.

"ನಾಲ್ಕನೆಯದಾಗಿ ಇನ್ನು ನಮ್ಮನ್ನು ಕಾಡುತ್ತಿರುವ ದೊಡ್ಡ ಸಮಸ್ಯೆ ಮನೆ ಕಟ್ಟುವವರಿಗೆ ಒಸಿ ಹಾಗೂ ಸಿಸಿ ನೀಡುವ ವಿಚಾರ. ಈ ಸಮಸ್ಯೆ ಬಗೆಹರಿಸಲು ಚರ್ಚೆ ಮಾಡಿ 2500 ಅಡಿವರೆಗೂ 20% ಹೆಚ್ಚುಕಮ್ಮಿ ಇದ್ದರೂ ಒನ್ ಟೈಮ್ ಕಳೆದ ತಿಂಗಳು 31ರವರೆಗೂ ಅರ್ಜಿ ಹಾಕಿ ಮನೆ ಕಟ್ಟಿರುವವರಿಗೆ ಅವಕಾಶ ನೀಡಲು ತೀರ್ಮಾನಿಸಿದ್ದೇವೆ. ಮನೆಕಟ್ಟುವವರಿಗೆ ನೀರು ನೀಡುವುದು ನಮ್ಮ ಕರ್ತವ್ಯ" ಎಂದು ತಿಳಿಸಿದರು.

"ಐದನೆಯದಾಗಿ ಬಿ ಖಾತಾಯಿಂದ ಎ ಖಾತಾ ಪರಿವರ್ತನೆಗೆಯನ್ನು ಬೆಂಗಳೂರು ಮಾತ್ರವಲ್ಲದೇ, ಇಡೀ ರಾಜ್ಯಕ್ಕೆ ವಿಸ್ತರಿಸಲು ತೀರ್ಮಾನಿಸಲಾಗಿದೆ. ನಮ್ಮ ಸರ್ಕಾರದ ಆರನೇ ಗ್ಯಾರಂಟಿ ಭೂ ಗ್ಯಾರಂಟಿ ಆಗಿದೆ. ಜನರ ಆಸ್ತಿಗೆ ಸರಿಯಾದ ದಾಖಲೆ ಮಾಡಿಕೊಡಲು ಮುಂದಾಗಿದ್ದೇವೆ" ಎಂದು ತಿಳಿಸಿದರು. 3–4 ತಿಂಗಳಲ್ಲಿ ಡಾಂಬರೀಕರಣ ಮಾಡಲು ತೀರ್ಮಾನಿಸಿದ್ದೇವೆ. ಉಳಿದ ವಿಚಾರಗಳನ್ನು ಬೇರೆ ದಿನಗಳಲ್ಲಿ ಚರ್ಚೆ

# ನೋಟ್‌ಪುಸ್ತಕ ವಿತರಣೆ




ಕೋಲಾರ

ವಿದ್ಯಾರ್ಥಿಗಳು ಧನಾತ್ಮಕ ಭಾವನೆ ರೂಢಿಸಿಕೊಳ್ಳಿ, ಮೊಬೈಲ್ ದಾಸರಾಗದೇ ಪರಿಶ್ರಮದಿಂದ ಓದಿದರೆ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ ಎಂದು ನಗರ ಹೊರವಲಯದ ಶಾಹಿ ಎಕ್ಸ್‌ಪೋರ್ಟ್ಸ್‌ನ ನಿವೃತ್ತ ಜನರಲ್ ಮ್ಯಾನೇಜರ್ ಹಾಗೂ ದಾನಿ ಎಲ್.ರಘುರಾಜ್ ಕಿವಿಮಾತು ಹೇಳಿದರು.

ತಾಲ್ಲೂಕಿನ ಅರಾಭಿಕೊತ್ತನೂರು ಸರ್ಕಾರಿ ಪ್ರೌಢಶಾಲಾ ಮಕ್ಕಳಿಗೆ ತಮ್ಮ ನಿಸ್ವಾರ್ಥ ಸೇವೆಯ ಭಾಗವಾಗಿ ಪ್ರತಿವರ್ಷದಂತೆ ಈ ಬಾರಿಯೂ ಮಕ್ಕಳ ಕಲಿಕೆಗೆ ಕೊರತೆಯಾಗದ ರೀತಿ ನೋಟ್‌ಪುಸ್ತಕಗಳು, ಗಣಿತ ಕಲಿಕೆಗೆ ಅನುಕೂಲವಾಗಲು ಜಾಮಿಟ್ರಿ ಬಾಕ್ಸ್, ಗ್ರಾಫ್‌ಪುಸ್ತಕಗಳನ್ನು ಉಚಿತವಾಗಿ ವಿತರಿಸಿ ಅವರು ಮಾತನಾಡುತ್ತಿದ್ದರು.

ಸಂಸ್ಕಾರಯುತ ಶಿಕ್ಷಣ ನೀಡುತ್ತಿರುವ ಸರ್ಕಾರಿ ಶಾಲೆಗಳನ್ನು ಉಳಿಸಬೇಕು, ಇಂತಹ ಸುಂದರ ಪರಿಸರ ನಿಮಗೆ ಯಾವ ಖಾಸಗಿ ಶಾಲೆಯಲ್ಲೂ ಸಿಗದು ಎಂದ ಅವರು, ಕಾನ್ವೆಂಟ್ ವ್ಯಾಮೋಹದಿಂದ ಪೋಷಕರು ಹೊರಬರಬೇಕು ಎಂದರು.

ಶಿಕ್ಷಣದ ಜತೆಗೆ ಸಂಸ್ಕಾರವನ್ನು ಕಲಿಸುವ ಅಗತ್ಯವಿದೆ, ಓದಿನ ಜತೆ ಶಿಸ್ತುಬದ್ದ ಜೀವನದ ಪಾಠ ಮಕ್ಕಳಿಗೆ ನೀಡುತ್ತಿರುವ ಈ ಶಾಲೆ ಆವರಣದಲ್ಲಿ ಧನಾತ್ಮಕ ಶಕ್ತಿಯ ಸಂಚಲನವಾಗುತ್ತಿದೆ, ಇಲ್ಲಿನ ಪರಿಸರ,ಬೆಟ್ಟದ ತಪ್ಪಲಿನ ಸುಂದರ ಪ್ರಕೃತಿಯ ಮಡಿಲು ಕಲಿಕೆಗೆ ಹೇಳಿ ಮಾಡಿಸಿದಂತಿದೆ, ಈ ವಾತಾವರಣದಲ್ಲಿ ಮಕ್ಕಳು ಕಲಿತರೆ ಸಾಧಕರಾಗುವುದರಲ್ಲಿ ಸಂಶಯವಿಲ್ಲ ಎಂದರು.

ಎಸ್ಸೆಸ್ಸೆಲ್ಸಿಯಲ್ಲಿ ಶೇ.100 ಫಲಿತಾಂಶದ ಸಾಧನೆ ಮಾಡಿರುವ ಅರಾಭಿಕೊತ್ತನೂರು ಸರ್ಕಾರಿ ಪ್ರೌಢಶಾಲೆ ನೋಡಿದರೆ ಗುರುಕುಲದ ನೆನಪು ತರುತ್ತದೆ ಎಂದ ಅವರು, ಮಕ್ಕಳಿಗೆ ಸರ್ಕಾರಿ ಸೌಲಭ್ಯಗಳ ಜತೆಗೆ ಮತ್ತಷ್ಟು ಪರಿಕರಗಳನ್ನು ಕೊಡಿಸುವ ಪ್ರಯತ್ನ ಶಿಕ್ಷಕರಿಂದ ನಡೆದಿರುವುದು ಸ್ವಾಗತಾರ್ಹ ಎಂದರು.

ದೇಶ ಕಂಡ ಸಾಧಕರೆಲ್ಲಾ ಸರ್ಕಾರಿ ಶಾಲೆಯಲ್ಲೇ ಓದಿದವರು ಎಂದ ಅವರು, ಕೀಳರಿಮೆ ತೊರೆದು ಮಕ್ಕಳನ್ನು ಇಲ್ಲಿ ದಾಖಲಿಸುವ ಮೂಲಕ ಸಮಾನ ಶಿಕ್ಷಣಕ್ಕೆ ಹಾನಿಯಾಗುವುದನ್ನು ತಪ್ಪಿಸುವ ಹೊಣೆ ಪೋಷಕರು, ಸರ್ಕಾರ ಮತ್ತು ಸಮಾಜದ ಮೇಲಿದೆ ಎಂದು ಅಭಿಪ್ರಾಯಪಟ್ಟರು.

ಶಾಲೆಗೆ ಬರುವ ಮಕ್ಕಳು ಶಿಸ್ತು ರೂಢಿಸಿಕೊಳ್ಳಿ,ಪರಸ್ಪರ ದ್ವೇಷ,ಅಸೂಯೆ ತೊರೆದು ಎಲ್ಲರೂ ಸ್ನೇಹಿತರಂತೆ ಇರಬೇಕು, ಜಾತಿ,ಧರ್ಮದ ಎಲ್ಲೆ ಮೀರಿ ನಾವೆಲ್ಲಾ ಒಂದೇ ಎಂಬ ಪವಿತ್ರ ಭಾವನೆಯೊಂದಿಗೆ ಉತ್ತಮ ಸ್ನೇಹಿತರಾಗಿ ಕಲಿಕೆಯ ಧ್ಯೇಯ,ಗುರಿ ಸಾಧನೆಗೆ ಮುನ್ನಡಿ ಬರೆಯಬೇಕು ಎಂದು ಕಿವಿಮಾತು ಹೇಳಿದರು.

# ನಾಡಗುಮ್ಮನಹಳ್ಳಿ ರಸ್ತೆ ಸಮಸ್ಯೆಗೆ ತಾತ್ಕಾಲಿಕ ಪರಿಹಾರ ಸಾರ್ವಜನಿಕರಿಂದ ಮೆಚ್ಚುಗೆ

ಬೂದಿಕೋಟೆ

ಹೋಬಳಿಯ ಬಲಮಂದೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಡಗುಮ್ಮನಹಳ್ಳಿ ಚತ್ತಗುಟ್ಟಹಳ್ಳಿ ಸಂಪರ್ಕ ರಸ್ತೆಯ ದುಸ್ಥಿತಿ ಕುರಿತು "ಕೋಲಾರ ವಾಣಿ" ಪತ್ರಿಕೆಯಲ್ಲಿ ಮಂಗಳವಾರ ಪ್ರಕಟವಾದ ವರದಿ ಪರಿಣಾಮವಾಗಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಎಚ್ಚೆತ್ತುಕೊಂಡು ಸಮಸ್ಯೆಗೆ ತಾತ್ಕಾಲಿಕ ಪರಿಹಾರ ಕಲ್ಪಿಸಿದ್ದಾರೆ.

ಮಳೆ ಬಂದಾಗ ರಸ್ತೆ ಸಂಪೂರ್ಣ ಜಲಾವೃತಗೊಂಡು ಸಾರ್ವಜನಿಕರು, ಶಾಲಾ–ಕಾಲೇಜು ವಿದ್ಯಾರ್ಥಿಗಳು, ರೈತರು ಹಾಗೂ ವಾಹನ ಸವಾರರು ತೀವ್ರ ತೊಂದರೆ ಅನುಭವಿಸುತ್ತಿದ್ದ ಕುರಿತು ಪತ್ರಿಕೆಯಲ್ಲಿ ವರದಿ ಪ್ರಕಟವಾಗಿತ್ತು. ರಸ್ತೆಯಲ್ಲಿ ನೀರು ನಿಂತು ಸಂಚಾರ ದುಸ್ತರವಾಗಿದ್ದರಿಂದ ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದ್ದರು.

ವರದಿ ಪ್ರಕಟವಾದ ಬೆನ್ನಲ್ಲೇ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಟ್ರ್ಯಾಕ್ಟರ್ ಮೂಲಕ ಮಣ್ಣು ಹಾಕಿಸಿ ರಸ್ತೆ ಸಮತಟ್ಟುಗೊಳಿಸುವ ಕಾರ್ಯ ಕೈಗೊಂಡಿದ್ದಾರೆ. ಇದರಿಂದ ಕಳೆದ ಕೆಲವು ದಿನಗಳಿಂದ ಸಂಚಾರಕ್ಕೆ ಅಡ್ಡಿಯಾಗಿದ್ದ ಸಮಸ್ಯೆ ತಾತ್ಕಾಲಿಕವಾಗಿ ನಿವಾರಣೆಯಾಗಿದ್ದು, ಗ್ರಾಮಸ್ಥರು ಹಾಗೂ ವಾಹನ ಸವಾರರು ಇದೀಗ ನಿರಾಳವಾಗಿ ಸಂಚರಿಸುವಂತಾಗಿದೆ.

ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಸ್ಪಂದಿಸಿದ ಅಧಿಕಾರಿಗಳ ಕ್ರಮಕ್ಕೆ ಸಾರ್ವಜನಿಕರು ಮೆಚ್ಚುಗೆ




ವ್ಯಕ್ತಪಡಿಸಿದ್ದಾರೆ. ಸಾರ್ವಜನಿಕ ಸಮಸ್ಯೆಯನ್ನು ಬೆಳಕಿಗೆ ತಂದು ಪರಿಹಾರಕ್ಕೆ ಕಾರಣವಾದ "ಕೋಲಾರ ವಾಣಿ" ಪತ್ರಿಕೆಯ ಕಾರ್ಯವನ್ನು ಗ್ರಾಮಸ್ಥರು ಶ್ಲಾಘಿಸಿದ್ದಾರೆ.

ಆದರೆ ಇದು ಕೇವಲ ತಾತ್ಕಾಲಿಕ ಪರಿಹಾರ ಮಾತ್ರವಾಗಿದ್ದು,

> ವರದಿ ಪ್ರಕಟವಾದ ಬೆನ್ನಲ್ಲೇ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಟ್ರ್ಯಾಕ್ಟರ್ ಮೂಲಕ ಮಣ್ಣು ಹಾಕಿಸಿ ರಸ್ತೆ ಸಮತಟ್ಟುಗೊಳಿಸುವ ಕಾರ್ಯ ಕೈಗೊಂಡಿದ್ದಾರೆ. ಇದರಿಂದ ಕಳೆದ ಕೆಲವು ದಿನಗಳಿಂದ ಸಂಚಾರಕ್ಕೆ ಅಡ್ಡಿಯಾಗಿದ್ದ ಸಮಸ್ಯೆ ತಾತ್ಕಾಲಿಕವಾಗಿ ನಿವಾರಣೆಯಾಗಿ

ಮಳೆಗಾಲದಲ್ಲಿ ಮತ್ತೆ ಇದೇ ಸಮಸ್ಯೆ ಮರುಕಳಿಸುವ ಸಾಧ್ಯತೆ ಇದೆ ಎಂದು ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದ್ದಾರೆ. ರಸ್ತೆಗೆ ಶಾಶ್ವತ ಕಾಮಗಾರಿ ಕೈಗೊಂಡು, ನೀರು ಸರಾಗವಾಗಿ ಹರಿದು ಹೋಗಲು ಸೂಕ್ತ ಚರಂಡಿ ವ್ಯವಸ್ಥೆ ನಿರ್ಮಿಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಬಲಮಂದೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಭಾಸ್ಕರ್, "ಸಾರ್ವಜನಿಕರಿಗೆ ಸಮಸ್ಯೆಯಾಗದಂತೆ ತಾತ್ಕಾಲಿಕ ಪರಿಹಾರ ಕಲ್ಪಿಸಲಾಗಿದೆ. ರಸ್ತೆ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವ ಸಂಬಂಧ ಲೋಕೋಪಯೋಗಿ ಇಲಾಖೆಗೆ ಪತ್ರ ಬರೆಯಲಾಗುವುದು" ಎಂದು ತಿಳಿಸಿದ್ದಾರೆ.

ಒಟ್ಟಾರೆ, ಸಾರ್ವಜನಿಕ ಸಮಸ್ಯೆಯನ್ನು ಪತ್ರಿಕೆಯ ಮೂಲಕ ಪ್ರಸ್ತಾಪಿಸಿದ ಬೆನ್ನಲ್ಲೇ ಆಡಳಿತ ಯಂತ್ರ ಸ್ಪಂದಿಸಿರುವುದು ಗ್ರಾಮಸ್ಥರಲ್ಲಿ ಸಂತಸ ಮೂಡಿಸಿದ್ದು, ಶಾಶ್ವತ ಪರಿಹಾರದ

# 'ತಂತ್ರಜ್ಞಾನದ ಯುಗದಲ್ಲಿ ಮೌಲ್ಯಯುತ ಬುದ್ಧಿವಂತಿಕೆ ಅಗತ್ಯ'

ತುಮಕೂರು

ಎಐ ತಂತ್ರಜ್ಞಾನದ ಅರಿವಿರುವ ಪರಿಣತರು ಭವಿಷ್ಯದಲ್ಲಿ ತಂತ್ರಜ್ಞಾನ ತಿಳಿಯದವರ ಸ್ಥಾನವನ್ನು ಪಡೆದುಕೊಳ್ಳಲಿದ್ದಾರೆ. ಆದರೆ, ಎಐ ತಂತ್ರಜ್ಞಾನಕ್ಕೆ ಮಾನವ ಸಹಜವಾದ ಸಹಾನುಭೂತಿ, ಸಂದರ್ಭೋಚಿತ ನಿರ್ಧಾರ ಸಾಮರ್ಥ್ಯ, ಆಳವಾದ ಅಂತಃಪ್ರಜ್ಞೆ ಮತ್ತು ಸೃಜನಶೀಲತೆಯನ್ನು ನಕಲು ಮಾಡಲು ಸಾಧ್ಯವಿಲ್ಲ. ಕಲಿಯುವುದು, ಕಲಿತದ್ದನ್ನು ಬಿಡುವುದು ಮತ್ತು ಮರುಕಳಿಸುವುದು ಇಂದಿನ ಅಗತ್ಯವಾಗಿದೆ ಎಂದು ಅಂತರರಾಷ್ಟ್ರೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆಯ ನಿರ್ದೇಶಕರಾದ ಪ್ರೊ. ದೇಬಬ್ರತ ದಾಸ್ ಅಭಿಪ್ರಾಯಪಟ್ಟರು.

ಅವರು ಬುಧವಾರ ನಡೆದ ತುಮಕೂರು ವಿಶ್ವವಿದ್ಯಾನಿಲಯದ 19ನೇ ಘಟಿಕೋತ್ಸವದಲ್ಲಿ ಪದವಿ ಪ್ರದಾನ ಮಾಡಿ ಘಟಿಕೋತ್ಸವ ಭಾಷಣ ಮಾಡಿದರು.

ಭಾರತವು ಇಂದು ಕೇವಲ ತಂತ್ರಜ್ಞಾನ ಬಳಸುವ ದೇಶವಾಗಿ ಉಳಿದಿಲ್ಲ, ಬದಲಿಗೆ ಜಗತ್ತಿಗೇ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ನಿರ್ಮಿಸಿಕೊಡುತ್ತಿದೆ. ಐಐಐಟಿ–ಬೆಂಗಳೂರು ಮುನ್ನಡೆಸುತ್ತಿರುವ ಮಾಡ್ಯುಲರ್ ಓಪನ್ ಸೋರ್ಸ್ ಐಡೆಂಟಿಟಿ ಪ್ಲಾಟ್‌ಫಾರ್ಮ್ ಉತ್ಪನ್ನವು ಇಂದು ಜಗತ್ತಿನ 29 ದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಇದರಿಂದಾಗಿ ತುಮಕೂರಿನಲ್ಲಿ ಕುಳಿತಿರುವ ವಿದ್ಯಾರ್ಥಿಗೂ ಸ್ಯಾನ್ ಫ್ರಾನ್ಸಿಸ್ಕೋ ಅಥವಾ ಟೋಕಿಯೋದಲ್ಲಿರುವ ವ್ಯಕ್ತಿಯಷ್ಟೇ ಸಮಾನ ಜಾಗತಿಕ



ಅವಕಾಶಗಳು ಸಿಗುತ್ತಿವೆ ಎಂದರು.

ತುಮಕೂರು ಜಿಲ್ಲೆಯು ಶ್ರೀ ಸಿದ್ದಗಂಗಾ ಮಠದ ಪರಮಪೂಜ್ಯ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ಆಶೀರ್ವಾದ ಪಡೆದ ಪುಣ್ಯಭೂಮಿಯಾಗಿದೆ. ಅನ್ನ, ಅಕ್ಷರ ಮತ್ತು ಆಶ್ರಯ ಎಂಬ ತ್ರಿವಿಧ ದಾಸೋಹಗಳ ತಳಹದಿಯ ಮೇಲೆ ನಿರ್ಮಾಣವಾಗಿರುವ ಈ ನಾಡಿನ ವಿದ್ಯಾರ್ಥಿಗಳು, ಇಂದು ಭಾರತದ ಹೈ–ಟೆಕ್ ಮತ್ತು ಕೈಗಾರಿಕಾ ಕ್ಷೇತ್ರದ ಹೊಸ್ತಿಲಲ್ಲಿ ನಿಂತಿದ್ದಾರೆ ಎಂದರು.

ಏಷ್ಯಾದಲ್ಲೇ ಅತಿ ದೊಡ್ಡದಾದ ಎಚ್.ಎ.ಎಲ್ ಹೆಲಿಕಾಪ್ಟರ್ ಉತ್ಪಾದನಾ ಘಟಕ ಹಾಗೂ ತಂತ್ರಜ್ಞಾನದ ರಾಜಧಾನಿ ಬೆಂಗಳೂರು ಇಲ್ಲಿಗೆ ಸಮೀಪದಲ್ಲಿದೆ. ಈ ಮೂಲಕ ತುಮಕೂರು ಭಾರತದ ಗ್ರಾಮೀಣ ಆತ್ಮ ಮತ್ತು ನಗರೀಕೃತ ತಾಂತ್ರಿಕ ಭವಿಷ್ಯದ ಪರಿಪೂರ್ಣ ಸಮ್ಮಿಲನವಾಗಿದೆ. ಪದವಿ ಸ್ವೀಕರಿಸುತ್ತಿರುವ ವಿದ್ಯಾರ್ಥಿಗಳ ಸಮೂಹ ಕರ್ನಾಟಕದ ಉಜ್ವಲ ಭವಿಷ್ಯವನ್ನು ಮತ್ತು ಆ ಮೂಲಕ ಮುನ್ನಡೆಯುತ್ತಿರುವ ವಿಕಸಿತ ಭಾರತದ ನಿರ್ಣಾಯಕ ಶಕ್ತಿ ಎಂದರು.

ಭಸ್ಮಾಸುರನಿಗೆ ಅಪಾರ ಬುದ್ಧಿವಂತಿಕೆ ಮತ್ತು ಶಿಸ್ತು ಇತ್ತು. ಆದರೆ ನೈತಿಕತೆ ಮತ್ತು ವಿವೇಕವಿಲ್ಲದ ಕಾರಣ ಆ ಶಕ್ತಿ ಅವನ ವಿನಾಶಕ್ಕೇ ಕಾರಣವಾಯಿತು. ಇಂದಿನ ಕೃತಕ ಬುದ್ಧಿಮತ್ತೆ ಮಾನವಕುಲಕ್ಕೆ ಭಸ್ಮಾಸುರ ವರ ದಂತೆ ಸಿಕ್ಕಿರುವ ಪ್ರಬಲ ಶಕ್ತಿಯಾಗಿದೆ. ನೈತಿಕ ಹೃದಯವಿಲ್ಲದಿದ್ದರೆ ಈ ಶಕ್ತಿ ಸಮಾಜದ ವ್ಯವಸ್ಥೆ ಮತ್ತು ಖಾಸಗಿತನವನ್ನು ನಾಶಪಡಿಸಬಹುದು. ಕೇವಲ ಬುದ್ಧಿವಂತಿಕೆಯು ಅಲ್ಗಾರಿದಮ್ ಅನ್ನು ಹೇಗೆ ನಿರ್ಮಿಸಬೇಕೆಂದು ಹೇಳಿಕೊಟ್ಟರೆ, ಮೌಲ್ಯಗಳು ಅದನ್ನು ಬಳಸಬೇಕೇ ಅಥವಾ ಬೇಡವೇ ಎಂದು ನಿರ್ಧರಿಸುತ್ತವೆ ಎಂದರು.

12ನೇ ಶತಮಾನದ ಶರಣರ ಕಾಯಕವೇ ಕೈಲಾಸ ತತ್ವವನ್ನು ನೆನಪಿಸಿದ ಅವರು, ಪ್ರಾಮಾಣಿಕ ಮತ್ತು ಸಮರ್ಪಿತ ಕೆಲಸವೇ ದೈವತ್ವ ಎಂದು ತಿಳಿಸಿದರು. ವಿದ್ಯಾರ್ಥಿಗಳು ತಮ್ಮ ವಾಣಿಜ್ಯ, ವಿಜ್ಞಾನ ಹಾಗೂ ತಂತ್ರಜ್ಞಾನದ ಜ್ಞಾನವನ್ನು ಸ್ಥಳೀಯ ಕೃಷಿ ವಲಯ, ಗ್ರಾಮೀಣ ಆರೋಗ್ಯ, ನೀರು ಸಂರಕ್ಷಣೆ ಮತ್ತು ಸಣ್ಣ ಕೈಗಾರಿಕೆಗಳ ಸುಧಾರಣೆಗೆ ಬಳಸಿಕೊಳ್ಳಬೇಕು. ತಂತ್ರಜ್ಞಾನವು ಕೇವಲ ಇಂಜಿನ್ ಆಗಿದ್ದರೆ, ನಮ್ಮ ಚಾರಿತ್ರ್ಯ ಮತ್ತು ಮೌಲ್ಯಗಳೇ ಅದರ ಸ್ಟಿಯರಿಂಗ್ ವೀಲ್ ಎಂದರು.

05/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ರಸ್ತೆ ಇಕ್ಕೆಲ ಮಣ್ಣು ತೆರವು

ಶಿಡ್ಲಘಟ್ಟ

ನಗರದಿಂದ ದಿಬ್ಬೂರಹಳ್ಳಿ ಮಾರ್ಗದಲ್ಲಿರುವ ರೈಲ್ವೆ ಅಂಡರ್ ಪಾಸ್ ನಲ್ಲಿ ರಸ್ತೆಯ ಎರಡು ಭಾಗದ ಇಕ್ಕೆಲಗಳಲ್ಲಿ ತುಂಬಿದ್ದ ಮಣ್ಣಿಗೆ ಕೊನೆಗೂ ಮೋಕ್ಷ ಸಿಕ್ಕಿದೆ.

ಈ ಮಾರ್ಗದಲ್ಲಿ ಸಂಚರಿಸುವ ದ್ವಿಚಕ್ರ ವಾಹನ ಸವಾರರು ಮತ್ತು ನಾಗರಿಕರು ನಗರಸಭೆಯ ಸಹಾಯಕ ಕಾರ್ಯ ಪಾಲಕ ಅಭ್ಯಂತರ (ಪರಿಸರ) ಮೋಹನ್ ಕುಮಾರ್ ಅವರಿಗೆ ರಸ್ತೆಯ ಇಕ್ಕಲಳ್ಳಿರುವ ಮಣ್ಣಿನಿಂದ ಆಗುತ್ತಿರುವ ಅಪಘಾತಗಳ ಕುರಿತು ಮಾಹಿತಿ ನೀಡಿದರು.

ಕೂಡಲೇ ಕಾರ್ಯ ಪ್ರವೃತ್ತರಾದ ಪರಿಸರ ಅಭ್ಯಂತರ ಮೋಹನ್ ಕುಮಾರ್ ಮತ್ತು ನಗರಸಭೆಯ ಪೌರಕಾರ್ಮಿಕರು ಅಂಡರ್ ಪಾಸ್ ನಿಂದ ತಾಲೂಕ ಕಚೇರಿ ತನಕ ರಸ್ತೆಯ ಇಕ್ಕಳಲ್ಲಿ ತುಂಬಿದ ಮಣ್ಣನ್ನು ತೆರವು ಮಾಡುವ ಕಾರ್ಯವನ್ನು ಕೈಗೊಂಡರು.

# ರೈತರಿಗೆ 'ಖೇತ್ ಬಚಾವೋ' ಅಭಿಯಾನದ ಅರಿವು

ಕೋಲಾರ

ಕೃಷಿ ವಿಜ್ಞಾನ ಕೇಂದ್ರ (ಕೆವಿಕೆ), ಕೋಲಾರ, ಪಶು ಚಿಕಿತ್ಸಾಲಯ ಕ್ಯಾಲನೂರು ಹಾಗೂ ಸ್ನೇಹ ಭಾರತಿ ವಿವಿಧೋದ್ದೇಶ ಸಹಕಾರ ಸಂಘ ಕ್ಯಾಲನೂರು ಇವರ ಸಂಯುಕ್ತ ಸಹಯೋಗದಲ್ಲಿ ಕ್ಯಾಲನೂರು ಗ್ರಾಮದಲ್ಲಿ ಯಶಸ್ವಿಯಾಗಿ ಪಶು ಆರೋಗ್ಯ ಶಿಬಿರವನ್ನು ಆಯೋಜಿಸಲಾಯಿತು.

ಶಿಬಿರದಲ್ಲಿ ಕ್ಯಾಲನೂರು ಪಶು ಚಿಕಿತ್ಸಾಲಯದ ಪಶುವೈದ್ಯಾಧಿಕಾರಿಗಳಾದ ಡಾ. ವಿನಯ್ ಬಿ.ಎ ಮತ್ತು ಡಾ. ವಿಶ್ವನಾಥ ಅವರು ರಾಸುಗಳಿಗೆ ಗರ್ಭ ತಪಾಸಣೆ, ಬಂಜೆತನ ಚಿಕಿತ್ಸೆ, ಪಡ್ಡೆಗಳ ಗರ್ಭಕೋಶ ಬೆಳವಣಿಗೆಗೆ ಔಷಧೋಪಚಾರ, ಹಾಲಿನ ಪ್ರಮಾಣ ಮತ್ತು ಹಾಲಿನ ಜಿಡ್ಡಿನಾಂಶ ಪರೀಕ್ಷೆ, ಕೆಚ್ಚಲು ಬಾವುಗಳಿಗೆ ಚಿಕಿತ್ಸೆ, ರಕ್ತ ಹೀರುವ ಉಣ್ಣೆ ಮತ್ತು ಹೇನುಗಳಿಗೆ ಔಷಧ ಸಿಂಪರಣೆ ಸೇರಿದಂತೆ ವಿವಿಧ ಜಾನುವಾರು ಆರೋಗ್ಯ ತಪಾಸಣೆಗಳನ್ನು ನಡೆಸಿದರು.



ಇದಲ್ಲದೆ ಜೀರ್ಣಕ್ರಿಯೆ ಸಂಬಂಧಿತ ಕಾಯಿಲೆಗಳ ತಪಾಸಣೆ, ರೋಗ ನಿರೋಧಕ ಶಕ್ತಿ ಹೆಚ್ಚಿಸುವ ಔಷಧ ವಿತರಣೆ ಹಾಗೂ ಎಲ್ಲಾ ರಾಸುಗಳಿಗೆ ಜಂತು ನಾಶಕ ಔಷಧಿಯನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ಸುಮಾರು 100 ಹಸುಗಳು, 50 ಮೇಕೆ ಮತ್ತು ಕುರಿಗಳಿಗೆ ಜಂತು ನಾಶಕ ಔಷಧಿ ನೀಡಲಾಗಿದ್ದು, 20 ರಾಸುಗಳಿಗೆ ಬಂಜೆತನ ನಿವಾರಣೆ ಚಿಕಿತ್ಸೆ ನೀಡಲಾಯಿತು. ಇನ್ನೂ 20 ರಾಸುಗಳಿಗೆ ಹಾಲಿನಲ್ಲಿ ಕಬ್ಬಿಣಾಂಶ ಹಾಗೂ ಡಿಗ್ರಿ ಪರೀಕ್ಷೆ ನಡೆಸಿ ಅಗತ್ಯವಿದ್ದ ಪ್ರಾಣಿಗಳಿಗೆ ಲವಣ ಮಿಶ್ರಿತ ಪುಡಿ ನೀಡಲಾಯಿತು.

ಗ್ರಾಮದಲ್ಲಿರುವ ಎಲ್ಲಾ ಹಸು, ಎತ್ತು ಮತ್ತು ಎಮ್ಮೆಗಳಿಗೆ ಹೊರ ಪರೋಪಜೀವಿ ನಿಯಂತ್ರಣಕ್ಕಾಗಿ ಔಷಧ ಸಿಂಪರಣೆ ಮಾಡಲಾಗಿದ್ದು, ಸುಮಾರು 50 ರಾಸುಗಳಿಗೆ ಸಾಮಾನ್ಯ ತಪಾಸಣೆ ಹಾಗೂ ಇತರ ಚಿಕಿತ್ಸೆಗಳನ್ನು ನೀಡಲಾಯಿತು.

ಚಿಕಿತ್ಸೆಯ ನಂತರ ನಡೆದ ಗ್ರಾಮಸ್ಥರ ಸಭೆಯಲ್ಲಿ ಡಾ. ವಿನಯ್ ಬಿ.ಎ ಮತ್ತು ಡಾ. ವಿಶ್ವನಾಥ ಅವರು ಜಾನುವಾರುಗಳ ಆರೋಗ್ಯ ರಕ್ಷಣೆಗೆ ಮುಂಚಿತ ತಪಾಸಣೆ ಹಾಗೂ ಲಸಿಕೆಗಳ ಮಹತ್ವವನ್ನು ವಿವರಿಸಿದರು. ರೈತರು ಮುನ್ನೆಚ್ಚರಿಕಾ ಕ್ರಮಗಳನ್ನು ಪಾಲಿಸಬೇಕು ಎಂದು ಅವರು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ಶಿವಾನಂದ ಹೊಂಗಲ, ವಿಜ್ಞಾನಿಗಳಾದ ಡಾ. ಮಂಜುನಾಥ್ ರೆಡ್ಡಿ ಟಿ.ಬಿ ಹಾಗೂ ಡಾ. ಶಶಿಧರ್ ಕೆ.ಆರ್ ಅವರು ಭಾಗವಹಿಸಿ ಪಶು ಆರೋಗ್ಯ ಶಿಬಿರದ ಮಹತ್ವ ಹಾಗೂ ಮೇವಿನ ಬೆಳೆಗಳ ಉತ್ಪಾದನೆ ಮತ್ತು ಬಳಕೆ ಕುರಿತು ಮಾಹಿತಿ ನೀಡಿದರು.

ಸ್ನೇಹ ಭಾರತಿ ವಿವಿಧೋದ್ದೇಶ ಸಹಕಾರ ಸಂಘದ ಅಧ್ಯಕ್ಷ ರಾಮಕೃಷ್ಣ ಬಾಬು, ಪಶು ಚಿಕಿತ್ಸಾಲಯದ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಭಾಗವಹಿಸಿ ಶಿಬಿರದ ಸದುಪಯೋಗ ಪಡೆದುಕೊಂಡರು.

ಇದೇ ಸಂದರ್ಭದಲ್ಲಿ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರ, ಕೋಲಾರ ಹಾಗೂ ಕೃಷಿ ಇಲಾಖೆ ಸಹಯೋಗದಲ್ಲಿ ಜೂನ್ 1ರಿಂದ 30ರವರೆಗೆ ಜಿಲ್ಲಾದ್ಯಂತ ನಡೆಯುತ್ತಿರುವ 'ಖೇತ್ ಬಚಾವೋ (ಕೃಷಿ ಉಳಿಸಿ)' ಅಭಿಯಾನದ ಕುರಿತು ರೈತರಿಗೆ ಮಾಹಿತಿ ನೀಡಲಾಯಿತು. ಈ ಅಭಿಯಾನದ ಮುಖ್ಯ ಉದ್ದೇಶ ಮಣ್ಣಿನ ಆರೋಗ್ಯದ ಮಹತ್ವ ಕುರಿತು ಜಾಗೃತಿ ಮೂಡಿಸುವುದು, ಮಣ್ಣಿನ ಪರೀಕ್ಷೆ ಆಧಾರಿತ ಸಮತೋಲಿತ ರಸಗೊಬ್ಬರ ಬಳಕೆಯನ್ನು ಉತ್ತೇಜಿಸುವುದು, ರಾಸಾಯನಿಕ ಗೊಬ್ಬರಗಳ ಅಸಮತೋಲಿತ ಬಳಕೆಯನ್ನು ಕಡಿಮೆ ಮಾಡುವುದು.

## ರೈತರ ಹೋರಾಟಕ್ಕೆ ಬೆಂಬಲ

ಶಿಡ್ಲಘಟ್ಟ

ತಾಲ್ಲೂಕಿನ ಜಂಗಮಕೋಟೆ ಹೋಬಳಿಯ 13 ಹಳ್ಳಿಗಳ 2823 ಎಕರೆ ಫಲವತ್ತದ ಕೃಷಿ ಭೂಮಿಯನ್ನು ಕೈಗಾರಿಕೆಗಾಗಿ ಸ್ವಾಧೀನ ಮಾಡಿಕೊಳ್ಳಲು ಹೊರಟಿರುವ ಕೆಐಎಡಿಬಿ ಅಧಿಕಾರಿಗಳ ನಡೆಯನ್ನು ಖಂಡಿಸಿ ಜೂನ್ 5ರಂದು ನಡೆಯಲಿರುವ 10 ಸಾವಿರ ದ್ವಿಚಕ್ರವಾಹನಗಳ ವಿಧಾನಸೌಧ ಮುತ್ತಿಗೆ ಹೋರಾಟದಲ್ಲಿ ಕ್ಷೇತ್ರದ ರೈತರು ಮತ್ತು ಜನಸಾಮಾನ್ಯರು ಪಕ್ಷತೀತವಾಗಿ ಮತ್ತು ಜಾತ್ಯತೀತವಾಗಿ ಭಾಗವಹಿಸಬೇಕೆಂದು ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎನ್ ರಾಜಣ್ಣ ಮನವಿ ಮಾಡಿದ್ದಾರೆ.

ನಗರದ ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಫಲವತ್ತಾದ ಕೃಷಿ ಭೂಮಿಯನ್ನು ಯಾವುದೇ ಕಾರಣಕ್ಕೂ ಕೈಗಾರಿಕೆ ಮಾಡಬೇಡಿ ಎಂದು ನಿರಂತರ ಹೋರಾಟ ಮಾಡಿಕೊಂಡು ಬಂದಿದ್ದೇವೆ ಆದರೆ ಸರ್ಕಾರ ಮೊಂಡವಾದ ಮಾಡಿಕೊಂಡಿದ್ದು ಸರ್ಕಾರದ ಕಣ್ತೆರೆಸುವ ಸಲುವಾಗಿ ನಡೆಯುತ್ತಿರುವ ದ್ವಿಚಕ್ರ ವಾಹನಗಳ ವಿಧಾನಸೌಧ ಮತ್ತಿಗೆ ಹೋರಾಟದಲ್ಲಿ ಎಲ್ಲರೂ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಮುಂದೆ ಧರಣಿ ಸ್ಥಳದಿಂದ ಬೆಂಗಳೂರು ವಿಧಾನಸೌಧ ಚಲೋ ಬೈಕ್ರ್ಯಾಲಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಈ ಹೋರಾಟದಲ್ಲಿ ರೈತರು ರೈತ ಮಹಿಳೆಯರು ಯುವಕರು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರೈತರು ಉಳಿದಾಗ ಮಾತ್ರ ದೇಶ ಉಳಿಯಲು ಸಾಧ್ಯ ಹಾಗಾಗಿ ಐತಿಹಾಸಿಕ ಹೋರಾಟದಲ್ಲಿ ಎಲ್ಲರೂ ಭಾಗಿಗಳಾಗಬೇಕು ಎಂದು ಕೋರಿದರು.

ಚಿಕ್ಕಬಳ್ಳಾಪುರ ಶಿಡ್ಲಘಟ್ಟ ತಾಲ್ಲೂಕು ಮಾತ್ರವಲ್ಲ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡಿದೆ ನಮ್ಮ ವಿರೋಧವಿಲ್ಲ ಆದರೆ ಫಲವತ್ತಾದ ಕೃಷಿ ಭೂಮಿಯನ್ನು ವಶಪಡಿಸಿಕೊಂಡು ಕೈಗಾರಿಕೆ ಮಾಡಲು ಯಾವ ಕಾರಣಕ್ಕೂ ಸಹ ನಾವು ಅವಕಾಶ ನೀಡುವುದಿಲ್ಲ ಸರ್ಕಾರದ ಭೂಮಿ ಬೇರೆ ಕಡೆ ಇದ್ದರೆ ಅಲ್ಲಿ ಕೈಗಾರಿಕೆ ಮಾಡಲಿ ನಾವು ಸ್ವಾಗತಿಸುತ್ತೇವೆ ಅದು ಹೊರತುಪಡಿಸಿ ಕೃಷಿ ಭೂಮಿಯನ್ನು ವಶಪಡಿಸಿಕೊಳ್ಳುವ ದುಸಾಹಸವನ್ನು ಮಾಡಬಾರದು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕುಂದಲಗುರ್ಕಿ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷ ದೊಣ್ಣಹಳ್ಳಿ ರಾಮಣ್ಣ, ಹಳ್ಳಿಗಳ ರೈತರ ಹೋರಾಟ ಸಮಿತಿಯ ಅಧ್ಯಕ್ಷ ಹಿರೇಬಲ್ಲ ಕೃಷ್ಣಪ್ಪ, ಯಣಂಗೂರು ಅಶ್ವತ್ಥ ಗೌಡ, ಯುವ ರೈತ ಮುಖಂಡ ಅಜಿತ್, ಮಳಮಾಚನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಬಸವಪಟ್ಟಣ ಬೈರೇಗೌಡ ಇನ್ನಿತರರು ಉಪಸ್ಥಿತರಿದ್ದರು.

# ರೈತರನ್ನು ಕಡೆಗಣಿಸುತ್ತಿರುವ ಜಿಲ್ಲಾಡಳಿತ ವಿರುದ್ಧ ಜೂ.ರಂದು ಪಂಜಿನ ಮೆರವಣಿಗೆ



ಶಿಡ್ಲಘಟ್ಟ

ಜಂಗಮಕೋಟೆ ಭಾಗದ ಕೆಐಎಡಿಬಿಗೆ ನಮ್ಮ ಜಮೀನು ಕೊಡಲು ನಾವು ಸಿದ್ದರಿದ್ದು ಕಳೆದ 72 ದಿನಗಳಿಂದಲೂ ಜಿಲ್ಲಾಡಳಿತ ಭವನದ ಆವರಣದಲ್ಲಿ ಅನಿರ್ಧಿಷ್ಟ ಧರಣಿ ನಡೆಸುತ್ತಿದ್ದರೂ ರಾಜ್ಯ ಸರಕಾರ, ಜಿಲ್ಲಾಧಿಕಾರಿಗಳು ನಮಗೆ ಯಾವುದೆ ರೀತಿಯಲ್ಲೂ ಸ್ಪಂಧಿಸುತ್ತಿಲ್ಲ ಎಂದು ಸಾಮೂಹಿಕ ನಾಯಕತ್ವ ರೈತ ಸಂಘದ ಮುಖಂಡ ಮುನಿಕೆಂಪಣ್ಣ ದೂರಿದರು.

ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈಗಾಗಲೆ ಅಲ್ಲಿನ ಫಲವತ್ತಾದ ಭೂಮಿಯನ್ನು ಸ್ವಾಧೀನ ಪ್ರಕ್ರಿಯೆಯಿಂದ ಕೈ ಬಿಡಲಾಗಿದೆ. ಇನ್ನುಳಿದಂತೆ ಇರುವ ಭಂಜರು ಭೂಮಿ, ಕೃಷಿ ನಡೆಸಲು ಅಷ್ಟಾಗಿ ಯೋಗ್ಯವಲ್ಲದ ಭೂಮಿ, ಸರಕಾರಿ ಜಮೀನನ್ನು ಕೂಡಲೆ ಸ್ವಾಧೀನ ಪಡಿಸಿಕೊಳ್ಳಬೇಕು ಎಂದು ಆಗ್ರಹಿಸಿದರು.

ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ 72 ದಿನಗಳಿಂದಲೂ ಅನಿರ್ಧಿಷ್ಟ ಧರಣಿ ನಡೆಸುತ್ತಿದ್ದರೂ ನಮಗೆ ಸರಕಾರ, ಜಿಲ್ಲಾಡಳಿತದಿಂದ ಸೂಕ್ತ ಸ್ಪಂಧನೆ ಸಿಗುತ್ತಿಲ್ಲ. ಅದಕ್ಕಾಗಿ ಜೂನ್ 4ರಂದು ಚಿಕ್ಕಬಳ್ಳಾಪುರ ನಗರದ ಶಿಡ್ಲಘಟ್ಟ ವೃತ್ತದಿಂದ ಅನಿರ್ಧಿಷ್ಟ ಧರಣಿ ನಡೆಯುತ್ತಿರುವ ಡಿಸಿ ಕಚೇರಿವರೆಗೂ ಪಂಜಿನ ಮೆರವಣಿಗೆ ಹಮ್ಮಿಕೊಂಡಿದ್ದೇವೆ ಎಂದರು.

5ನೇ ತಾರೀಕಿನಂದು ಉಪವಾಸ ಸತ್ಯಾಗ್ರಹ ಆರಂಭಿಸಲಿದ್ದು ನಮ್ಮ ಬೇಡಿಕೆ ಈಡೇರುವವರೆಗೂ ಉಪವಾಸ ಸತ್ಯಾಗ್ರಹ ಮುಂದುವರೆಸುತ್ತೇವೆ ಎಂದರು.

ನಮಗೆ ಕೃಷಿ ಮಾಡಲು ಆಗದಂತಹ ಭಂಜರು ಭೂಮಿ ಇದೆ. ಅದರಿಂದ ನಾವು ಜೀವನ ನಡೆಸಲು ಸಾಧ್ಯವಿಲ್ಲದಂತಾಗಿದೆ. ಹಾಗಾಗಿ ನಾವು ಕೈಗಾರಿಕೆ ಪ್ರದೇಶ ಅಭಿವೃದ್ಧಿ ಮಂಡಳಿಗೆ ನೀಡಲು ಸಿದ್ದ. ಇದರಿಂದ ನಮ್ಮ ಮಕ್ಕಳಿಗೆ ಉದ್ಯೋಗವಾದರೂ ಸಿಗಲಿದೆ. ಬದುಕನ್ನು ಕಟ್ಟಿಕೊಳ್ಳುತ್ತೇವೆ ಎಂದರು.

ರೈತ ಸಂಘದ ತಾಲೂಕು ಅಧ್ಯಕ್ಷ ಸುಬ್ರಮಣಿ ಮಾತನಾಡಿ, ನಾವು ನಮ್ಮ ಪಾಲಿನ ಭಂಜರು ಭೂಮಿಯನ್ನು ಕೆಐಎಡಿಬಿಗೆ ಬಿಟ್ಟುಕೊಡಲು ಸಿದ್ದರಿದ್ದೇವೆ. ನಾವು ಫಲವತ್ತಾದ ಭೂಮಿಯನ್ನು ಬಿಡಿ ಎಂದು ಯಾರಿಗೂ ಬಲವಂತ ಮಾಡುತ್ತಿಲ್ಲ ಎಂದರು.

ಇನ್ನು ನಾವು ನಮ್ಮ ಭೂಮಿಯನ್ನು ಕೆಐಎಡಿಬಿಗೆ ನೀಡಲು ಸಿದ್ದವಿದ್ದು 72 ದಿನಗಳಿಂದಲೂ ನಾವು ನಾವೇ 50, 100 ರೂ, ಹಣವನ್ನು ಕೈ ಯಿಂದ ಹಾಕಿಕೊಂಡು ಪೆಂಡಾಲ್, ಚೇರು ಹಾಕಿಕೊಂಡು ಪ್ರತಿಭಟನೆ ನಡೆಸುತ್ತಿದ್ದೇವೆ. ಯಾವ ಸಮಾಜ ಸೇವಕರಿಂದಲೂ ದೇಣಿಗೆ ಪಡೆದಿಲ್ಲ. ಸುಖಾ ಸುಮ್ಮನೆ ನಮ್ಮ ಮೇಲೆ ವಿನಾಕಾರಣ ಆರೋಪ ಮಾಡಬಾರದು ಎಂದು ವಿರೋಧಿಗಳಿಗೆ ಹೇಳಿದರು.

ಈ ಸಂದರ್ಬದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಕ್ತರಹಳ್ಳಿ ಪ್ರತೀಶ್, ತಾಲ್ಲೂಕು ಅಧ್ಯಕ್ಷ ಮುನೇಗೌಡ, ಉಪಾಧ್ಯಕ್ಷ ಡಿ.ವಿ.ನಾರಾಯಣಸ್ವಾಮಿ, ಕಾರ್ಯಾದ್ಯಕ್ಷ ಹರೀಶ್, ಮುಖಂಡರಾದ ಆಂಜಿನಪ್ಪ, ಪ್ರಭುಗೌಡ, ನಾಗರಾಜ್ ಮತ್ತಿತರರು ಹಾಜರಿದ್ದರು.

# ಗ್ರಾಮೀಣರಿಗೆ ಕೈಗೆಟುಕುವ ನೇತ್ರ ಚಿಕಿತ್ಸೆ



ಮಾಗಡಿ

ಗ್ರಾಮೀಣ ಭಾಗದ ಜನರು ಮತ್ತು ರೈತರಿಗೆ ಸುಲಭ ಹಾಗೂ ಕೈಗೆಟುಕುವ ದರದಲ್ಲಿ ಅತ್ಯಾಧುನಿಕ ನೇತ್ರ ಚಿಕಿತ್ಸೆಯನ್ನು ಒದಗಿಸುವ ಉದ್ದೇಶದಿಂದ ವೈಭವ ಕಣ್ಣಿನ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದೆ ಎಂದು ನೆಲಮಂಗಲದ ಶಿವಾನಂದ ಆಶ್ರಮದ ಪೀಠಾಧ್ಯಕ್ಷ ಶ್ರೀ ರಮಣಾನಂದನಾಥ ಸ್ವಾಮೀಜಿಗಳು ತಿಳಿಸಿದರು.

ಪಟ್ಟಣದ ನಾರಸಿಂಹ ವೃತ್ತದಲ್ಲಿರುವ ವೈಭವ ಕಣ್ಣಿನ ಆಸ್ಪತ್ರೆಗೆ ಭೇಟಿ ನೀಡಿ ಗೌರವ ಸ್ವೀಕರಿಸಿದ ಬಳಿಕ ಅವರು ಮಾತನಾಡಿದರು. ನಗರ ಪ್ರದೇಶಗಳಿಗೆ ಹೋಗಿ ಚಿಕಿತ್ಸೆ ಪಡೆಯಲು ಗ್ರಾಮೀಣ ಜನರು ಎದುರಿಸುವ ಸಮಯ ಮತ್ತು ಹಣದ ವ್ಯಯವನ್ನು ಕಡಿಮೆ ಮಾಡುವ ದೃಷ್ಟಿಯಿಂದ ಈ ಆಸ್ಪತ್ರೆ ಮಹತ್ವದ ಪಾತ್ರವಹಿಸುತ್ತಿದೆ ಎಂದು ಹೇಳಿದರು.

ನೆಲಮಂಗಲದಲ್ಲಿ ಕಳೆದ ಏಳು ವರ್ಷಗಳಿಂದ ಯಶಸ್ವಿಯಾಗಿ ಕಣ್ಣಿನ ಆಸ್ಪತ್ರೆ ನಡೆಸಿದ ಅನುಭವದೊಂದಿಗೆ ಈ ತಂಡ ಕಾರ್ಯನಿರ್ವಹಿಸುತ್ತಿದ್ದು, ಗ್ರಾಮೀಣ ಜನರಿಗೆ ಗುಣಮಟ್ಟದ ನೇತ್ರ ಚಿಕಿತ್ಸೆಯನ್ನು ಅವರದೇ ಪ್ರದೇಶದಲ್ಲಿ ಒದಗಿಸುವುದು ಶ್ಲಾಘನೀಯ ಪ್ರಯತ್ನವಾಗಿದೆ ಎಂದು ಸ್ವಾಮೀಜಿಗಳು ಅಭಿಪ್ರಾಯಪಟ್ಟರು.

ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಎಂ.ಕೆ. ಧನಂಜಯ್ಯ ಮಾತನಾಡಿ, ದೊಡ್ಡ ನಗರ ಆಸ್ಪತ್ರೆಗಳಲ್ಲಿ 600 ರಿಂದ 1000 ರೂಪಾಯಿಗಳವರೆಗೆ ಇರುವ ಸಲಹಾ ಶುಲ್ಕವನ್ನು ಈ ಆಸ್ಪತ್ರೆಯಲ್ಲಿ ಕೇವಲ 200 ರೂಪಾಯಿಗಳಿಗೆ ನಿಗದಿಪಡಿಸಿರುವುದು ಬಡವರು ಹಾಗೂ ರೈತರಿಗೆ ದೊಡ್ಡ ಸಹಾಯವಾಗಿದೆ ಎಂದು ಹೇಳಿದರು. ಆರ್ಥಿಕವಾಗಿ ಹಿಂದುಳಿದ ಜನರಿಗೆ ಇದು ಅತ್ಯಂತ ಅನುಕೂಲಕರ ವ್ಯವಸ್ಥೆಯಾಗಿದೆ ಎಂದರು.

ಆಸ್ಪತ್ರೆಯ ಮುಖ್ಯಸ್ಥ ಕೆ.ಟಿ. ತಿಮ್ಮೇಗೌಡ ಮಾತನಾಡಿ, ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ, ಮಧುಮೇಹ ಸಂಬಂಧಿತ ನೇತ್ರ ಸಮಸ್ಯೆಗಳ ಚಿಕಿತ್ಸೆ, ಒಪಿಡಿ ಹಾಗೂ ಲೇಸರ್ ಸೌಲಭ್ಯಗಳನ್ನು ಒಂದೇ ಸೂರಿನಡಿ ಒದಗಿಸಲಾಗುತ್ತಿದೆ ಎಂದು ಹೇಳಿದರು.

ಅತ್ಯಾಧುನಿಕ ಲೇಸರ್ ತಂತ್ರಜ್ಞಾನ ಹಾಗೂ ಹೊಲಿಗೆ ರಹಿತ ಶಸ್ತ್ರಚಿಕಿತ್ಸೆ ಮೂಲಕ ಶೀಘ್ರ ಗುಣಮುಖತೆ ಸಾಧ್ಯವಾಗುತ್ತಿದ್ದು, ಶಸ್ತ್ರಚಿಕಿತ್ಸೆಯ ನಂತರ 5 ರಿಂದ 7 ದಿನಗಳಲ್ಲೇ ರೋಗಿಗಳು ತಮ್ಮ ದೈನಂದಿನ ಕೆಲಸಕ್ಕೆ ಮರಳಬಹುದಾಗಿದೆ ಎಂದು ಅವರು ವಿವರಿಸಿದರು. ರೈತರು ಹಾಗೂ ಕೃಷಿ ಕಾರ್ಮಿಕರಿಗೆ ತಕ್ಷಣದ ಚಿಕಿತ್ಸೆ ಸೌಲಭ್ಯವೂ ಲಭ್ಯವಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ವೈದ್ಯರಾದ ಡಾ. ಅಪೂರ್ವ, ಡಾ. ಪ್ರತಿಭಾ, ಆನಂದ್, ನಾಗೇಶ್ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಪ್ರಮಾಣವಚನ

ಕೋಲಾರ

ಗ್ಲಾಸ್ ಹೌಸ್‌ಅನ್ನು ಕೆಂಪು ಮತ್ತು ಹಳದಿ ಬಣ್ಣಗಳಲ್ಲಿ ಅಲಂಕರಿಸಲಾಗಿತ್ತು, ಇದು ಕರ್ನಾಟಕದ ಧ್ವಜದ ಬಣ್ಣಗಳನ್ನು ಪ್ರತಿಬಿಂಬಿಸುತ್ತದೆ. ಜ್ಯೋತಿಷಿಯ ಸಲಹೆಯಂತೆ ವೇದಿಕೆಯನ್ನು ಪೂರ್ವಕ್ಕೆ ಮುಖ ಮಾಡಿ ಇರಿಸಲಾಗಿತ್ತು, ಇದನ್ನು ಶುಭವೆಂದು ಪರಿಗಣಿಸಲಾಗಿದೆ.

ವೇದಿಕೆಗೆ ಹೋಗುವ ಮೊದಲು, ಶಿವಕುಮಾರ್ ಪ್ರಮಾಣವಚನ ಸಮಾರಂಭಕ್ಕಾಗಿ ನೆರೆದಿದ್ದ ವಿವಿಧ ಧಾರ್ಮಿಕ ನಾಯಕರ ಆಶೀರ್ವಾದ ಪಡೆದರು. ಅವರಲ್ಲಿ ಕೆಲವರು ಅವರ ಮೇಲೆ ಹೂದಳಗಳನ್ನು ಸುರಿಸಿದರೆ, ಇತರರು ಆಶೀರ್ವಾದ ಮತ್ತು ಸದ್ಭಾವನೆಯ ಸಂಕೇತವಾಗಿ 'ರುದ್ರಾಕ್ಷ ಮಾಲೆ' ನೀಡಿದರು.

ಶಿವಕುಮಾರ್ ಅವರು ಕಂದು ಬಣ್ಣದ ರೇಷ್ಮೆ ಜುಬ್ಬಾ ಮತ್ತು ಕಾಂಗ್ರೆಸ್ ಪಕ್ಷದ ತ್ರಿವರ್ಣ ಧ್ವಜವನ್ನು ಹೊಂದಿರುವ ಶಾಲು ಧರಿಸಿದ್ದರು. ಪ್ರಮಾಣ ವಚನ ಸ್ವೀಕರಿಸುವ ಮೊದಲು ಶಿವಕುಮಾರ್ ಗಣ್ಯರನ್ನು ಸ್ವಾಗತಿಸಿದರು.

ಶಿವಕುಮಾರ್ ಅವರ ಪತ್ನಿ ಉಷಾ, ಮಗಳು ಐಶ್ವರ್ಯ ಡಿಕೆಎಸ್ ಹೆಗ್ಡೆ ಮತ್ತು ಇತರ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಿರ್ಗಮಿತ ಸಿಎಂ ಸಿದ್ದರಾಮಯ್ಯ, ಮಾಜಿ ಸಿಎಂ ವೀರಪ್ಪ ಮೊಯ್ಲಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಕರ್ನಾಟಕ ಉಸ್ತುವಾರಿ) ರಣದೀಪ್ ಸಿಂಗ್ ಸುರ್ಜೇವಾಲಾ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಮತ್ತು ರಾಜ್ಯಸಭಾ ಸದಸ್ಯ ಕೆ.ಸಿ. ವೇಣುಗೋಪಾಲ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇರಳ ಸಿಎಂ ವಿ.ಡಿ. ಸತೀಶನ್, ಹಿಮಾಚಲ ಪ್ರದೇಶ ಸಿಎಂ ಸುಖವಿಂದರ್ ಸಿಂಗ್ ಸುಖು ಮತ್ತು ಇತರರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಿದ್ದ ಗಣ್ಯರಲ್ಲಿ ಕರ್ನಾಟಕದ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ಇನ್ಫೋಸಿಸ್ ಸಹ-ಸಂಸ್ಥಾಪಕ ನಾರಾಯಣ ಮೂರ್ತಿ ಮತ್ತು ಅವರ ಪತ್ನಿ ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ; ಮಾಜಿ ಭಾರತೀಯ ಕ್ರಿಕೆಟಿಗರಾದ ಮೊಹಮ್ಮದ್ ಅಜರುದ್ದೀನ್, ಅನಿಲ್ ಕುಂಬ್ಳೆ, ಖ್ಯಾತ ನಟ ಧನಂಜಯ, ಸಂಗೀತ ನಿರ್ದೇಶಕರಾದ ಅರ್ಜುನ್ ಜನ್ಯ ಮತ್ತು ಗುರುಕಿರಣ್ ಮತ್ತು ನಟಿ-ರಾಜಕಾರಣಿ ರಮ್ಯಾ ಸೇರಿದ್ದಾರೆ.

# ಧನಾತ್ಮಕ ಯೋಚನೆಯಿಂದ ದಾರಿದ್ರ ನಿವಾರಣೆ

ಕೋಲಾರ

ಧನಾತ್ಮಕ ಯೋಚನೆ ದಾರಿದ್ರವನ್ನು ನಿವಾರಿಸಿ ಪವಿತ್ರವಾದ ಮನಸ್ಸು ನಿರ್ಮಾಣವಾಗುತ್ತದೆ. ದಿನನಿತ್ಯ ಆಧ್ಯಾತ್ಮಿಕ ಸಾಧನೆ, ಭಜನೆ, ಮಂತ್ರ ಇತರೆ ಯಾವುದೇ ಸಾಧನೆ ಮಾಡಿದರೂ ಸಮಾನ್ಯ ದಿನಗಳಿಗಿಂತ ಎರಡು ಪಟ್ಟು ಪಲಿತಾಂಶ, ಶಾಂತಿ, ನೆಮ್ಮದಿ ಸಿಗುತ್ತದೆ. ಆ ದಿನ ಮಾಡುವ ಸಾಧನೆಯಿಂದ ನಮ್ಮಲ್ಲಿರುವಂತ ಎಲ್ಲಾ ರೀತಿಯ ಅವಗುಣಗಳು ಅಧರ್ಮಗಳು, ಸಮಸ್ಯೆಗಳು ನಿರಾಯಾಸವಾಗಿ ಪರಿಹಾರವಾಗುತ್ತದೆ ಎಂದು ಎಸ್. ಎಸ್.ವೈ. ಗುರೂಜಿ ನಾರಾಯಣಸ್ವಾಮಿ ತಿಳಿಸಿದರು.

ಆರ್.ಎಂ ಗೋಲ್ಡನ್ ಸಿಟಿ ಬಡಾವಣೆಯಲ್ಲಿ ನೂತನವಾಗಿ ಪೋಸ್ಟ್ ನಾರಾಯಣಸ್ವಾಮಿಯವರಿಂದ ನಿರ್ಮಾಣವಾಗಿರುವ ಹನುಮ ಆಶ್ರಯ ಸುಜ್ಞಾನ ಧ್ಯಾನ ಮಂದಿರದಲ್ಲಿ ಮಾನವ ಅಭಿವೃದ್ಧಿ ಯೋಗಾ ಟ್ರಸ್ಟ್ ಹಾಗೂ ಸಿದ್ದ ಸಮಾಧಿ ಯೋಗ ವತಿಯಿಂದ ಹಮ್ಮಿಕೊಂಡಿದ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡುತ್ತಾ ಮಾತನಾಡಿದರು.



ಮಾನವರಲ್ಲಿನ ಸಮಸ್ಯೆಗಳನ್ನು ಪರಿಹಾರ ಮಾಡೋದಕ್ಕೆ ನಾನಾ ರೀತಿಯ ಕಾರ್ಯಕ್ರಮಗಳನ್ನು ಮಾಡಿದರೂ ಸಮಸ್ಯೆಗಳು ಕಡಿಮೆ ಆಗುತ್ತಿರಲಿಲ್ಲ. ಇದಕ್ಕೆ ಹಿಂದಿನ ಋಷಿಮುನಿಗಳು ಕಂಡುಹಿಡಿದ ಉಪಾಯವೇ ಧನಾತ್ಮಕ ಯೋಚನೆ ಹಾಗೂ ಧನಾತ್ಮಕ ಕೆಲಸಗಳನ್ನು ಮಾಡುವುದರಿಂದ ಎಲ್ಲವೂ ನಿವಾರಣೆಯಾಗುತ್ತದೆ. ದ್ವಿಗುಣ ಫಲಿತಾಂಶದಿಂದ ಎಲ್ಲಾ ಪರಿಹಾರವಾಗುತ್ತದೆ ಎಂಬುದನ್ನು ನಮಗೆ ಕೊಟ್ಟು ಹೋಗಿದ್ದಾರೆ. ಸಾಧನೆಯಲ್ಲಿ ಯೋಗ ಸಾಧನೆ, ಭಕ್ತಿ ಯೋಗ, ಭಜನೆ, ಪ್ರಾಣಾಯಾಮ, ಸಂಮ್ಮೋಹಿನಿ ಇತರೆ ಕಾರ್ಯಕ್ರಮಗಳನ್ನು ನಡೆಸಿಕೊಡಲಾಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯೋಪಾಧ್ಯಾಯನಿ ಚೌಡಮ್ಮ, ವೆಂಕಟಮ್ಮ, ಕೋಲಾರದ ಸರೋಜಮ್ಮ, ಲಕ್ಷ್ಮಮ್ಮ, ಶಾರದಮ್ಮ, ಶಾಂತಮ್ಮ, ಸರಸ್ವತಮ್ಮ, ವೆಂಕಟಮ್ಮ, ಬೆಮೆಲ್ ಡಾಕ್ಟರ್ ಶಿವಣ್ಣ, ಗಾಂಡ್ಲಹಳ್ಳಿ ಬಿ ನಾರಾಯಣಸ್ವಾಮಿ, ಪುವಂಡಹಳ್ಳಿ ವೆಂಕಟೇಶಪ್ಪ, ಸಂಜೀವಪ್ಪ, ಅರಣ್ಯ ಇಲಾಖೆ ವೆಂಕಟರಮ್, ಬಂಗಾರಪೇಟೆ ಮಾರುತಿ ಇತರರು ಭಾಗವಹಿಸಿದ್ದರು.

# ಮಾಗಡಿಯಲ್ಲಿ ಭೋವಿ ಸಮುದಾಯದಿಂದ ಸಚಿವ ಸ್ಥಾನಕ್ಕೆ ಒತ್ತಾಯ

ಮಾಗಡಿ

ಸಚಿವ ಸಂಪುಟ ರಚನೆಯ ಸಂದರ್ಭದಲ್ಲಿ ಭೋವಿ ಸಮುದಾಯದ ಹಿರಿಯ ರಾಜಕಾರಣಿ ಹಾಗೂ ಪುಲಕೇಶಿ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎ.ಸಿ. ಶ್ರೀನಿವಾಸ್ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮಾಗಡಿ ತಾಲೂಕು ಭೋವಿ ಸಮುದಾಯದ ಅಧ್ಯಕ್ಷ ಬಿ.ಟಿ. ವೆಂಕಟೇಶ್ ಅವರು ಮನವಿ ಮಾಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೂತನ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಹಾಗೂ ಸಚಿವ ಸಂಪುಟಕ್ಕೆ ಅಭಿನಂದನೆ ಸಲ್ಲಿಸಿದರು.

ಭೋವಿ ಸಮಾಜದ ಹಿರಿಯ ಮುಖಂಡರಾಗಿರುವ ಎ.ಸಿ. ಶ್ರೀನಿವಾಸ್ ಅವರು ಕಳೆದ 30 ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಹಲವಾರು ಹುದ್ದೆಗಳನ್ನು ಅಲಂಕರಿಸಿ ಸಮುದಾಯ ಹಾಗೂ ಸಮಾಜಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಅವರು ಹೇಳಿದರು.

ಮಹದೇವಪುರ ವಿಧಾನಸಭಾ ಕ್ಷೇತ್ರದಿಂದ ಎರಡು ಬಾರಿ ಚುನಾವಣೆಯಲ್ಲಿ ಸ್ಪರ್ಧಿಸಿ ಸೋಲನ್ನು ಅನುಭವಿಸಿದರೂ ಪಕ್ಷ ನಿಷ್ಠೆಯಿಂದ ಉಳಿದುಕೊಂಡು ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಅವರು ತಿಳಿಸಿದರು. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪಕ್ಷದ ಹಿರಿಯರ ಸಲಹೆಯಂತೆ ಪುಲಕೇಶಿ ನಗರ ಕ್ಷೇತ್ರದಿಂದ ಸ್ಪರ್ಧಿಸಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಅವರು ಆಗ್ರಹಿಸಿದರು.

ಈ ಕುರಿತು ಬೆಂಗಳೂರು ದಕ್ಷಿಣ ಜಿಲ್ಲಾ ಭೋವಿ ಸಮಿತಿ ಹಾಗೂ ಮಾಗಡಿ ತಾಲೂಕು ಭೋವಿ ಸಮಾಜದ ಮುಖಂಡರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಮನವಿ ಮಾಡುವುದಾಗಿ ಅವರು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಕನಕರಾಜು, ರಾಮನಗರ ತಾಲೂಕು ಅಧ್ಯಕ್ಷ ಗಿರೀಶ್, ಮಾಜಿ ಪುರಸಭಾ ಅಧ್ಯಕ್ಷ ನಾಗರಾಜು, ತಿರುಮಲೆ ಯುವ ಮುಖಂಡ ಗೋವಿಂದರಾಜು, ಅರ್ಚಕ ಶಿವ, ರಂಗನಾಥ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಕ್ರಮ ಕೆರೆ ಮಣ್ಣು ಸಾಗಾಟ: 7 ಟಿಪ್ಪರ್ ವಶ



**ಬಾಶೆಟ್ಟಹಳ್ಳಿ ಭಾಗದಲ್ಲಿ ಅಕ್ರಮ ಮಣ್ಣು ಸಾಗಾಟ ನಡೆಯುತ್ತಿದೆ ಎಂಬ ಸಾರ್ವಜನಿಕ ದೂರುಗಳು ಹಾಗೂ ಪೊಲೀಸ್ ಠಾಣೆ ಆಯೋಜಿಸುತ್ತಿರುವ ಗ್ರಾಮ ಸಭೆಗಳ ಮೂಲಕ ಸಿಕ್ಕ ಮಾಹಿತಿಯ ಆಧಾರದ ಮೇಲೆ ಈ ದಂಧೆ ಬಹಿರಂಗವಾಗಿದೆ. ಸಾರ್ವಜನಿಕರ ಮಾಹಿತಿ ಆಧಾರವಾಗಿ ತಕ್ಷಣ ಕ್ರಮ ಕೈಗೊಂಡ ಪೊಲೀಸರು ಅಕ್ರಮ ಚಟುವಟಿಕೆಗೆ ಕಡಿವಾಣ ಹಾಕಿದ್ದಾರೆ.**

ದೊಡ್ಡಬಳ್ಳಾಪುರ

ಬಾಶೆಟ್ಟಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಅಕ್ರಮವಾಗಿ ಕೆರೆ ಮಣ್ಣು ಅಗೆದು ಸಾಗಿಸುತ್ತಿದ್ದ ದಂಧೆ ಬೆಳಕಿಗೆ ಬಂದಿದೆ. ಖಚಿತ ಮಾಹಿತಿಯ ಆಧಾರದ ಮೇಲೆ ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಿದ ಪೊಲೀಸರು, ಸುಮಾರು 7 ಟಿಪ್ಪರ್ ಲಾರಿಗಳನ್ನು ವಶಕ್ಕೆ ಪಡೆದಿದ್ದಾರೆ.

ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಇನ್ಸ್‌ಪೆಕ್ಟರ್ ಡಾ. ನವೀನ್ ಕುಮಾರ್ ಎಂ.ಬಿ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ, ಪರವಾನಗಿ ಇಲ್ಲದೆ ಕೆರೆಯಿಂದ ಮಣ್ಣು ತೆಗೆದು ಸಾಗಿಸುತ್ತಿದ್ದ ಲಾರಿಗಳನ್ನು ಚಾಲಕರ ಸಮೇತ ವಶಕ್ಕೆ ಪಡೆಯಲಾಗಿದೆ ಎಂದು ಮೂಲಗಳು ತಿಳಿಸಿವೆ.

ಬಾಶೆಟ್ಟಹಳ್ಳಿ ಭಾಗದಲ್ಲಿ ಅಕ್ರಮ ಮಣ್ಣು ಸಾಗಾಟ ನಡೆಯುತ್ತಿದೆ ಎಂಬ ಸಾರ್ವಜನಿಕ ದೂರುಗಳು ಹಾಗೂ ಪೊಲೀಸ್ ಠಾಣೆ ಆಯೋಜಿಸುತ್ತಿರುವ ಗ್ರಾಮ ಸಭೆಗಳ ಮೂಲಕ ಸಿಕ್ಕ ಮಾಹಿತಿಯ ಆಧಾರದ ಮೇಲೆ ಈ ದಂಧೆ ಬಹಿರಂಗವಾಗಿದೆ. ಸಾರ್ವಜನಿಕರ ಮಾಹಿತಿ ಆಧಾರವಾಗಿ ತಕ್ಷಣ ಕ್ರಮ ಕೈಗೊಂಡ ಪೊಲೀಸರು ಅಕ್ರಮ ಚಟುವಟಿಕೆಗೆ ಕಡಿವಾಣ ಹಾಕಿದ್ದಾರೆ.

ಅಕ್ರಮವಾಗಿ ತೆಗೆದುಕೊಳ್ಳುವ ಕೆರೆ ಮಣ್ಣು ಕೃಷಿ ಜಮೀನಿನ ಫಲವತ್ತತೆ ಹೆಚ್ಚಿಸಲು ಬಳಸಲಾಗುತ್ತದೆ ಎಂದು ಹೇಳಲಾಗುತ್ತಿದರೂ, ಅದನ್ನು ಪರವಾನಗಿ ಇಲ್ಲದೆ ವಾಣಿಜ್ಯ ಉದ್ದೇಶಕ್ಕೆ ಸಾಗಿಸುವುದು ಕಾನೂನುಬಾಹಿರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೆರೆ ಮಣ್ಣು ನೈಸರ್ಗಿಕವಾಗಿ ಪೋಷಕಾಂಶಗಳಿಂದ ಸಮೃದ್ಧವಾಗಿದ್ದು, ನೈಟ್ರೋಜನ್, ಫಾಸ್ಫರಸ್, ಪೊಟ್ಯಾಸಿಯಮ್ ಸೇರಿದಂತೆ ಹಲವು ಸೂಕ್ಷ್ಮ ಪೋಷಕಾಂಶಗಳನ್ನು ಹೊಂದಿದೆ. ಇದು ಮಣ್ಣಿನ ತೇವಾಂಶ ಹಿಡಿದಿಡುವ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ಬೆಳೆಗಳ ಇಳುವರಿಗೂ ಸಹಾಯಕವಾಗುತ್ತದೆ. ಆದರೆ ಇಂತಹ ಮಣ್ಣನ್ನು ನಿಯಮ ಉಲ್ಲಂಘಿಸಿ ವ್ಯಾಪಾರ ಉದ್ದೇಶಕ್ಕೆ ಬಳಸುತ್ತಿರುವುದು ಗಂಭೀರ ವಿಷಯವಾಗಿದೆ ಎಂದು ಕೃಷಿ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಪೊಲೀಸರು ವಶಕ್ಕೆ ಪಡೆದ ಲಾರಿಗಳ ಕುರಿತು

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy